# ರಾಜ್ಯ ಮತ್ತು ಕೇಂದ್ರ ಬಜೆಟ್ ವಿವರಣೆ: 2023-24




WWW.NAMMAKPSC.COM

KPSC ಪರೀಕ್ಷೆಗಳಿಗೆ

# NAMMAKPSC ACADEMY

## IN ASSOCIATION WITH

# BANGALORE IAS ACADEMY

# ರಾಜ್ಯ ಮತ್ತು ಕೇಂದ್ರ ಬಜೆಟ್ ವಿವರಣೆ

# 2023-2024


## ಪರಿವಿಡಿ


ಕರ್ನಾಟಕ ರಾಜ್ಯ ಬಜೆಟ್ (ಜುಲೈ) 2023-2024 ........ 3

ಕರ್ನಾಟಕ ರಾಜ್ಯ ಬಜೆಟ್ 2023-24 (ಫೆಬ್ರುವರಿ) ಮುಖ್ಯಾಂಶಗಳು ........ 39


ಕೇಂದ್ರ ಬಜೆಟ್ 2023 ಮುಖ್ಯಾಂಶಗಳು ........ 54









# ಕರ್ನಾಟಕ ರಾಜ್ಯ ಬಜೆಟ್ (ಜುಲೈ) 2023-2024




**ಬಜೆಟಿನ ಪರಿಚಯ:**

- ಬಜೆಟನ್ನು ಹಣಕಾಸಿನ ಮಂತ್ರಿ ಮಂಡಿಸುತ್ತಾರೆ, ಮುಖ್ಯಮಂತ್ರಿಗಳಲ್ಲ
- ಬಜೆಟ್ ಅನ್ನುವ ಶಬ್ದವನ್ನು **ಬ್ಯಾಗ್ಗೆಟ್ಟಿ** ಎಂಬ **ಫ್ರೆಂಚ್ ಭಾಷೆಯಿಂದ** ತೆಗೆದುಕೊಳ್ಳಲಾಗಿದೆ. ಇದರರ್ಥ ಚರ್ಮದ ಚೀಲ.ಪಾರಂಪರಿಕವಾಗಿ ಬಜೆಟ್ ಅನ್ನು ಲೆದರ್ ಬ್ಯಾಗಿನಲ್ಲಿ ತಂದು ಮಂಡಿಸಲಾಗುತ್ತಿತ್ತು ಆದ್ದರಿಂದ ಬಜೆಟ್ ಅನ್ನುವ ಹೆಸರು ಬಂದಿತು.
- ಮೊದಲ ಬಜೆಟನ್ನು **1869 ನಲ್ಲಿ ಜೇಮ್ಸ್ ವಿಲ್ಸನ್** ಮಂಡಿಸಿದ್ದರು, ಸ್ವಾತಂತ್ರ್ಯ ಬಂದ ನಂತರ 1947 ರಲ್ಲಿ **ಷಣ್ಮುಗಂ ಶೆಟ್ಟಿ** ಅವರು ಮಂಡಿಸಿದ್ದರು.
- ನಮ್ಮ ಸಂವಿಧಾನದಲ್ಲಿ ಬಜೆಟನ್ನು annual financial statement (ಮುಂಗಡ ಪತ್ರ)ಎಂದು ಉಲ್ಲೇಖಿಸಲಾಗಿದೆ. ಸಂವಿಧಾನದಲ್ಲಿ **ಕೇಂದ್ರ ಬಜೆಟನ್ನು ವಿಧಿ 112 ರಲ್ಲಿ ಮತ್ತು ರಾಜ್ಯ ಬಜೆಟನ್ನು ವಿಧಿ 202 ರಲ್ಲಿ ಪ್ರಸ್ತಾಪಿಸಲಾಗಿದೆ.**




- ಕರ್ನಾಟಕದ ಇತಿಹಾಸದಲ್ಲಿಯೇ **ಅತಿ ಹೆಚ್ಚು ಬಾರಿ** ಬಜೆಟನ್ನು ಮಂಡಿಸಿದವರು ಮುಖ್ಯಮಂತ್ರಿ **ಸಿದ್ದರಾಮಯ್ಯನವರು.** 14 ಬಾರಿ ಮಂಡನೆ ಮಾಡಿದ್ದಾರೆ. ಇದಕ್ಕೂ ಮೊದಲ **ರಾಮಕೃಷ್ಣ ಹೆಗ್ಡೆ** ಅವರು 13 ಬಾರಿ ಬಜೆಟನ್ನು ಮಂಡನೆ ಮಾಡಿದ್ದರು.

## *ಆಯವ್ಯಯ ಪಕ್ಷಿನೋಟ*

- ಆಯವ್ಯಯ ಗಾತ್ರ (ಸಂಚಿತ ನಿಧಿ): 3, 27,747 ಕೋಟಿ ರೂ.
- ಒಟ್ಟು ಸ್ವೀಕೃತಿ: 3, 24,478 ಕೋಟಿ ರೂ.
- ರಾಜಸ್ವ ಸ್ವೀಕೃತಿ: 2, 38,410 ಕೋಟಿ ರೂ.
- ಸಾರ್ವಜನಿಕ ಋಣ: 85,818 ಕೋಟಿ ರೂ.
- ಬಂಡವಾಳ ಸ್ವೀಕೃತಿ: 86,068 ಕೋಟಿ ರೂ.

- ಒಟ್ಟು ವೆಚ್ಚ - 3, 27,747 ಕೋಟಿ ರೂ.
- ರಾಜಸ್ವ ವೆಚ್ಚ : 2, 50,933 ಕೋಟಿ ರೂ.
- ಬಂಡವಾಳ ವೆಚ್ಚ : 54,374 ಕೋಟಿ ರೂ.
- ಸಾಲ ಮರುಪಾವತಿ: 22.441 ಕೋಟಿ ರೂ.

## *5 ಗ್ಯಾರಂಟಿ ಯೋಜನೆಗಳು:*

### 1.'ಶಕ್ತಿ' ಯೋಜನೆ:




- ರಾಜ್ಯ ಸರ್ಕಾರದ ಸ್ವಾಮ್ಯದ ಎಲ್ಲಾ 4 ಸಾರಿಗೆ ನಿಗಮಗಳ ಬಸ್ ಗಳಲ್ಲಿ ಮಹಿಳೆಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರಿಗೆ ಉಚಿತ ಪ್ರಯಾಣ ಸೌಲಭ್ಯ, ಪ್ರತಿ ದಿನ ಸರಾಸರಿ 50 ರಿಂದ 60 ಲಕ್ಷ ಮಹಿಳಾ ಪ್ರಯಾಣಿಕರಿಗೆ ಅನುಕೂಲವಾಗಲಿದೆ.
- ಹವಾ ನಿಯಂತ್ರಿತ ಬಸ್ಸುಗಳು ಮತ್ತು ಐಷಾರಾಮಿ ಬಸ್ಸುಗಳನ್ನು ಹೊರತುಪಡಿಸಿ ಎಲ್ಲಾ ಕೆ ಎಸ್ಆರ್ಟಿಸಿ ಬಸ್ಸುಗಳಲ್ಲೂ ಪ್ರಯಾಣ ಮಾಡಬಹುದು.
- **ಪ್ರಾರಂಭ** : 2023 ಜೂನ್ 11
- ಈ ಯೋಜನೆಯು ಶೇ. 94 ರಷ್ಟು ಮಹಿಳಾ ಪ್ರಯಾಣಿಕರಿಗೆ ಅನುಕೂಲಕರವಾಗಲಿದೆ.




### 2. 'ಗೃಹ ಜ್ಯೋತಿ':

- ವಾರ್ಷಿಕ ವಿದ್ಯುತ್ ಬಿಲ್ಲು ಸರಾಸರಿಯಲ್ಲಿ200 ಯೂನಿಟ್ ಒಳಗೆ ಬಳಸಿದ್ದರೆ ಅಂತಹ ಕುಟುಂಬಕ್ಕೆ ಉಚಿತ ವಿದ್ಯುತ್ ನೀಡಲಾಗುವುದು.
- ವಾರ್ಷಿಕ ಸರಾಸರಿ ಮೇಲೂ ಕೂಡ 10% ಅನ್ನು ಉಚಿತ ಎಂದು ಪರಿಗಣಿಸಲಾಗುವುದು.

- 2023 ಜುಲೈನಿಂದ ಬಳಕೆಯು ಉಚಿತವಾಗಿರುತ್ತದೆ.
- 2 ಕೋಟಿಗೂ ಹೆಚ್ಚು ಗ್ರಾಹಕರಿಗೆ ಅನುಕೂಲವಾಗಲಿದೆ:

**3. ಗೃಹ ಲಕ್ಷ್ಮಿ ಯೋಜನೆ:**




- **ಯೋಜನೆಯ ಫಲಾನುಭವಿಗಳು:** ರಾಜ್ಯದಲ್ಲಿರುವ ಬಿಪಿಎಲ್ ಹಾಗೂ ಎಪಿಎಲ್ ಕುಟುಂಬಗಳ ಎಪಿಎಲ್ ಹಾಗೂ ಬಿಪಿಎಲ್ ಕಾರ್ಡ್ ಹೊಂದಿರುವವರು, ಸಾಮಾಜಿಕ ಭದ್ರತಾ ಪಿಂಚಣಿ ಪಡೆಯುವ ಯಜಮಾನಿ (ಮನೆಯ ಒಡತಿ).
- ಕುಟುಂಬದ ಯಜಮಾನಿಗೆ ಮಾಸಿಕ 2,000 ರೂ. ನೆರವು ನೇರ ವರ್ಗಾವಣೆ ಮಾಡಲಾಗುವುದು. ಈ ಯೋಜನೆಯ ಸೌಲಭ್ಯ ಪಡೆಯಲು ಮಹಿಳೆಯರು ಅರ್ಜಿ ಸಲ್ಲಿಸಬೇಕು. ಇದರಲ್ಲಿ ಮನೆಯ ಯಜಮಾನಿ ಯಾರು ಎಂಬುದನ್ನು ಘೋಷಿಸಬೇಕು.
- ಬ್ಯಾಂಕ್ ಖಾತೆ ಸಂಖ್ಯೆ, ಆಧಾರ್ ಸಂಖ್ಯೆ ಮಾಹಿತಿ ಒದಗಿಸಬೇಕು.

**4. ಅನ್ನ ಭಾಗ್ಯ:**




- ಎಲ್ಲ ಅರ್ಹ ಫಲಾನುಭವಿಗಳಿಗೆ 5 ಕೆ.ಜಿ. ಹೆಚ್ಚುವರಿ ಆಹಾರಧಾನ್ಯ ವಿತರಣೆ ಮಾಡಲಾಗುವುದು.
- ಆಹಾರಧಾನ್ಯ ಲಭ್ಯವಾಗುವವರೆಗೆ ಪ್ರತಿ ಫಲಾನುಭವಿಗೆ 170 ರೂ. ನಂತೆ ಡಿಬಿಟಿ ಮೂಲಕ ನಗದು ವರ್ಗಾವಣೆ ಮಾಡಲಾಗುವುದು.
- ಇದರ ಅಡಿಯಲ್ಲಿಅಂತ್ಯೋದಯ ಕಾರ್ಡುದಾರರು ಮತ್ತು ಬಿಪಿಎಲ್ ಕುಟುಂಬಗಳಿಗೆ ಪ್ರತಿ ವ್ಯಕ್ತಿಗೆ ತಿಂಗಳಿಗೆ 10 ಕೆಜಿ ಅಕ್ಕಿಯನ್ನು ಉಚಿತವಾಗಿ ನೀಡಲಾಗುತ್ತದೆ.

- ವೆಚ್ಚ :ವಾರ್ಷಿಕ 10,000 ಕೋಟಿ ರೂ.

## 5. ಯುವ ನಿಧಿ:




- ನಿರುದ್ಯೋಗಿ ಪದವೀಧರರಿಗೆ ಮಾಸಿಕ 3,000 ರೂ. ಹಾಗೂ ಡಿಪ್ಲೊಮಾ ಪಡೆದವರಿಗೆ ಮಾಸಿಕ 1500 ರೂ. ನಿರುದ್ಯೋಗ ಭತ್ಯೆ ನೀಡುವ ಯೋಜನೆಯಾಗಿದೆ.
- 2022-23ನೇ ಶೈಕ್ಷಣಿಕ ವರ್ಷದಲ್ಲಿವೃತ್ತಿಪರ ಕೋರ್ಸುಗಳೂ ಸೇರಿದಂತೆ ಎಲ್ಲವಿಧದ ಪದವೀಧರ ಯುವಕ-ಯುವತಿಯರು, ಡಿಪ್ಲೊಮಾ ಹೊಂದಿದವರಿಗೆ ಈ ಯೋಜನೆ ಅನ್ವಯಿಸುತ್ತದೆ.
- ಪದವಿ ಪಡೆದು 180 ದಿನಗಳಾದರೂ ಉದ್ಯೋಗ ದೊರೆಯದ ಕನ್ನಡಿಗ ಪದವೀಧರರಿಗೆ 24 ತಿಂಗಳ ಅವಧಿಗೆ ಮಾಸಿಕ 3000 ರೂ. ಹಾಗೂ ಡಿಪ್ಲೊಮಾದಾರರಿಗೆ ಮಾಸಿಕ 1500 ರೂ. ನಿರುದ್ಯೋ ಗ ಭತ್ಯೆ ನೀಡಲಾಗುವುದು. 6 ತಿಂಗಳ ಒಳಗೆ ಖಾಸಗಿ/ಸರ್ಕಾರಿ ಕೆಲಸ ದೊ ರೆತರೆ ಅಥವಾ ಅರ್ಜಿ ಸಲ್ಲಿಸಿದ ನಂತರ ಕೆಲಸ ಸಿಕ್ಕ ರೂ ಕೂಡ ಅಂತಹವರಿಗೆ ಈ ಯೋಜನೆ ಅನ್ವಯವಾಗುವುದಿಲ್ಲ.
- ಎರಡು ವರ್ಷಗಳವರೆಗೆ ಯೋಜನೆಯಡಿ ನಿರುದ್ಯೋಗ ಭತ್ಯೆ ಪಡೆಯಬಹುದು. ಎರಡು ವರ್ಷಕ್ಕೂ ಮೊದಲೇ ಉದ್ಯೋಗ ದೊರೆತರೆ ಭತ್ಯೆ ಪಾವತಿ ಸ್ಥಗಿತಗೊಳಿಸಲಾಗುತ್ತದೆ. ನಿರುದ್ಯೋಗ ಸ್ಥಿತಿಯ ಕುರಿತು ಸ್ವತಂತ್ರ ಪರಿಶೀಲನೆ ನಡೆಸಲಾಗುತ್ತದೆ.
- ಉದ್ಯೋಗ ದೊರಕಿದ ಕುರಿತು ತಪ್ಪು ಮಾಹಿತಿ ನೀಡಿದರೆ ಅಥವಾ ಘೋಷಣೆ ಮಾಡದಿದ್ದರೆ ದಂಡ ವಿಧಿಸಲಾಗುತ್ತದೆ.
- ನೇರ ನಗದು ಪಾವತಿ ವ್ಯವಸ್ಥೆಮೂಲಕ ನಿರುದ್ಯೋ ಗ ಭತ್ಯೆ ಪಾವತಿ ಮಾಡಲಾಗುತ್ತದೆ. ಫಲಾನುಭವಿಗಳು ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗುತ್ತದೆ.

## *ಕೃಷಿ ಮತ್ತು ಪೂರಕ ಚಟುವಟಿಕೆಗಳು*

### ಕೃಷಿ ಭಾಗ್ಯ ಯೋಜನೆ




- ಈ ಯೋಜನೆಯನ್ನು **ಮಹಾತ್ಮಾ ಗಾಂಧಿ ಉದ್ಯೋಗ ಖಾತರಿ ಯೋಜನೆ(ಮನರೇಗಾ) ಯೊಂದಿಗೆ ಸಂಯೋಜಿಸಿ** 100 ಕೋಟಿ ರೂ. ವೆಚ್ಚದಲ್ಲಿ ಮರುಜಾರಿ ಮಾಡಲಾಗಿದೆ.
- ಮಳೆ ಆಶ್ರಿತ ರೈತರನ್ನು ಕೇಂದ್ರೀಕರಿಸಿ ಮಳೆ ನೀರು ಸಂಗ್ರಹಣೆ ಮತ್ತು ಪುನರ್ ಬಳಕೆಗೆ ಆದ್ಯತೆ ನೀಡಿ ಕೃಷಿ ಭಾಗ್ಯ ಯೋಜನೆಯನ್ನು 2014-15 ಲಿನಿಂದ ಜಾರಿಗೆ ತರಲಾಗಿದೆ.
- **ಯೋಜನೆಯ ಉದ್ದೇಶ**:ರಾಜ್ಯದ ಮಳೆಯಾಶ್ರಿತ ಕೃಷಿಯನ್ನು ಸುಸ್ಥಿರ ಕೃಷಿಯಾಗಿ ರೂಪಾಂತರಗೊಳಿಸುವುದು. ಸಮರ್ಪಕ ಮಳೆ ನೀರಿನ ಸಂಗ್ರಹಣೆ ಹಾಗೂ ಉಪಯುಕ್ತ ಬಳಕೆ ಪದ್ಧತಿಯಿಂದ ಕೃಷಿ ಉತ್ಪಾದಕತೆಯನ್ನು ಉತ್ತಮ ಪಡಿಸುವುದು ಮತ್ತು ಆದಾಯವನ್ನು ಹೆಚ್ಚಿಸುವುದು. ಬಿದ್ದ ಮಳೆ ನೀರನ್ನು ವ್ಯರ್ಥ ಮಾಡದೆ ಆ ಸ್ಥಳದಲ್ಲಿ ಕೃಷಿ ಹೊಂಡ ತೆಗೆದು ಜಲ ಸಂಗ್ರಹಿಸಿ ಹಂತಗಳಲ್ಲಿ ರಕ್ಷಣಾತ್ಮಕ ನೀರಾವರಿ ಒದಗಿಸುವುದು.
- ಕೃಷಿ ಭಾಗ್ಯ ಯೋಜನೆಯಲ್ಲಿ ಹಸಿರು ಮನೆ ನಿರ್ಮಾಣ ಮಾಡಲು ಆರ್ಥಿಕ ಸಹಾಯ ಒದಗಿಸಲಾಗುತ್ತಿದೆ. ಈ ಯೋಜನೆಯಲ್ಲಿ ಪರಿಶಿಷ್ಟ ಜಾತಿ ಮತ್ತು ವರ್ಗದವರಿಗೆ ಶೇ.90 ರಷ್ಟು ಇತರೆ ವರ್ಗದವರಿಗೆ ಶೇ.50 ರಷ್ಟು ಸಹಾಯಧನ ಒದಗಿಸಲಾಗುತ್ತಿದೆ.

### 'ನವೋದ್ಯಮ'

- ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ ಮತ್ತು ಕೃಷಿ ಮಾರುಕಟ್ಟೆಗೆ ಸಂಬಂಧಿಸಿದ ವಲಯಗಳಲ್ಲಿ, ನಾವೀನ್ಯತೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕೃಷಿ ಉದ್ಯಮಗಳಿಗೆ ಉತ್ತೇಜನ ನೀಡಲು `ನವೋದ್ಯಮ ಎಂಬ ಹೊಸ ಯೋಜನೆಯಡಿ 10 ಕೋಟಿ ರೂ. ಒದಗಿಸಲಾಗುವುದು.

### ರೈತ ಉತ್ಪಾದಕ ಸಂಸ್ಥೆಗಳನ್ನು ಬಲಪಡಿಸುವ ಕ್ರಮಗಳು:

- **ರೈತ ಉತ್ಪನ್ನಗಳಿಗೆ ಏಕೀಕೃತ ಬ್ರಾಂಡಿಂಗ್:**ರೈತರು ಬೆಳೆದ ಉತ್ಪನ್ನಗಳನ್ನು ರಾಜ್ಯ, ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ 'ನಂದಿನಿ' ಮಾದರಿಯಲ್ಲಿ ರೈತ ಉತ್ಪನ್ನಗಳಿಗೆ ಏಕೀಕೃತ ಬ್ರಾಂಡಿಂಗ್ ವ್ಯವಸ್ಥೆ ರೂಪಿಸಲಾಗುವುದು.
- **ಸೀಡ್ ಕ್ಯಾಪಿಟಲ್ ಯೋಜನೆ:** ರೈತ ಉತ್ಪಾದಕ ಸಂಸ್ಥೆಗಳನ್ನು ಬಲಪಡಿಸಲು ಹಿಂದುಳಿದ ತಾಲ್ಲೂಕುಗಳ 100 ರೈತ ಉತ್ಪಾದಕ ಸಂಸ್ಥೆಗಳಿಗೆ ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕುಗಳು ನೀಡುವ ತಲಾ 20 ಲಕ್ಷ ರೂ. ವರೆಗಿನ ಸಾಲಕ್ಕೆ ಶೇ.4 ರ ಬಡ್ಡಿ ಸಹಾಯಧನ ನೀಡಲು ತೀರ್ಮಾನಿಸಲಾಗಿದೆ.

- ರೈತ ಉತ್ಪಾದಕ ಸಂಸ್ಥೆಗಳ ಉತ್ಪನ್ನಗಳನ್ನು ರಫ್ತು ಮಾಡಲು ಅನುಕೂಲವಾಗುವಂತೆ ಗೋದಾಮು, ಶೀತಲಗೃಹ ನಿರ್ಮಾಣ ಮತ್ತು ಇತರ ಮೂಲಸೌಕರ್ಯ ಸೃಜನೆಗೆ ಯೋಜನಾ ವೆಚ್ಚದ ಗರಿಷ್ಠ ಶೇ. 20ರಷ್ಟು, ಒಂದು ಕೋಟಿ ರೂ. ಮೀರದಂತೆ ಆರಂಭಿಕ ಬಂಡವಾಳ ಒದಗಿಸಲಾಗುವುದು.
- **ರಾಜ್ಯದಲ್ಲಿ ಬೆಳೆದ ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳ ರಫ್ತು ಉತ್ತೇಜನಕ್ಕೆ** ಕೆಪೆಕ್ ಸಂಸ್ಥೆಯ ಮೂಲಕ ರೈತ ಉತ್ಪಾದಕ ಸಂಸ್ಥೆಗಳು, ನವೋದ್ಯಮಿಗಳು ಮತ್ತು ಕಿರು ಆಹಾರ ಸಂಸ್ಕರಣಾ ಉದ್ದಿಮೆದಾರರಿಗೆ ಬೆಂಬಲ ನೀಡಲು ನೆರವು ಘೋಷಿಸಲಾಗಿದೆ

**ಕೃಷಿ ಯಾಂತ್ರೀಕರಣಕ್ಕೆ ಪ್ರೋತ್ಸಾಹ;**

- ಕೃಷಿ ಯಂತ್ರಧಾರೆ ಕೇಂದ್ರಗಳನ್ನು ಬಲಪಡಿಸಲು 100 ಹೈಟೆಕ್ ಹಾರ್ವೆಸ್ಟರ್ ಹಬ್ ಸ್ಥಾಪನೆಗೆ ಅನುದಾನ.

**ತೋಟಗಾರಿಕೆ**

ರೈತರ ಆದಾಯವನ್ನು ಹೆಚ್ಚಿಸುವುದರಲ್ಲಿ ತೋಟಗಾರಿಕಾ ಬೆಳೆಗಳು ಪ್ರಮುಖ ಪಾತ್ರ ವಹಿಸುತ್ತವೆ.

1. ತೋಟಗಾರಿಕಾ ವಲಯದಲ್ಲಿನ ರಾಜ್ಯದ ಸಾಮರ್ಥ್ಯವನ್ನು ಹೆಚ್ಚಿಸಲು ತೆಂಗು, ಅಡಿಕೆ, ದ್ರಾಕ್ಷಿ, ದಾಳಿಂಬೆ, ಮಾವು ಮತ್ತಿತರ ಹಣ್ಣು, ತರಕಾರಿ, ಹೂವುಗಳು ಸೇರಿದಂತೆ ತೋಟಗಾರಿಕಾ ಬೆಳೆಗಳ ಉತ್ಪಾದನೆ, ಸಂಸ್ಕರಣೆ, ಬ್ರಾಂಡಿಂಗ್ ಮತ್ತು ರಫ್ತಿಗೆ ಹೆಚ್ಚಿನ ಒತ್ತು.
2. 2023-24ನೇ ಸಾಲಿನಲ್ಲಿ ರೋಗ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಲಾಗುವುದು. ತೋಟಗಾರಿಕಾ ಉತ್ಪನ್ನಗಳ ಸಂಸ್ಕರಣೆಗಾಗಿ ಎಂಟು ಶೀತಲ ಘಟಕಗಳ ನಿರ್ಮಾಣ.
3. ಅನನ್ಯವಾದ ರುಚಿ ಮತ್ತು ಕಂಪನ್ನು ಹೊಂದಿರುವ ಚಿಕ್ಕಮಗಳೂರು, ಕೊಡಗು ಮತ್ತು ಬಾಬಾ ಬುಡನಗಿರಿಯ ಅರೇಬಿಕಾ ಕಾಫಿ ವೈವಿಧ್ಯಗಳು GI Tag ಹೊಂದಿವೆ. ರಾಜ್ಯದ ಕಾಫಿಯನ್ನು ಇನ್ನಷ್ಟು ಪ್ರಚುರಪಡಿಸಿ ಜನಪ್ರಿಯಗೊಳಿಸಲು ಮತ್ತು ಕಾಫಿ ಎಕೋ ಟೂರಿಸಂ ಅನ್ನು ಉತ್ತೇಜಿಸಲು ಕರ್ನಾಟಕದ ಕಾಫಿಗೆ ಬ್ರಾಂಡಿಂಗ್ ಮಾಡಲು ಕ್ರಮ
4. ಮೈಸೂರು ಮಲ್ಲಿಗೆ, ನಂಜನಗೂಡು ರಸಬಾಳೆ ಹಾಗೂ ಮೈಸೂರು ವೀಳ್ಯದೆಲೆಗಳು GI Tag ಗಳನ್ನು ಪಡೆದಿವೆ. ಇವುಗಳ ಉತ್ಪಾದನೆ, ಸಂಶೋಧನೆ, ಮಾರುಕಟ್ಟೆ ಮತ್ತು ಬ್ರಾಂಡಿಂಗ್ ಉತ್ತೇಜಿಸಲು ನೂತನ ಕಾರ್ಯಕ್ರಮವನ್ನು
5. ವಾಣಿಜ್ಯ ಹೂವಿನ ರಫ್ತಿನಲ್ಲಿ ಕರ್ನಾಟಕ ಅಗ್ರಸ್ಥಾನ ಹೊಂದುವ ಸಾಮರ್ಥ್ಯ ಹೊಂದಿದ್ದು, ಇವುಗಳ ತಳಿಗಳ ಕೊರತೆ ನಿವಾರಿಸಲು ಅಂತಹ ತಳಿಗಳನ್ನು ಆಮದು ಮಾಡಿಕೊಂಡು ರೈತರಿಗೆ ಕೈಗೆಟಕುವ ದರದಲ್ಲಿ ಒದಗಿಸಲು ಕ್ರಮವಹಿಸಲಾಗುವುದು.
6. 50 ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ತೋಟಗಾರಿಕಾ ಕ್ಷೇತ್ರದ ಪ್ರಾಯೋಗಿಕ ಅರಿವು ಮೂಡಿಸಲು **'ವಿದ್ಯಾರ್ಥಿಗಳಿಗಾಗಿ ತೋಟಗಾರಿಕೆ' ಯೋಜನೆ**ಯನ್ನು ಜಾರಿಗೊಳಿಸಲಾಗುವುದು.

NAMMAKPSC ACADEMY HEBBAL | VIJAYANAGAR Est: 2014 BREAKING BARRIERS TO GREATNESS

## ರೇಷ್ಮೆ

- ರಾಮನಗರ ಮತ್ತು ಶಿಡ್ಲಘಟ್ಟದ ರೇಷ್ಮೆಗೂಡಿನ ಮಾರುಕಟ್ಟೆಗಳಲ್ಲಿ ಏಶಿಯಾದಲ್ಲಿಯೇ ಹೆಚ್ಚಿನ ವಹಿವಾಟು ನಡೆಯುತ್ತದೆ. ರಾಮನಗರ ಜಿಲ್ಲೆಯಲ್ಲಿ ಅತಿದೊಡ್ಡ ಹೈಟೆಕ್ ಮಾರುಕಟ್ಟೆಯನ್ನು ನಿರ್ಮಿಸಲಾಗುತ್ತಿದ್ದು, ಕೋಲಾರ, ಚಿಕ್ಕಬಳ್ಳಾಪುರ ಮತ್ತು ಸುತ್ತಮುತ್ತಲಿನ ರೈತರಿಗೆ ಅನುಕೂಲವಾಗುವಂತೆ ಶಿಡ್ಲಘಟ್ಟದಲ್ಲಿನ ಮಾರುಕಟ್ಟೆಯನ್ನು ಹೈಟೆಕ್ ರೇಷ್ಮೆ ಗೂಡು ಮಾರುಕಟ್ಟೆಯಾಗಿ ಅಭಿವೃದ್ಧಿಪಡಿಸಲು ತೀರ್ಮಾನಿಸಲಾಗಿದೆ.
- ಮೈಸೂರು ಬಿತ್ತನೆ ಪ್ರದೇಶದಲ್ಲಿ ಮೂಲಭೂತ ಸೌಕರ್ಯವನ್ನು ಬಲಪಡಿಸಲಾಗುತ್ತದೆ. ಇದರಿಂದ ಉತ್ತಮ ಗುಣಮಟ್ಟದ ರೋಗರಹಿತವಾದ ಮೈಸೂರು ಬಿತ್ತನೆ ಗೂಡುಗಳನ್ನು ಉತ್ಪಾದಿಸಿ, ವಾಣಿಜ್ಯ ರೇಷ್ಮೆ ಬೆಳೆಗಾರರಿಗೆ ವಿತರಿಸಲು ಮತ್ತು ಉತ್ತಮ ಗುಣಮಟ್ಟದ ಮಿಶ್ರತಳಿ ಕಚ್ಚಾ ರೇಷ್ಮೆಯನ್ನು ಉತ್ಪಾದಿಸಲು ಅನುಕೂಲವಾಗಲಿದೆ.
- ರೇಷ್ಮೆ ನೂಲು ಬಿಚ್ಚಾಣಿಕೆದಾರರಿಗೆ ಸುಲಭವಾಗಿ ದುಡಿಯುವ ಬಂಡವಾಳವನ್ನು ಒದಗಿಸಲು ಮತ್ತು ರೇಷ್ಮೆಗೂಡಿನ ಖರೀದಿಯಲ್ಲಿ ಸಕ್ರಿಯವಾಗಿ ಭಾಗವಹಿಸಲು ಐದು ಲಕ್ಷ ರೂ. ವರೆಗೆ ಶೂನ್ಯ ಬಡ್ಡಿದರದಲ್ಲಿ ಸಾಲ ಸೌಲಭ್ಯ ಒದಗಿಸಲು ತೀರ್ಮಾನಿಸಲಾಗಿದೆ.

- ಶಿಡ್ಲಘಟ್ಟದಲ್ಲಿ 1984ರಲ್ಲಿ ರೇಷ್ಮೆ ಗೂಡುಮಾರುಕಟ್ಟೆ ನಿರ್ಮಾಣವಾಯಿತು.
- ಈ ಮಾರುಕಟ್ಟೆ ರಾಜ್ಯದಲ್ಲಿಯೇ ಪ್ರಸಿದ್ಧವಾಗಿದೆ. ಹೈಟೆಕ್ ಮಾರುಕಟ್ಟೆಯಲ್ಲಿ ರೈತರಿಗೆ ವಿಶ್ರಾಂತಿ ಗೃಹ, ಕ್ಯಾಂಟೀನ್, ವಾಹನಗಳ ನಿಲುಗಡೆಗೆ ಸೂಕ್ತ ವ್ಯವಸ್ಥೆ ಹೀಗೆ ಎಲ್ಲ ಸೌಲಭ್ಯಗಳು ಇರಲಿವೆ.
- ಜಿಲ್ಲಾ ರೇಷ್ಮೆ ಇಲಾಖೆ ಅಂಕಿ ಅಂಶಗಳ ಪ್ರಕಾರ ಜಿಲ್ಲೆಯಲ್ಲಿ 2022ರ ಮಾ.31ರ ವೇ ಳೆಗೆ 18,744 ಮಂದಿ ರೇಷ್ಮೆ ಬೆಳೆಗಾರರು ಇದ್ದಾರೆ. ಮಿಶ್ರತಳಿ ಮತ್ತು ದ್ವಿತಳಿ ಸಂಕರಣ ಸೇರಿ ಒಟ್ಟು 12,139 ಟನ್ ರೇಷ್ಮೆಗೂಡು ಉತ್ಪಾದನೆ ಆಗುತ್ತಿದೆ. ಹೀಗೆ ರೇಷ್ಮೆ ಉತ್ಪಾದನೆಗೆ ರಾಜ್ಯದಲ್ಲಿಯೇ ಶಿಡ್ಲಘಟ್ಟ ಪ್ರಮುಖವಾಗಿದೆ.

## ಹೈನುಗಾರಿಕೆ

**ಅನುಗ್ರಹ ಯೋಜನೆ**:ಜಾನುವಾರುಗಳ ಆಕಸ್ಮಿಕ ಸಾವಿನ ಸಂಕಷ್ಟ ನಿವಾರಣೆಗೆ ಅನುಗ್ರಹ ಯೋಜನೆ ಮರುಜಾರಿ ಗೊಳಿಸಲಾಗಿದೆ.

- ಈ ಯೋಜನೆಯನ್ನು ಪುನರ್ ಸ್ಥಾಪಿಸಿ ಕುರಿ ಮತ್ತು ಮೇಕೆಗಳಿಗೆ 5,000 ರೂ. ಹಾಗೂ ಹಸು, ಎಮ್ಮೆ ಮತ್ತು ಎತ್ತುಗಳಿಗೆ 10,000 ರೂ. ಪರಿಹಾರ ಒದಗಿಸಲು ತೀರ್ಮಾನಿಸಲಾಗಿದೆ.
- ಆಕಸ್ಮಿಕ ಮರಣ ಹೊಂದುವ ಕುರಿ, ಮೇಕೆ ಸಾಕಾಣಿಕೆದಾರರು ವಲಸೆ ಕುರಿಗಾರರ ಕುಟುಂಬಕ್ಕೆ 5 ಲಕ್ಷ ರೂ. ವಿಮಾ ಸೌಲಭ್ಯವನ್ನು ಬಜೆಟ್‌ನಲ್ಲಿ ಘೋಷಿಸಲಾಗಿದೆ.

- **"ಗೋವಿನಿಂದ ಗ್ರಾಹಕರವರೆಗೆ ಗುಣಮಟ್ಟದ ಶ್ರೇಷ್ಠತೆ"** ಎಂಬ ಧ್ಯೇಯವಾಕ್ಯ ಹೊಂದಿರುವ ನಂದಿನಿ ಹೈನು ಉತ್ಪನ್ನಗಳ ಬ್ರಾಂಡನ್ನು ಇನ್ನಷ್ಟು ವಿಸ್ತರಿಸಿ, ಬೆಳೆಸಲು ಸರ್ಕಾರದ ಆದ್ಯತೆ.
- ಹಾಲು ಉತ್ಪಾದಕರಿಗೆ ಸಾಲ ಸೌಲಭ್ಯ ನೀಡಲು ರಾಜ್ಯದಲ್ಲಿ ಮೊದಲ ಬಾರಿಗೆ **ಕ್ಷೀರ ಸಮೃದ್ಧಿ ಸಹಕಾರ ಬ್ಯಾಂಕ್ ಸ್ಥಾಪನೆ** ಮಾಡಲು ಮುಂದಾಗಿದ್ದು, ಇದಕ್ಕೆ ರಾಜ್ಯ ಸರ್ಕಾರದಿಂದ 100 ಕೋಟಿ ರೂಪಾಯಿ ಷೇರು ಬಂಡವಾಳ ಹೂಡಲಿದೆ.
- **ಹಾಲಿನ ಇಳುವರಿ ಹೆಚ್ಚಿಸಲು ಕ್ರಮ:** ಉತ್ತಮ ಹಾಲು ಅಭಿವೃದ್ಧಿಪಡಿಸುವ ಹಾಗೂ ನೀಡುವ ತಳಿಗಳನ್ನು ರೋಗಗಳಿಂದ ಬಳಲುತ್ತಿರುವ ಜಾನುವಾರುಗಳಿಗೆ ಸೂಕ್ತ ಸಮಯದಲ್ಲಿ ಸಮರ್ಪಕ ಚಿಕಿತ್ಸೆ, ಔಷಧಿ ಮತ್ತು ಲಸಿಕೆಗಳನ್ನು ಒದಗಿಸುವ ಮೂಲಕ ಹಾಲಿನ ಇಳುವರಿಯನ್ನು ಹೆಚ್ಚಿಸಲು ಪ್ರಯತ್ನಿಸಲಾಗುವುದು.
- **ಚರ್ಮಗಂಟು ರೋಗದಿಂದ ಸತ್ತ ಗೋವುಗಳಿಗೆ ಪರಿಹಾರ:** ಕಳೆದ ಸಾಲಿನಲ್ಲಿ ರಾಜ್ಯದಲ್ಲಿ ಚರ್ಮಗಂಟು ರೋಗದಿಂದ ಒಟ್ಟು 32,045 ಜಾನುವಾರುಗಳು ಮರಣ ಹೊಂದಿರುತ್ತವೆ. ಈ ಪೈಕಿ ಮರಣ ಹೊಂದಿದ ಜಾನುವಾರುಗಳಿಗೆ ಪರಿಹಾರಧನವನ್ನು ವಿತರಿಸಲು ಕ್ರಮ ವಹಿಸಲಾಗುವುದು.
- **ಜಾನುವಾರು ಉತ್ಪನ್ನಗಳ ಸಂರಕ್ಷಣಾ ಘಟಕಗಳು:** ಗ್ರಾಹಕರಿಗೆ ಅಗ್ಗದ ದರದಲ್ಲಿ ಗುಣಮಟ್ಟದ ಪ್ರೋಟೀನ್ ಯುಕ್ತ ಮಾಂಸ ಮತ್ತು ಮೊಟ್ಟೆ ಪೂರೈಕೆಗೆ ಅವಕಾಶ ಕಲ್ಪಿಸಲು ಖಾಸಗಿ ಸಹಭಾಗಿತ್ವದಲ್ಲಿ ಜಾನುವಾರು ಉತ್ಪನ್ನಗಳ ಸಂಸ್ಕರಣೆ ಮತ್ತು ಮೌಲ್ಯವರ್ಧನೆ ಘಟಕಗಳು ಹಾಗೂ ಉತ್ತಮವಾದ ಮಾರುಕಟ್ಟೆ ಅಭಿವೃದ್ಧಿ ಮಾಡಲಾಗುವುದು.

## ಮೀನುಗಾರಿಕೆ

- ಮೀನುಗಾರ ಮಹಿಳೆಯರಿಗೆ ಬ್ಯಾಂಕುಗಳಲ್ಲಿ ಬಡ್ಡಿರಹಿತವಾಗಿ ನೀಡುವ ಸಾಲದ ಮಿತಿ 50,000 ರೂ. ಗಳಿಂದ ಮೂರು ಲಕ್ಷ ರೂ. ಗಳಿಗೆ ಹೆಚ್ಚಿಸಲಾಗಿದೆ .
- ರಿಯಾಯಿತಿ ದರದಲ್ಲಿ ನೀಡಲಾಗುತ್ತಿದ್ದ ಡೀಸೆಲ್ ಪಡೆಯಲು ಅವರಿಗೆ ವಿಧಿಸಲಾಗಿದ್ದ 1 ಲಕ್ಷ ಕಿ.ಮೀ. ದೂರದ ಮೀನುಗಾರಿಕೆಯನ್ನು 2 ಲಕ್ಷ ಕಿ.ಮೀ.ವರೆಗೆ ವಿಸ್ತರಿಸಲಾಗಿದೆ.
- ಮೀನುಗಾರಿಕಾ ದೋಣಿಗಳಲ್ಲಿನ ಸೀಮೆ ಎಣ್ಣೆ ಇಂಜಿನ್‌ಗಳನ್ನು ಪೆಟ್ರೋಲ್ ಡೀಸೆಲ್ ಇಂಜಿನಗಳಾಗಿ ಬದಲಾಯಿಸಲು ತಲಾ 50,000 ರೂ. ಸಹಾಯಧನ ನೀಡಲು ನಿರ್ಧರಿಸಲಾಗಿದೆ.
- ರಾಜ್ಯದ ಜಲಸಂಪನ್ಮೂಲಗಳನ್ನು ಸಮರ್ಪಕವಾಗಿ ಬಳಸಿಕೊಂಡು ಹೆಚ್ಚಿನ ಮೀನು ಮರಿಗಳನ್ನು ಉತ್ಪಾದಿಸುವ ಮೂಲಕ ಒಳನಾಡು ಮೀನುಗಾರಿಕೆಗೆ ಇರುವ ವಿಪುಲ ಅವಕಾಶಗಳನ್ನು ಉಪಯೋಗಿಸಿಕೊಳ್ಳಲಾಗುವುದು, ಜೊತೆಗೆ, ಹೆಚ್ಚಿನ ಬೇಡಿಕೆಯಿರುವ ಕಾಟ್ಲಾ ಮತ್ತು ರೋಹು ಮೀನು ಮರಿಗಳನ್ನು ಅಧಿಕ ಪ್ರಮಾಣದಲ್ಲಿ ಉತ್ಪಾದಿಸಿ ಒಳನಾಡು ಮೀನುಗಾರಿಕೆಯನ್ನು ಪ್ರೋತ್ಸಾಹಿಸಲು ನಿರ್ಧರಿಸಲಾಗಿದೆ.

- ಸೀಗಡಿ ಉತ್ಪನ್ನಗಳ ಮೌಲ್ಯವರ್ಧನೆ ಮತ್ತು ಉತ್ತಮ ಮಾರುಕಟ್ಟೆಯನ್ನು ಕಲ್ಪಿಸಲು ಕ್ರಮ ವಹಿಸಲು ನಿರ್ಧರಿಸಲಾಗಿದೆ. ಇದಲ್ಲದೆ, ಮೀನುಗಾರಿಕೆಗೆ ಈಗ ಲಭ್ಯವಿರುವ ಶೈತ್ಯಾಗಾರಗಳನ್ನು ದುಪ್ಪಟ್ಟುಗೊಳಿಸಲು ಸಾರ್ವಜನಿಕ ಖಾಸಗಿ ಯೋಜನೆಯನ್ನು ಜಾರಿಗೆ ತರಲು ತೀರ್ಮಾನಿಸಲಾಗಿದೆ.

## ಸಾಲ ಸೌಲಭ್ಯ

- ಶೂನ್ಯ ಬಡ್ಡಿದರದಲ್ಲಿ ನೀಡುವ ಅಲ್ಪಾವಧಿ ಸಾಲದ ಮಿತಿ 5 ಲಕ್ಷ ರೂ.ಗಳಿಗೆ ಹೆಚ್ಚಳ
- 3ರ ಬಡ್ಡಿ ದರದಲ್ಲಿ ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲದ ಮಿತಿ 10 ಲಕ್ಷ ರೂ. ಗಳಿಂದ 15 ಲಕ್ಷ ರೂ, ಗಳಿಗೆ ಹೆಚ್ಚಳ.
- ಗೋದಾಮು ನಿರ್ಮಿಸಲು 20 ಲಕ್ಷ ರೂ. ವರೆಗಿನ ಸಾಲಕ್ಕೆ ಶೇ.7 ರಷ್ಟು ಬಡ್ಡಿ ಸಹಾಯಧನ
- ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳ ರೈತರಿಗೆ ಸರಕು ಸಾಗಾಣಿಕೆಗೆ ಪಿಕ್‌ಅಪ್ ವ್ಯಾನ್ ಖರೀದಿಗೆ ಶೇ.4 ರ ಬಡ್ಡಿ ದರದಲ್ಲಿ ಏಳು ಲಕ್ಷ ರೂ. ವರೆಗಿನ ಸಾಲ ಸೌಲಭ್ಯ ಒದಗಿಸಲಾಗುವುದು.
- ರಾಜ್ಯದ ಆಯ್ದ 50 ತರಕಾರಿ ಮಾರುಕಟ್ಟೆಗಳಲ್ಲಿ ಮಿನಿ ಶೀತಲಗೃಹಗಳ ಸ್ಥಾಪನೆ.
- **ಎಪಿಎಂಸಿ ಕಾಯ್ದೆ ತಿದ್ದುಪಡಿ ಹಿಂಪಡೆಯಲು ಕ್ರಮ ಕೈಗೊಳ್ಳಲಾಗುವುದು.**

**ಎಪಿಎಂಸಿ ಕಾಯ್ದೆ ತಿದ್ದುಪಡಿ:** 'ರೈತರ ಉತ್ಪನ್ನಗಳ ವ್ಯಾಪಾರ ಮತ್ತುವಾಣಿಜ್ಯ (ಉತ್ತೇಜನ ಮತ್ತುನೆರವು) ಕಾಯ್ದೆ–2020'ಕ್ಕೆ ತಿದ್ದುಪಡಿ ತರಲಾಗಿದ್ದು, ಇದರಡಿ ರೈತರಿಗೆ ಎಪಿಎಂಸಿ ಮಾರುಕಟ್ಟೆಗಳ ಹೊರಗಡೆಯೂ ತಮ್ಮ ಉತ್ಪನ್ನ ಮಾರಾಟ ಮಾಡಲು ಸಾಧ್ಯವಾಗುತ್ತದೆ. ಈ ಕಾಯ್ದೆಯ ಸೆಕ್ಷನ್ 3ರ ಪ್ರಕಾರ, ರೈತರು ತಮ್ಮ ಉತ್ಪನ್ನಗಳನ್ನು ರಾಜ್ಯದೊಳಗೆ ಹಾಗೂ ನೆರೆ ರಾಜ್ಯಗಳಲ್ಲಿ ಮಾರಾಟ ಮಾಡಬಹುದು. ಕಾಯ್ದೆಯ ಸೆಕ್ಷನ್ 4(3)ರ ಅನ್ವಯ, ರೈತರ ಜೊತೆ ವಹಿವಾಟು ನಡೆಸುವ ವ್ಯಾಪಾರಸ್ಥರು, ರೈತರಿಗೆ ಕೊಡಬೇಕಿರುವ ಹಣವನ್ನು ಅದೇ ದಿನ ಅಥವಾ ಗರಿಷ್ಠಮೂರು ಕೆಲಸದ ದಿನಗಳಲ್ಲಿ ಪಾವತಿಸಬೇಕು

## ನೀರಾವರಿಗೆ ಉತ್ತೇಜನ

- **ಕುಲಹಳ್ಳಿ-ಹನ್ನೂರು, ತಿಮ್ಮಾಪುರ, ಸಸಾಲಟ್ಟಿ-ಶಿವಲಿಂಗೇಶ್ವರ ಮತ್ತು ಮಂಟೂರು ಮಹಾಲಕ್ಷ್ಮಿ ಏತ** ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು.
- ನೀರಾವರಿ ಯೋಜನೆಗಳನ್ನು,899 ಕೆರೆ ತುಂಬಿಸುವ 19 ಯೋಜನೆಗಳನ್ನು ಪೂರ್ಣಗೊಳಿಸಲು ಕ್ರಮ. ಎತ್ತಿನಹೊಳೆ ಯೋಜನೆ ಬಾಕಿ ಕಾಮಗಾರಿ ಪೂರ್ಣಗೊಳಿಸಲು, ಮೇಕೆದಾಟು ಯೋಜನೆಗೆ ಅರಣ್ಯ ಭೂಮಿ ಸ್ವಾಧೀನ, ಭೂಸ್ವಾಧೀನಕ್ಕೆ ಕ್ರಮ ಕೈಗೊಳ್ಳಲಾಗುವುದು.

- ಕೆ.ಸಿ. ವ್ಯಾಲಿ ಮತ್ತು ಹೆಚ್.ಎನ್. ವ್ಯಾಲಿ ಯೋಜನೆಗಳ ಎರಡನೇ ಹಂತದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಗಳ 29 ಕೆರೆ ತುಂಬಿಸುವ ಯೋಜನೆ ಅನುಷ್ಠಾನ.

**ಎತ್ತಿನಹೊಳೆ ಯೋಜನೆ:** ಪಶ್ಚಿಮಾಭಿಮುಖವಾಗಿ ಹರಿಯುವ ನದಿಗಳಿಂದ ವಾರ್ಷಿಕ 24.01 ಟಿ.ಎಂ.ಸಿ ಪ್ರವಾಹದ ನೀರನ್ನು ಸಕಲೇಶಪುರದಿಂದ ರಾಜ್ಯದ ಪೂರ್ವಭಾಗಕ್ಕೆ ತಿರುಗಿಸಿ, ಕುಡಿಯುವ ನೀರಿನ ತೀವ್ರ ಅಭಾವ ಎದುರಿಸುತ್ತಿರುವ ರಾಜ್ಯದ ಹಾಸನ, ಚಿಕ್ಕಮಗಳೂರು, ತುಮಕೂರು, ಬೆಂಗಳೂರು ಗ್ರಾಮಾಂತರ, ರಾಮನಗರ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಗಳಿಗೆ ಸುರಕ್ಷಿತ ಕುಡಿಯುವ ನೀರು ಒದಗಿಸುವ ಹಾಗೂ ಅಂತರ್ಜಲ ಮರುಪೂರಣಕ್ಕಾಗಿ ಈ ಭಾಗಗಳಲ್ಲಿನ ಸುಮಾರು 527 ಸಣ್ಣ ನೀರಾವರಿ ಕೆರೆಗಳಿಗೆ ಅವುಗಳ ಸಾಮರ್ಥ್ಯದ ಶೇ 50% ರಷ್ಟು ನೀರು ತುಂಬಿಸುವ ಉದ್ದೇಶಿತ ಎತ್ತಿನಹೊಳೆ ಯೋಜನೆಗೆ ಸರ್ಕಾರವು 2014 ರಲ್ಲಿ ಪರಿಷ್ಕೃತ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಿದೆ.

**ಮೇಕೆದಾಟು ಯೋಜನೆ:** ಬೆಂಗಳೂರು ನಗರದಿಂದ ಸುಮಾರು 90 ಕಿಲೋ ಮೀಟರ್ ದೂರದಲ್ಲಿರುವ ರಾಮನಗರದ ಜಿಲ್ಲೆ ಸಮೀಪ ಬರುವ ಸ್ಥಳವೇ ಮೇಕೆದಾಟು. ಕಾವೇರಿ ನದಿ ಇಲ್ಲಿ ರಭಸದಿಂದ ಹರಿದು ಬಂಡೆಗಳ ಕೊರೆದು ವಿಚಿತ್ರ ಆಕೃತಿ ಮೂಡಿಸಿದೆ. ಇದೇ ಸ್ಥಳದಲ್ಲಿ ಆಹಾರ ತಿನ್ನಲು ಬರುವ ಮೇಕೆಗಳು, ಬಂಡೆ ದಾಟುವ ಕಾರಣಕ್ಕೆ ಈ ಪ್ರದೇಶದ ಹೆಸರು ಮೇಕೆದಾಟು ಎಂದಾಗಿದೆ.

ಮೇಕೆದಾಟು ಬೆಂಗಳೂರು ನಗರಕ್ಕೆ ಕುಡಿಯುವ ನೀರು ಒದಗಿಸುವ ಯೋಜನೆಯಾಗಿದೆ. ಅಲ್ಲೊಂದು ಸಮಾನಾಂತರ ಜಲಾಶಯ ನಿರ್ಮಾಣ ಮಾಡುವ ಮೂಲಕ 67.16 ಟಿಎಂಸಿ ನೀರು ಸಂಗ್ರಹ ಮಾಡುವುದು, ಬೆಂಗಳೂರಿಗೆ 4.75 ಟಿಎಂಸಿ ನೀರು ಪೂರೈಸುವುದು ಹಾಗೂ 440 ಮೆ.ವಾ. ವಿದ್ಯುತ್ ಉತ್ಪಾದನೆ ಮಾಡುವುದು ಈ ಯೋಜನೆಯ ಉದ್ದೇಶ. ಕೆಆರ್‌ಎಸ್‌ನಿಂದ ಹರಿಯುವ ನೀರಿಗೆ ತಡೆ ಹಾಕಲಾಗುತ್ತಿದೆ ಎಂಬುದು ತಮಿಳುನಾಡಿನ ವಿರೋಧವಾಗಿದೆ.

**ಕಳಸಾ ಮತ್ತು ಬಂಡೂರಿ ಯೋಜನೆ: ಕಳಸಾ ಮತ್ತು ಬಂಡೂರಾ ನಾಲಾ ತಿರುವು** ಕುಡಿಯುವ ನೀರಿನ ಯೋಜನೆಗೆ ಅಗತ್ಯ ತೀರುವಳಿ ಪಡೆಯಲು ಕ್ರಮ ಕೈಗೊಳ್ಳಲಾಗುವುದು. ಈ ಯೋಜನೆಯು ಗೋವಾದಲ್ಲಿರುವ **ಮಹದಾಯಿ ನದಿಯಿಂದ** ಕರ್ನಾಟಕದ **ಮಲಪ್ರಭಾ ನದಿಗೆ** (ಕೃಷ್ಣ ನದಿಯ ಉಪನದಿ ) ಜಲಾನಯನ ಪ್ರದೇಶಕ್ಕೆ ನೀರನ್ನು ತಿರುಗಿಸಲು **ಅಣೆಕಟ್ಟುಗಳ ನಿರ್ಮಾಣ ಮತ್ತು ಕಾಲುವೆ ವ್ಯವಸ್ಥೆಯನ್ನು ಒಳಗೊಂಡಿರುತ್ತದೆ. ಕರ್ನಾಟಕದ ಬೆಳಗಾವಿ, ಧಾರವಾಡ, ಬಾಗಲಕೋಟೆ ಮತ್ತು ಗದಗ** ಜಿಲ್ಲೆಗಳ **ಕುಡಿಯುವ ನೀರಿನ** ಅಗತ್ಯಗಳನ್ನು ಪೂರೈಸುವುದು ಯೋಜನೆಯ ಮುಖ್ಯ ಗುರಿಯಾಗಿದೆ.

**ಭದ್ರಾ ಮೇಲ್ದಂಡೆ ಯೋಜನೆ: ಭದ್ರಾ ಮೇಲ್ದಂಡೆ ಯೋಜನೆ**ಗೆ ಕೇಂದ್ರದ ಅನುದಾನ ಬಿಡುಗಡೆಗೆ ಕ್ರಮ ಕೈಗೊಳ್ಳಲಾಗುವುದು. ಭದ್ರಾ ಮೇಲ್ದಂಡೆ ಯೋಜನೆಯಡಿ ಒಟ್ಟು 29.90 ಟಿ.ಎಂ.ಸಿ. ನೀರಿನ ಬಳಕೆಯೊಂದಿಗೆ ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ ಹಾಗೂ ತುಮಕೂರು ಜಿಲ್ಲೆಗಳ 5,57,022 ಎಕರೆ (2,25,515 ಹೆಕ್ಟೇರ್) ಭೂಪ್ರದೇಶಕ್ಕೆ ನೀರಾವರಿ ಕಲ್ಪಿಸಲು ಮತ್ತು ಇದೇ ಜಿಲ್ಲೆಗಳ 367 ಸಣ್ಣ ನೀರಾವರಿ ಕೆರೆಗಳನ್ನು ಅವುಗಳ ಸಾಮರ್ಥ್ಯದ ಶೇ. 50 ರಷ್ಟನ್ನು ತುಂಬಿಸಲು ಉದ್ದೇಶಿಸಲಾಗಿದೆ.

ಭದ್ರಾ ಮೇಲ್ದಂಡೆ ಯೋಜನೆಗೆ 2023 ರ ಕೇಂದ್ರ ಸರ್ಕಾರ ಬಜೆಟ್ನಲ್ಲಿ ಬರೋಬ್ಬರಿ 5,300 ಕೋಟಿ ಮೀಸಲಿಟ್ಟಿದೆ. ಅಲ್ಲದೇ ಈ ಯೋಜನೆಯನ್ನು ರಾಷ್ಟ್ರೀಯ ಯೋಜನೆ ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಘೋಷಣೆ ಮಾಡಿದ್ದಾರೆ.

**ಕೃಷ್ಣಾ ಮೇಲ್ದಂಡೆ ಯೋಜನೆ:** ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರಡಿ ಭೂಸ್ವಾಧೀನ ಹಾಗೂ ಪುನರ್ ವಸತಿ ಮತ್ತು ಪುನರ್ ನಿರ್ಮಾಣಕ್ಕೆ ಆದ್ಯತೆ ನೀಡಲಾಗುವುದು. ಹಂತ-3 ಕೃಷ್ಣಾ ನ್ಯಾಯಾಧೀಕರಣ-2ರ ತೀರ್ಪಿನನ್ವಯ ರಾಜ್ಯಕ್ಕೆ ಹಂಚಿಕೆಯಾದ ಒಟ್ಟು 173 ಟಿ.ಎಂ.ಸಿ ಪೈಕಿ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 ರ ಯೋಜನೆಗೆ 130.00 ಟಿಎಂಸಿ ನೀರು ಹಂಚಿಕೆಯಾಗಿರುತ್ತದೆ. ಯೋಜನೆಯಡಿ 130.00 ಟಿಎಂಸಿ ನೀರಿನ ಬಳಕೆಗಾಗಿ ಆಲಮಟ್ಟಿ ಜಲಾಶಯದ ಸಂಗ್ರಹಣಾ ಮಟ್ಟ ಆರ್.ಎಲ್. 519.60 ಮೀ. ನಿಂದ ಆರ್.ಎಲ್ 524.256 ಮೀ. ಎತ್ತರಿಸುವುದಾಗಿರುತ್ತದೆ.

ದಕ್ಷಿಣ ಭಾರತದ ಕರ್ನಾಟಕ ರಾಜ್ಯದ ಬಿಜಾಪುರ, ಬಾಗಲಕೋಟೆ, ಗುಲ್ಬರ್ಗಾ, ಯಾದಗಿರಿ ಮತ್ತು ರಾಯಚೂರು ಜಿಲ್ಲೆಗಳ ಬರಗಾಲದ ಪೀಡಿತ ಪ್ರದೇಶಗಳಿಗೆ ನೀರಾವರಿ ಒದಗಿಸಲು ಕೃಷ್ಣಾ ಮೆಲ್ದಂಡೆ ಯೋಜನೆ (ಯುಕೆಪಿ) ಯನ್ನು ಅನುಷ್ಠಾನಗೊಳಿಸಲಾಯಿತು. 1964 ರ ಮೇ 22 ರಂದು ಆಗಿನ ಪ್ರಧಾನ ಮಂತ್ರಿ ಲಾಲ್ ಬಹದ್ದೂರ್ ಶಾಸ್ತ್ರಿ ಈ ಯೋಜನೆಗೆ ಅಡಿಪಾಯ ಹಾಕಿದರು. ಮೇ 1976 ರಲ್ಲಿ ಆರ್.ಎಸ್ ಬಾಚಾವತ್ ನೇತೃತ್ವದ ಕೃಷ್ಣಾ ವಾಟರ್ ಡಿಸ್ಪ್ಯೂಟ್ಸ್ ಟ್ರಿಬ್ಯೂನಲ್ ಮೂಲಕ ಕರ್ನಾಟಕ ರಾಜ್ಯಕ್ಕೆ 173 ಸಾವಿರ ಮಿಲಿಯನ್ ಘನ ಅಡಿ (ಟಿಎಂಸಿಎಫ್ಟಿ) ನೀರಿನಷ್ಟು ಬಳಸಲು ಯುಕೆಪಿ ಉದ್ದೇಶಿಸಿದೆ.



## *ಶಿಕ್ಷಣ*

- **ಪಠ್ಯಪುಸ್ತಕ ಮರುಪರಿಷ್ಕರಣೆ**
- ರಾಜ್ಯದ ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ಉತ್ತಮ ಸೌಲಭ್ಯಗಳನ್ನು ನೀಡಲು ಶಾಲಾ ಕೊಠಡಿಗಳ ನಿರ್ಮಾಣ ಕಾಮಗಾರಿಗಳನ್ನು ಶೀಘ್ರದಲ್ಲಿಯೇ ಪೂರ್ಣಗೊಳಿಸಲಾಗುವುದು.




- ವಿದ್ಯಾರ್ಥಿಗಳ ಶಿಕ್ಷಣ ಮತ್ತು ಆರೋಗ್ಯದ ದೃಷ್ಟಿಯಿಂದ, ಮಕ್ಕಳ ಸಂಖ್ಯೆಗೆ ಅನುಗುಣವಾಗಿ, ಕಡಿಮೆ ಶೌಚಾಲಯಗಳಿರುವ 5,775 ಶಾಲೆಗಳಲ್ಲಿ ಹಾಗೂ 150 ಕಾಲೇಜುಗಳಲ್ಲಿ ಶೌಚಾಲಯ ಘಟಕಗಳನ್ನು ನರೇಗಾ ಯೋಜನೆಯ ಸಂಯೋಜನೆಯೊಂದಿಗೆ ನಿರ್ಮಾಣ ಮಾಡಲಾಗುವುದು.
- **ಪೂರಕ ಪೌಷ್ಟಿಕ ಆಹಾರ:** ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 1 ರಿಂದ 8 ನೇ ತರಗತಿಯ ವಿದ್ಯಾರ್ಥಿಗಳಿಗೆ ವಾರದಲ್ಲಿ ಒಂದು ಬಾರಿ ಮೊಟ್ಟೆ/ ಶೇಂಗಾ ಚಿಕ್ಕಿ/ ಬಾಳೆಹಣ್ಣನ್ನು ವಿತರಿಸಲಾಗುತ್ತಿದ್ದು, ಈಗ ವಾರದಲ್ಲಿ ಎರಡು ದಿವಸ ವಿತರಿಸಲಾಗುವುದು. ಪ್ರಸಕ್ತ ಸಾಲಿನಿಂದ ಈ ಯೋಜನೆಯನ್ನು 9 ಮತ್ತು 10ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೂ ವಿಸ್ತರಿಸಿ 60 ಲಕ್ಷ ಮಕ್ಕಳಿಗೆ ಒದಗಿಸಲಾಗುವುದು.
- **'ಮರುಸಿಂಚನ'ಯೋಜನೆ:** ಮಕ್ಕಳಲ್ಲಿ ಉಂಟಾಗಿರುವ ಕಲಿಕಾ ನ್ಯೂನತೆಯನ್ನು ಹೋಗಲಾಡಿಸಲು ಸುಮಾರು 33 ಲಕ್ಷ ವಿದ್ಯಾರ್ಥಿಗಳಿಗೆ **ಕಲಿಕಾ ಬಲವರ್ಧನೆ** ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು. 'ಮರುಸಿಂಚನ' ಎಂಬ ಹೊಸ ಯೋಜನೆಯಡಿಯಲ್ಲಿ ಕಲಿಕೆಯಲ್ಲಿ ಹಿಂದುಳಿದ ಒಂದೂವರೆ ಲಕ್ಷ ವಿದ್ಯಾರ್ಥಿಗಳನ್ನು ಪ್ರೌಢ ಹಂತದ ಪರೀಕ್ಷೆಗಳಿಗೆ ಸಜ್ಜುಗೊಳಿಸಲು ವಿಶೇಷ ತರಬೇತಿಯನ್ನು ನೀಡಲಾಗುವುದು.
- **SATS 2.0:** ಶಾಲಾ ಶಿಕ್ಷಣ ಇಲಾಖೆಯಲ್ಲಿನ ವಿವಿಧ ಕಾರ್ಯಕ್ರಮಗಳನ್ನು ನಿರ್ವಹಿಸುವ ಸ್ಯಾಟ್ಸ್ ತಂತ್ರಾಂಶವನ್ನು SATS 2.0 ಎಂದು ಉನ್ನತೀಕರಿಸಲಾಗುವುದು.

**ಸ್ಯಾಟ್ಸ್ (ಸ್ಟುಡೆಂಟ್ ಅಚೀವ್‌ಮೆಂಟ್ ಟ್ರ್ಯಾಕಿಂಗ್ ಸಿಸ್ಟಂ) ತಂತ್ರಾಂಶ**

ಈ ತಂತ್ರಾಂಶದಲ್ಲಿ ವಿದ್ಯಾರ್ಥಿಗಳ ಮಾಹಿತಿಯನ್ನು ಪ್ರತಿ ತಿಂಗಳು ಭರ್ತಿ ಮಾಡಬೇಕು. ವಿದ್ಯಾರ್ಥಿಯ ಹಾಜರಾತಿ, ಸಮವಸ್ತ್ರ, ಶೂ, ಸಾಕ್ಸ್ ವಿತರಣೆಯ ವಿವರಣೆ, ಕಿರುಪರೀಕ್ಷೆ, ಅರ್ಧವಾರ್ಷಿಕ, ವಾರ್ಷಿಕ ಪರೀಕ್ಷೆಯ ಎಲ್ಲ ಸಂಗತಿಗಳನ್ನು ಭರ್ತಿ ಮಾಡಬೇಕು.

- ಹೊಸ ಕಲ್ಪನೆಯನ್ನು ವಾಸ್ತವಕ್ಕೆ ತರಲು ವಿದ್ಯಾರ್ಥಿಗಳಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮಾಧ್ಯಮಿಕ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಇನ್ನೋವೇಶನ್ ಲ್ಯಾಬ್‌ಗಳನ್ನು ಸ್ಥಾಪಿಸಲಾಗುವುದು.
- 2023-24ನೇ ಸಾಲಿನಲ್ಲಿ ರಾಜ್ಯದ ಪ್ರತಿ ಕಂದಾಯ ವಿಭಾಗದಲ್ಲಿ ನಾಲ್ಕು ಪ್ರಯೋಗಾಲಯಗಳನ್ನು ಎರಡು ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲಾಗುವುದು.
- **'ಸಸ್ಯ ಶ್ಯಾಮಲ'ಕಾರ್ಯಕ್ರಮ:** ಶಿಕ್ಷಣ ಇಲಾಖೆ ಮತ್ತು ಅರಣ್ಯ ಇಲಾಖೆಯ ಸಹಭಾಗಿತ್ವದಲ್ಲಿ ಸ್ಥಳಾವಕಾಶವುಳ್ಳ ಶಾಲೆಗಳ ಸುತ್ತಮುತ್ತ ಒಂದು ವರ್ಷದ ಕಾಲಾವಧಿಯಲ್ಲಿ 50 ಲಕ್ಷ ಸಸಿಗಳನ್ನು ನೆಡುವ ವಿನೂತನ 'ಸಸ್ಯ ಶ್ಯಾಮಲ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು.
- ರಾಜ್ಯದ ಸಾಹಿತಿಗಳ ಹಾಗೂ ಪ್ರಕಾಶಕರ ಬೇಡಿಕೆಗಳಿಗೆ ಸ್ಪಂದಿಸಿ ಸಾರ್ವಜನಿಕ ಗ್ರಂಥಾಲಯಗಳಿಗೆ ಉತ್ತಮ ಪುಸ್ತಕಗಳನ್ನು ಖರೀದಿಸಲು ಅನುದಾನ ಒದಗಿಸಲಾಗುವುದು.
- ಸ್ಥಳೀಯವಾದ ಸಾಮಾಜಿಕ, ಸಾಂಸ್ಕೃತಿಕ ಮತ್ತು ಆರ್ಥಿಕ ವಾಸ್ತವಿಕತೆಯನ್ನು ಆಧರಿಸಿದ ಹೊಸ ಶಿಕ್ಷಣ ನೀತಿ ರೂಪಿಸಲು ಕ್ರಮ.
- ಉನ್ನತ ಶಿಕ್ಷಣ ಇಲಾಖೆಯಡಿ ನಿರ್ಮಿಸಿರುವ 13,169 ವಿದ್ಯಾರ್ಥಿಗಳ ಸಾಮರ್ಥ್ಯ ಹೊಂದಿರುವ 224 ವಸತಿ ನಿಲಯಗಳನ್ನು ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ವರ್ಗಾವಣೆ. ಎಸ್.ಕೆ.ಎಸ್.ಜೆ.ಟಿ.ಐ. ಬೆಂಗಳೂರಿನ ಎಂಜಿನಿಯರಿಂಗ್ ಕಾಲೇಜಿನಲ್ಲಿರುವ ಜವಳಿ ತಂತ್ರಜ್ಞಾನ ವಿಭಾಗವನ್ನು ಸ್ಮಾರ್ಟ್ ಮತ್ತು ತಾಂತ್ರಿಕ ಜವಳಿ ಕೇಂದ್ರ ಆಗಿ ಉನ್ನತೀಕರಣಕ್ಕೆ ಕ್ರಮ.
- **ವೃತ್ತಿ ಚೈತನ್ಯ ಯೋಜನೆ**ಯಡಿಯಲ್ಲಿ ಇಲಾಖೆಯ ಸುಮಾರು 8,000 ಸಿಬ್ಬಂದಿಗೆ ತರಬೇತಿ ಕಾರ್ಯಕ್ರಮ.
- ಸಾರ್ವಜನಿಕ ವಿಶ್ವವಿದ್ಯಾಲಯಗಳ ಆಡಳಿತ ವ್ಯವಸ್ಥೆಯನ್ನು ಉತ್ತಮಪಡಿಸಲು ಅತ್ಯುತ್ತಮ ಸಾಧನೆ ಮಾಡುವ ವಿಶ್ವವಿದ್ಯಾಲಯಗಳಿಗೆ ತಲಾ 50 ಲಕ್ಷ ರೂ. ಪ್ರೋತ್ಸಾಹ ಧನ.
- ಎಲ್ಲಾ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಹಾಗೂ ಖಾಸಗಿ ವಿಶ್ವವಿದ್ಯಾಲಯಗಳ ಶೇ. 40 ಸೀಟುಗಳಿಗೆ ಪಿಹೆಚ್.ಡಿ. ಅಧ್ಯಯನಕ್ಕೆ ಕೌನ್ಸೆಲಿಂಗ್ ಮೂಲಕ ಪ್ರವೇಶ.

**ರಾಷ್ಟ್ರೀಯ ಶಿಕ್ಷಣ ನೀತಿ(NEP)ಯನ್ನು ತೆಗೆದುಹಾಕಿ ಕರ್ನಾಟಕದಲ್ಲಿ ಹೊಸ ಶಿಕ್ಷಣ ನೀತಿ ತರಲಾಗುವುದು.**

- ಈಗ ಜಾರಿಯಲ್ಲಿರುವ ರಾಷ್ಟ್ರೀಯ ಶಿಕ್ಷಣ ನೀತಿ ಪ್ರಜಾಪ್ರಭುತ್ವ ಮತ್ತು ಸಂವಿಧಾನವನ್ನು ದುರ್ಬಲಗೊಳಿಸುತ್ತದೆ. ಧಾರ್ಮಿಕ, ಸಾಂಸ್ಕೃತಿಕ, ಭಾಷಾವಾರು ವೈವಿಧ್ಯತೆ ಹೊಂದಿರುವ ಭಾರತದಂತಹ ದೇಶಗಳಿಗೆ ಏಕರೂಪ ಶಿಕ್ಷಣ ನೀತಿ ಸರಿಹೊಂದುವುದಿಲ್ಲ.

ಕರ್ನಾಟಕದ ಸ್ಥಳೀಯ ಸಾಮಾಜಿಕ, ಸಾಂಸ್ಕೃತಿಕ, ಆರ್ಥಿಕತೆಯನ್ನು ಗಮನದಲ್ಲಿಟ್ಟುಕೊಂಡು ಹೊಸ ಶಿಕ್ಷಣ ನೀತಿಯನ್ನು ತರಲಾಗುವುದು.

## ಅಲ್ಪಸಂಖ್ಯಾತರ ಶಿಕ್ಷಣ

- ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದ್ದ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನವನ್ನು (1 ರಿಂದ 8ನೇ ತರಗತಿಯವರೆಗೆ) ಸರ್ಕಾರವು ಈ ಯೋಜನೆಯನ್ನು ಮುಂದುವರೆಸಲು ಅನುದಾನ ನೀಡಲಾಗಿತ್ತಿದೆ.
- ರಾಜ್ಯದ 62 ಅಲ್ಪಸಂಖ್ಯಾತ **ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು 6ನೇ ತರಗತಿಯಿಂದ 12ನೇ ತರಗತಿಯವರೆಗೆ ಇಂಟಿಗ್ರೇಟೆಡ್ ಶಾಲೆಗಳನ್ನಾಗಿ ಉನ್ನತೀಕರಿಸಲಾಗುವುದು**. ಪ್ರಸಕ್ತ ಸಾಲಿನಲ್ಲಿ ಹೊಸದಾಗಿ 10 ಅಲ್ಪಸಂಖ್ಯಾತ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಪ್ರಾರಂಭಿಸಲು ಉದ್ದೇಶಿಸಲಾಗಿದೆ.
- ಮೌಲಾನಾ ಆಜಾದ್ ಶಾಲೆಗಳ ಉತ್ತಮ ಕಾರ್ಯನಿರ್ವಹಣೆಯನ್ನು ಗುರುತಿಸಿ, ಇವುಗಳ ಶಿಕ್ಷಣದ ಗುಣಮಟ್ಟವನ್ನು ಇನ್ನಷ್ಟು ಹೆಚ್ಚಿಸಲು ಹಾಗೂ ಸ್ವಂತ ಕಟ್ಟಡ ಇಲ್ಲದೇ ಇರುವ ಶಾಲೆಗಳಿಗೆ ಅಗತ್ಯ ಮೂಲ ಸೌಕರ್ಯಗಳನ್ನು ಕಲ್ಪಿಸಲು ನಿರ್ಧಾರ.
- ಅಲ್ಪಸಂಖ್ಯಾತ ವಿದ್ಯಾರ್ಥಿಗಳ ವ್ಯಾಸಂಗಕ್ಕಾಗಿ **ಅರಿವು ಶೈಕ್ಷಣಿಕ ಸಾಲ ಯೋಜನೆ** ಅಡಿಯಲ್ಲಿ ಸಿ.ಇ.ಟಿ ಮೂಲಕ ಪ್ರವೇಶ ಪಡೆದ ಇಂಜಿನಿಯರಿಂಗ್, ವೈದ್ಯಕೀಯ ಮುಂತಾದ 28 ವೃತ್ತಿಪರ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡಲು ಶೇ.2 ರ ಬಡ್ಡಿ ದರದಲ್ಲಿ ವಾರ್ಷಿಕ ಒಂದು ಲಕ್ಷ ರೂ.ಗಳವರೆಗೆ ಸಾಲ ಮಂಜೂರು ಮಾಡಲಾಗುವುದು.
- ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳ ಕನ್ನಡ ಮತ್ತು ಆಂಗ್ಲ ಭಾಷಾ ಜ್ಞಾನವನ್ನು ಉತ್ತಮಪಡಿಸುವ ಉದ್ದೇಶದಿಂದ ರಾಜ್ಯದ ಎಲ್ಲಾ ಅಲ್ಪಸಂಖ್ಯಾತ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಭಾಷಾ ಪ್ರಯೋಗಾಲಯಗಳನ್ನು ಐದು ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪನೆಗೆ ನಿರ್ಧಾರ.
- ಅಲ್ಪಸಂಖ್ಯಾತರ ಪದವಿ ಪೂರ್ವ ವಸತಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರಥಮ ವರ್ಷದಿಂದಲೇ NEET, JEE, CET ಹಾಗೂ ಇತರೆ ಪ್ರವೇಶ ಪರೀಕ್ಷೆಗಳ ತಯಾರಿಗಾಗಿ ಪ್ರತಿಷ್ಠಿತ ಸಂಸ್ಥೆಗಳಿಂದ ಎರಡು ವರ್ಷಗಳ ತರಬೇತಿಯನ್ನು ನೀಡಲು ಅನುದಾನ ಘೋಷಣೆ.
- ಬೆಂಗಳೂರು ನಗರದಲ್ಲಿ ನಿರ್ಮಿಸಿರುವ ಹಜ್ ಭವನದಲ್ಲಿ ಅಲ್ಪಸಂಖ್ಯಾತರ ಯುವ ಜನರಿಗೆ 10 ತಿಂಗಳ ವಸತಿಸಹಿತ IAS/KAS ಮತ್ತು ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿಗಳನ್ನು ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಪ್ರಾರಂಭಕ್ಕೆ ನಿರ್ಧಾರ.
- ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ವಿಶ್ವದಲ್ಲಿ 250 ರೊಳಗೆ University Ranking ಹೊಂದಿರುವ ಪ್ರತಿಷ್ಠಿತ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಪದವಿ ಮತ್ತು ಸ್ನಾತಕೋತ್ತರ ವ್ಯಾಸಂಗ ಮಾಡಲು ಅನುಕೂಲವಾಗುವಂತೆ ಶೂನ್ಯ ಬಡ್ಡಿ ದರದಲ್ಲಿ ಪ್ರತಿ ವಿದ್ಯಾರ್ಥಿಗೆ 20 ಲಕ್ಷ ರೂ. ಸಾಲ ಸೌಲಭ್ಯ ಒದಗಿಸುವುದಾಗಿ ಘೋಷಣೆ.

NAMMAKPSC ACADEMY HEBBAL | VIJAYANAGAR BREAKING BARRIERS TO GREATNESS

## ಹಿಂದುಳಿದ ವಿದ್ಯಾರ್ಥಿಗಳಿಗೆ ಶಿಕ್ಷಣ

### ಅರಿವು ಯೋಜನೆ ಪುನಾರಾರಂಭ

- ವೈದ್ಯಕೀಯ, ಇಂಜಿನಿಯರಿಂಗ್ ಮತ್ತು ಇತರೆ ವೃತ್ತಿಪರ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿದ್ದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ನಮ್ಮ ಸರ್ಕಾರದ ಅವಧಿಯಲ್ಲಿ ಅರಿವು ಎಂಬ ಯೋಜನೆಯ ಮುಖಾಂತರ ವಾರ್ಷಿಕ ಒಂದು ಲಕ್ಷ ರೂ.ಗಳ ಸಾಲವನ್ನು ಶೇ.2ರ ಬಡ್ಡಿ ದರದಲ್ಲಿ ಮಂಜೂರು ಮಾಡಲಾಗುತ್ತಿತ್ತು. ವ್ಯಾಸಂಗ ಪೂರ್ಣಗೊಳಿಸಿದ 6 ತಿಂಗಳ ನಂತರ ಅಂತಹ ವಿದ್ಯಾರ್ಥಿಯು ಶೇ2ರ ಸೇವಾಶುಲ್ಕದೊಂದಿಗೆ ಸಾಲವನ್ನು ಮರುಪಾವತಿ ಮಾಡಬೇಕಾಗುತ್ತದೆ. ಈ ಯೋಜನೆಯಡಿ ಕುಟುಂಬದ ವಾರ್ಷಿಕ ಆದಾಯ ಮಿತಿ ರೂ.8.00ಲಕ್ಷಗಳು ಮೀರಿರಬಾರದು. ಈ ಕಾರ್ಯಕ್ರಮವನ್ನು ಹಿಂದಿನ ಸರ್ಕಾರವು 2020-21ನೇ ಸಾಲಿನಿಂದ ಸ್ಥಗಿತಗೊಳಿಸಿತ್ತು.

### ವಿದ್ಯಾಸಿರಿ ಮತ್ತೆ ಆರಂಭ

- ವಿದ್ಯಾಸಿರಿ ಯೋಜನೆಯಡಿ ಸರ್ಕಾರದ ವಸತಿ ನಿಲಯಗಳಲ್ಲಿ ಪ್ರವೇಶ ದೊರಕದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಊಟ ಮತ್ತು ವಸತಿಗಾಗಿ ವಾರ್ಷಿಕ 15,000 ರೂ. ನೀಡಲಾಗುತ್ತಿತ್ತು. ಈ ಯೋಜನೆಯಿಂದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಪಡೆಯಲು ಹೆಚ್ಚಿನ ಅನುಕೂಲವಾಗುವುದರಿಂದ ಪ್ರಸಕ್ತ ಸಾಲಿನಲ್ಲಿ ಈ ಕಾರ್ಯಕ್ರಮವನ್ನು ಮುಂದುವರೆಸಲಾಗುವುದು.

### ವಿದೇಶದಲ್ಲಿ ಉನ್ನತ ಶಿಕ್ಷಣಕ್ಕೆ ಅನುದಾನ

- ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಮಾಡಿದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಸರ್ಕಾರವು ಶೂನ್ಯ ಬಡ್ಡಿ ದರದಲ್ಲಿ ಪ್ರತಿ ವಿದ್ಯಾರ್ಥಿಗೆ 20 ಲಕ್ಷ ರೂ.ಗಳ ಸಾಲ ಸೌಲಭ್ಯ ಒದಗಿಸುವ ಮೂಲಕ 10 ಕೋಟಿ ರೂ. ವೆಚ್ಚದಲ್ಲಿ ಮುಂದುವರೆಸಲಿದೆ.

### ಶುಚಿ ಸಂಭ್ರಮ ಕಿಟ್ ವಿತರಣೆ ಮತ್ತೆ ಚಾಲನೆ

- ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳಲ್ಲಿದ್ದ ಎಲ್ಲಾ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ನಿಲಯಾರ್ಥಿಗಳಿಗೆ ಪ್ರತಿ ತಿಂಗಳು 'ಶುಚಿ ಸಂಭ್ರಮ ಕಿಟ್' (ಮೈಸೋಪು, ಬಟ್ಟೆ ಸೋಪು, ಟೂತ್ ಪೇಸ್ಟ್, ಕೊಬ್ಬರಿ ಎಣ್ಣೆ)ವಿತರಿಸಲಿದೆ. ಆರೋಗ್ಯವನ್ನು ಕಾಪಾಡಿಕೊಳ್ಳುವ ಜೊತೆಯಲ್ಲಿ ಶುಚಿತ್ವದ ಪಾಠವನ್ನು ಬಾಲ್ಯದಿಂದಲೇ ಕಲಿಯಬೇಕು ಎನ್ನುವುದು ಸರ್ಕಾರದ ಆಶಯವಾಗಿದೆ.

NUMBER 1 INSTITUTE FOR KPSC EXAMS
WWW.NAMMAKPSC.COM
PRELIMS
MAINS
EXAMS
ONLINE / OFFLINE CLASSES
CURRENT AFFAIRS MAGAZINE
COMPREHENSIVE MATERIALS
TEST SERIES
MENTORSHIP
VISIT NOW!
OR CALL 9886151564 / 9886777417

## ಆರೋಗ್ಯ



- ಸಮಾಜದ ದುರ್ಬಲ ವರ್ಗಗಳಲ್ಲಿ ಕ್ಷಯರೋಗವನ್ನು ಪ್ರಾರಂಭಿಕ ಹಂತದಲ್ಲಿಯೇ ಪತ್ತೆಹಚ್ಚಲು ಸಮುದಾಯ ಆಧಾರಿತ ತಪಾಸಣಾ ಚಟುವಟಿಕೆಗಳನ್ನು ಕೈಗೊಳ್ಳಲಾಗುವುದು. ರಾಜ್ಯದ ಎಂಟು ಜಿಲ್ಲೆಗಳಲ್ಲಿ ಪ್ರಾಯೋಗಿಕವಾಗಿ, ಪ್ರತಿ ಜಿಲ್ಲೆಗೆ ಎರಡರಂತೆ ಕೈಚಾಲಿತ-ಕ್ಷ-ಕಿರಣ (Hand Held X-ray) ಉಪಕರಣವನ್ನು ಒದಗಿಸಲಾಗುವುದು.
- ಮಧುಮೇಹ ಮತ್ತು ಅಧಿಕ ರಕ್ತದೊತ್ತಡ ಹೊಂದಿರುವ ರೋಗಿಗಳನ್ನು ಪತ್ತೆಹಚ್ಚಲು ಮತ್ತು ಅಗತ್ಯ ಔಷಧಗಳನ್ನು ಅವರ ಮನೆ ಬಾಗಿಲಿಗೆ ತಲುಪಿಸಲು ಪ್ರಾಯೋಗಿಕವಾಗಿ ರಾಜ್ಯದ ನಾಲ್ಕು ವಿಭಾಗಗಳ ಎಂಟು ಜಿಲ್ಲೆಗಳಲ್ಲಿ ಸಮಗ್ರ ತಪಾಸಣೆ ಕಾರ್ಯಕ್ರಮವನ್ನು ಜಾರಿಗೊಳಿಸಲಾಗುವುದು.
- **ಆಶಾಕಿರಣ':** ಆಶಾಕಿರಣ' ಎಂಬ ಕಾರ್ಯಕ್ರಮದಡಿಯಲ್ಲಿ ಅಭಿಯಾನ ರೂಪದಲ್ಲಿ ಕಣ್ಣಿನ ಶಿಬಿರಗಳು, ಕನ್ನಡಕ ವಿತರಣೆ ಮತ್ತು ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸೆಗಳ ಚಟುವಟಿಕೆಗಳನ್ನು ಹಂತ ಹಂತವಾಗಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ನಡೆಸಲಾಗುವುದು. 2023-24ನೇ ಸಾಲಿನಲ್ಲಿ ಚಿತ್ರದುರ್ಗ, ರಾಯಚೂರು, ಉತ್ತರ ಕನ್ನಡ ಮತ್ತು ಮಂಡ್ಯ ಜಿಲ್ಲೆಗಳಲ್ಲಿ ಪ್ರಾರಂಭಿಸಲಾಗುವುದು.



- **ಬ್ರೇನ್ ಹೆಲ್ತ್ ಇನಿಷಿಯೇಟಿವ್:** ಬ್ರೇನ್ ಹೆಲ್ತ್ ಇನಿಷಿಯೇಟಿವ್ ಜಾರಿಗೊಳಿಸಲು ಅನುದಾನ ನೀಡಲಾಗಿದೆ. ಈ ಯೋಜನೆಯನ್ನು ಇಡೀ ರಾಜ್ಯಕ್ಕೆ ಹಬ್ ಮತ್ತು ಸ್ಪೋಕ್ ಮಾದರಿಯಲ್ಲಿ 25 ಕೋಟಿ ರೂ. ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುವುದು.

2022 ರಲ್ಲಿ NITI ಆಯೋಗ್ ಸಹಯೋಗದಲ್ಲಿ ನಿಮ್ಹಾನ್ಸ್ ಕೈಗೊಂಡಿರುವ 'ಬ್ರೈನ್ ಹೆಲ್ತ್ ಇನಿಶಿಯೇಟಿವ್' ಅನ್ನು ಕರ್ನಾಟಕವು ದೇಶದಲ್ಲಿಯೇ ಮೊದಲ ಬಾರಿಗೆ ಪ್ರಾರಂಭಿಸಿದೆ. ನಿಮ್ಹಾನ್ಸ್‌ನ ತಜ್ಞರು ಜಿಲ್ಲೆಗಳಲ್ಲಿ ವೈದ್ಯರಿಗೆ ಮಾನಸಿಕ ರೋಗಿಗಳಿಗೆ ಚಿಕಿತ್ಸೆ ನೀಡುವ ತರಬೇತಿ ಕೊಡುವ ಉಪಕ್ರಮವಾಗಿದೆ. ಇದರಿಂದಾಗಿ ಮೆದುಳಿನ ಆರೋಗ್ಯ ಉತ್ತಮವಾಗುತ್ತದೆ. ಮಾನಸಿಕ ರೋಗಿಗಳು ನೇರವಾಗಿ ನಿಮ್ಹಾನ್ಸ್‌ಗೆ ಬರದೇ ಸ್ಥಳೀಯ ಮಟ್ಟದಲ್ಲೇ ಸೇವೆ ಪಡೆಯಬಹುದು ಜನಪ್ರಿಯ ಕ್ರಿಕೆಟಿಗ ರಾಬಿನ್ ಉತ್ತಪ್ಪ, ಕರ್ನಾಟಕದ ಮೆದುಳು ಆರೋಗ್ಯ ಉಪಕ್ರಮದ ರಾಯಭಾರಿಯಾಗಿದ್ದಾರೆ.

- **ಬಡವರಿಗೆ ಉಚಿತ ಡಯಾಲಿಸಿಸ್ ಸೌಲಭ್ಯ** ಒದಗಿಸಲು ಕ್ರಮ ಕೈಗೊಳ್ಳಲಾಗಿತ್ತು. ಇದೀಗ ಏಕಬಳಕೆಯ ಡಯಾಲೈಸರ್‌ಗಳನ್ನು ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಅಳವಡಿಸುವ ಮೂಲಕ ಸೇವೆಯ ಗುಣಮಟ್ಟವನ್ನು ಸುಧಾರಿಸಲಾಗುವುದು. ಇದರೊಂದಿಗೆ ರಾಜ್ಯದಲ್ಲಿ ಈಗಾಗಲೇ ಅಸ್ತಿತ್ವದಲ್ಲಿರುವ 173 ಡಯಾಲಿಸಿಸ್ ಕೇಂದ್ರಗಳನ್ನು 219 ಕ್ಕೆ ಹೆಚ್ಚಿಸಲಾಗುವುದು.
- **ಮಹಿಳೆಯರಲ್ಲಿ ರಕ್ತಹೀನತೆ ಮತ್ತು ಅಪೌಷ್ಟಿಕತೆ:** ರಾಜ್ಯದಲ್ಲಿ ನವಜಾತ ಶಿಶುಗಳು, ಮಕ್ಕಳು, ಹದಿಹರೆಯದವರು, ಗರ್ಭಿಣಿಯರು, ತಾಯಂದಿರು ಮತ್ತು ಸಂತಾನೋತ್ಪತ್ತಿ ವಯಸ್ಸಿನ ಮಹಿಳೆಯರಲ್ಲಿ ರಕ್ತಹೀನತೆ ಮತ್ತು ಅಪೌಷ್ಟಿಕತೆಯನ್ನು ನಿವಾರಿಸಲು ಸಮಗ್ರವಾದ ಪರೀಕ್ಷೆ, ಚಿಕಿತ್ಸೆ, ಅರಿವು ಮೂಡಿಸುವಿಕೆ ಮತ್ತು ಆರೋಗ್ಯ ಕಾರ್ಯಕರ್ತರ ಸಾಮರ್ಥ್ಯ ಬಲವರ್ಧನೆಗೆ ಕಾರ್ಯಕ್ರಮವನ್ನು ಜಾರಿಗೆ ತರಲಾಗುವುದು. ಇದಕ್ಕಾಗಿ 25 ಕೋಟಿ ರೂ. ಗಳನ್ನು ಒದಗಿಸಲಾಗುವುದು.




- <u>**ಸ್ವಯಂಚಾಲಿತ ಬಾಹ್ಯ ಡಿಫಿಬ್ರಿಲೇಟರ್‌ಗಳು:**</u> ಕರ್ನಾಟಕ ರತ್ನ ಡಾ|| ಪುನೀತ್ ರಾಜ್‌ಕುಮಾರ್ ರವರ ಸ್ಮರಣಾರ್ಥವಾಗಿ ಹಠಾತ್ ಹೃದಯ ಸಂಬಂಧಿ ಸಾವುಗಳನ್ನು ತಡೆಗಟ್ಟಲು ಸ್ವಯಂಚಾಲಿತ ಬಾಹ್ಯ ಡಿಫಿಬ್ರಿಲೇಟರ್‌ಗಳು (AED) ಗಳನ್ನು ಜಿಲ್ಲಾ ಆಸ್ಪತ್ರೆ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಅಳವಡಿಸಲಾಗುವುದು.
- ರಾಜ್ಯದಲ್ಲಿ 15 ಸಿ.ಟಿ ಸ್ಕ್ಯಾನಿಂಗ್ ಮತ್ತು ಆರು ಎಂ.ಆರ್.ಐ ಸ್ಕ್ಯಾನಿಂಗ್ ಕೇಂದ್ರಗಳನ್ನು ಕೆಲವು ಜಿಲ್ಲಾಸ್ಪತ್ರೆಗಳಲ್ಲಿ ಈಗಾಗಲೇ ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಿ, ಉಚಿತ ಪ್ರಯೋಗಾಲಯ ಸೇವೆಗಳನ್ನು ನೀಡಲಾಗುತ್ತಿದೆ. ಈ ಸೇವೆಗಳನ್ನು ರಾಜ್ಯದ ಎಲ್ಲಾ ಜಿಲ್ಲಾ ಆಸ್ಪತ್ರೆಗಳಿಗೂ ವಿಸ್ತರಿಸಲಾಗುವುದು.
- ರಾಜ್ಯವು ಈಗಾಗಲೇ ಮಾಹಿತಿ ತಂತ್ರಜ್ಞಾನದಲ್ಲಿ ಮುಂಚೂಣಿಯಲ್ಲಿರುವಂತೆ ಆರೋಗ್ಯ ತಂತ್ರಜ್ಞಾನದ ಆವಿಷ್ಕಾರಗಳ ಅಳವಡಿಕೆಯಲ್ಲಿಯೂ ಪ್ರಮುಖ ಕೇಂದ್ರವಾಗುವ ಗುರಿ ಹೊಂದಿದೆ. ಈ ನಿಟ್ಟಿನಲ್ಲಿ ಎಂಟು ಕೋಟಿ ರೂ.ಗಳ ವೆಚ್ಚದಲ್ಲಿ ಕರ್ನಾಟಕ ಆರೋಗ್ಯ ತಂತ್ರಜ್ಞಾನ ಪ್ರಯೋಗಾಲಯವನ್ನು ಸ್ಥಾಪಿಸಲಾಗುವುದು.
- ರಾಜ್ಯದಲ್ಲಿ **ಆಯುಷ್ಮಾನ್ ಭಾರತ್ ಡಿಜಿಟಲ್ ಮಿಷನ್ ಯೋಜನೆ** ಹಾಗೂ ಆರೋಗ್ಯ ದಾಖಲಾತಿಗಳ ಡಿಜಿಟಲೀಕರಣ ಸೇರಿದಂತೆ ಇಲಾಖೆಯ ಇನ್ನಿತರ ಎಲ್ಲಾ ಅಂತರ್ಜಾಲ ಉಪಕ್ರಮಗಳನ್ನು ಅನುಷ್ಠಾನ ಮಾಡಲು ಕರ್ನಾಟಕ ಡಿಜಿಟಲ್ ಹೆಲ್ತ್ ಸೊಸೈಟಿಯನ್ನು ಸ್ಥಾಪನೆ ಮಾಡಲಾಗುವುದು.

**ಆಯುಷ್ಮಾನ್ ಭಾರತ್ ಡಿಜಿಟಲ್ ಮಿಷನ್ (ABDM)**

- ಪ್ರಧಾನಮಂತ್ರಿಯವರು 27 ಸೆಪ್ಟೆಂಬರ್ 2021 ರಂದು ಆಯುಷ್ಮಾನ್ ಭಾರತ್ ಡಿಜಿಟಲ್ ಮಿಷನ್ (ABDM) ಗೆ ಚಾಲನೆ ನೀಡಿದರು .
- ಆಯುಷ್ಮಾನ್ ಭಾರತ್ ಡಿಜಿಟಲ್ ಮಿಷನ್ ದೇಶಾದ್ಯಂತ ಆಸ್ಪತ್ರೆಗಳ ಡಿಜಿಟಲ್ ಆರೋಗ್ಯ ಪರಿಹಾರಗಳನ್ನು ಪರಸ್ಪರ ಸಂಪರ್ಕಿಸುತ್ತದೆ. ಮಿಷನ್ ಆಸ್ಪತ್ರೆಗಳ ಪ್ರಕ್ರಿಯೆಗಳನ್ನು ಸರಳಗೊಳಿಸುವುದು ಮಾತ್ರವಲ್ಲದೆ ಜೀವನ ಸೌಕರ್ಯವನ್ನು ಹೆಚ್ಚಿಸುತ್ತದೆ. ಡಿಜಿಟಲ್ ಪರಿಸರ ವ್ಯವಸ್ಥೆಯು ಡಿಜಿಟಲ್ ಸಮಾಲೋಚನೆ, ವೈದ್ಯಕೀಯ ವೈದ್ಯರಿಗೆ ಅವರ ದಾಖಲೆಗಳನ್ನು ಪ್ರವೇಶಿಸಲು ರೋಗಿಗಳ ಒಪ್ಪಿಗೆ, ಇತ್ಯಾದಿಗಳಂತಹ ಇತರ ಸೌಲಭ್ಯಗಳನ್ನು ಸಕ್ರಿಯಗೊಳಿಸುತ್ತದೆ. ಈ ಯೋಜನೆಯ ಅನುಷ್ಠಾನದೊಂದಿಗೆ, ಹಳೆಯ ವೈದ್ಯಕೀಯ ದಾಖಲೆಗಳು ಕಳೆದುಹೋಗುವುದಿಲ್ಲ ಏಕೆಂದರೆ ಪ್ರತಿಯೊಂದು ದಾಖಲೆಯು ಡಿಜಿಟಲ್ ರೂಪದಲ್ಲಿ ಸಂಗ್ರಹವಾಗುತ್ತದೆ.
- ಕಲಬುರಗಿಯ ಗುಲ್ಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ (GIMS) 200 ಹಾಸಿಗೆಯ ಹೊಸ ತಾಯಿ ಮತ್ತು ಮಕ್ಕಳ ಆಸ್ಪತ್ರೆ ನಿರ್ಮಾಣ. ಸುವರ್ಣ ಮಹೋತ್ಸವ ಸಂಭ್ರಮದಲ್ಲಿರುವ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯ ಸೌಲಭ್ಯ ಸುಧಾರಣೆಗೆ ಅನುದಾನ.
- ಮೈಸೂರು, ಕಲಬುರಗಿ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ಕಾರ್ಯಾರಂಭಿಸಲು ಮತ್ತು ಸುಟ್ಟ ಗಾಯಗಳ ಘಟಕ ಸ್ಥಾಪನೆಗೆ ನೆರವು. ಮೈಸೂರು ಮತ್ತು ಕಲಬುರಗಿಯಲ್ಲಿ ಟ್ರಾಮಾ ಕೇರ್ ಸೆಂಟರ್‌ಗಳ ಕಾರ್ಯಾಚರಣೆಗೆ ಅನುದಾನ. ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯಲ್ಲಿ ಸಂಪೂರ್ಣ ಸ್ವಯಂಚಾಲಿತ ಮತ್ತು ಕೇಂದ್ರೀಕೃತ ರಕ್ತನಿಧಿ ನಿರ್ವಹಣಾ ವ್ಯವಸ್ಥೆ ಸ್ಥಾಪನೆ.
- Filbroscan: NIMHANS ಸಂಸ್ಥೆಯ ಆವರಣದಲ್ಲಿ **ಅಂಗಾಂಗ ಜೋಡಣೆಗೆ ಮೀಸಲಾದ ದೇಶದ ಪ್ರಥಮ ಸಾರ್ವಜನಿಕ ಆಸ್ಪತ್ರೆ ಸ್ಥಾಪನೆ** ಹಾಗೂ ನಾನ್ ಆಲ್ಕೋಹಾಲಿಕ್ ಫ್ಯಾಟಿ ಲಿವರ್ ಖಾಯಿಲೆಯ (NAFLD) ರೋಗಿಗಳಲ್ಲಿ ಸಿರೋಸಿಸ್ ಮತ್ತು ಕ್ಯಾನ್ಸರ್ ಪತ್ತೆ ಹಚ್ಚಲು ಒಂದು Filbroscan ಅನ್ನು ಒದಗಿಸಲು ಕ್ರಮ.

**ವೈದ್ಯಕೀಯ ಶಿಕ್ಷಣ**

1. ಪ್ರಸಕ್ತ ಸಾಲಿನಲ್ಲಿ ಗದಗ, ಕೊಪ್ಪಳ, ಕಾರವಾರ ಮತ್ತು ಕೊಡಗು ಜಿಲ್ಲೆಗಳಲ್ಲಿ 450 ಬೆಡ್ ಆಸ್ಪತ್ರೆಗಳ ನಿರ್ಮಾಣ ಪೂರ್ಣಗೊಳಿಸಲು ಕ್ರಮ
2. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ವತಿಯಿಂದ ರಾಮನಗರ ಜಿಲ್ಲೆಯ ಕನಕಪುರ ತಾಲ್ಲೂಕಿನಲ್ಲಿ ಒಂದು ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪನೆಗೆ ಕ್ರಮ
3. ಮೈಸೂರು, ಕಲಬುರಗಿ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳ ಕಾರ್ಯಾರಂಭ ಮತ್ತು ಸುಟ್ಟ ಗಾಯಗಳ ಘಟಕ ಸ್ಥಾಪನೆಗೆ ಕ್ರಮ

4. **ಅಲೈಡ್ ಹೆಲ್ತ್ ಸೈನ್ಸಸ್ ಕಾಲೇಜು:** ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ವತಿಯಿಂದ ಬೆಳಗಾವಿ, ಕಲಬುರಗಿ, ಹುಬ್ಬಳ್ಳಿ, ದಾವಣಗೆರೆ, ದಕ್ಷಿಣ ಕನ್ನಡ ಮತ್ತು ಮೈಸೂರು ಜಿಲ್ಲೆಗಳಲ್ಲಿ ಅತ್ಯಾಧುನಿಕ ಕೌಶಲ್ಯ ಪ್ರಯೋಗಾಲಯಗಳು, ಸಂಶೋಧನಾ ಕೇಂದ್ರ ಮತ್ತು ಒಳಾಂಗಣ ಕ್ರೀಡಾ ಸೌಲಭ್ಯಗಳನ್ನು ಹಾಗೂ ಕಲಬುರಗಿ ಮತ್ತು ಮೈಸೂರು ಜಿಲ್ಲೆಗಳಲ್ಲಿ ಅಲೈಡ್ ಹೆಲ್ತ್ ಸೈನ್ಸಸ್ (Allied Health Sciences) ಕಾಲೇಜುಗಳ ಸ್ಥಾಪನೆಗೆ ಕ್ರಮ

## *ಮಹಿಳಾ ಸಬಲೀಕರಣ*

- ಗೃಹಲಕ್ಷ್ಮಿ ಯೋಜನೆಯಡಿ ಕುಟುಂಬದ ಯಜಮಾನಿಗೆ ಮಾಸಿಕ 2,000 ರೂ. ನಗದು ವರ್ಗಾವಣೆ.
- ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದ **ಶಕ್ತಿ ಯೋಜನೆಯನ್ನು** ಜಾರಿಗೊಳಿಸಲಾಗಿದೆ.
- ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಮಹಿಳಾ ಉದ್ಯಮಿಗಳಿಗೆ ಶೇ.4 ರ ಬಡ್ಡಿ ದರದಲ್ಲಿ ನೀಡಲಾಗುವ ಸಾಲದ ಮಿತಿ ಐದು ಕೋಟಿ ರೂ.ಗಳಿಗೆ ಹೆಚ್ಚಳ,
- ಆಸಿಡ್ ದಾಳಿ ಸಂತ್ರಸ್ತ ಮಹಿಳೆಯರಿಗೆ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಮೂಲಕ ಐದು ಲಕ್ಷ ರೂ.ಗಳವರೆಗೆ ಬಡ್ಡಿ ರಹಿತ ಸಾಲ ಸೌಲಭ್ಯ ಮತ್ತು ರಾಜೀವ್ ಗಾಂಧಿ ವಸತಿ ನಿಗಮದ ಮೂಲಕ ವಸತಿ ಸೌಲಭ್ಯ.

## *ದುರ್ಬಲ, ಹಿಂದುಳಿದ ಮತ್ತು ಅಲಸಂಖ್ಯಾತ ವರ್ಗಗಳ ಕಲ್ಯಾಣ*

- SCSP/TSP ಯೋಜನೆಗೆ ಒಟ್ಟು 34,294 ಕೋಟಿ ರೂ. ಹಂಚಿಕೆ. 2023-24ರ ಫೆಬ್ರವರಿ ಆಯವ್ಯಯಕ್ಕಿಂತ 4079 ಕೋಟಿ ರೂ. ಹೆಚ್ಚಳ.
- SCSP/TSP ಅಧಿನಿಯಮ, 2013ರಡಿ ಹಂಚಿಕೆಯಾಗುವ ಅನುದಾನ ಆ ಸಮುದಾಯಗಳಿಗೆ ಬಳಕೆಯಾಗುವುದನ್ನು ಖಾತರಿ ಪಡಿಸಲು ಕಾಯ್ದೆಯ ಸೆಕ್ಷನ್ 7(ಡಿ) ಅನ್ನು ಕೈಬಿಡಲು ಕ್ರಮ.
- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಹತ್ತು ಕ್ರೈಸ್ ವಸತಿ ಶಾಲೆಗಳಲ್ಲಿ ಉತ್ತಮ ಗುಣಮಟ್ಟದ ಕ್ರೀಡಾ ಸೌಲಭ್ಯವನ್ನು ಒದಗಿಸಲು ಅನುದಾನ.
- **ಸ್ವಾವಲಂಬಿ ಸಾರಥಿ ಯೋಜನೆಯಡಿ** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಯುವಜನರು ನಾಲ್ಕು ಚಕ್ರಗಳ ವಾಹನ ಖರೀದಿಗೆ ಪಡೆಯುವ **ಸಾಲದ ಶೇ.75 ರಷ್ಟು, ಗರಿಷ್ಠ ನಾಲ್ಕು ಲಕ್ಷ ರೂ.** ಸಹಾಯಧನ ನೀಡುವ ಮೂಲಕ ಸ್ವಯಂ ಉದ್ಯೋಗ ಕೈಗೊಳ್ಳಲು ಪ್ರೋತ್ಸಾಹಿಸಲಾಗುವುದು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿಗಳಿಗೆ ಸ್ವಯಂ ಉದ್ಯೋಗಕ್ಕೆ ಪಡೆದ ಸಾಲಕ್ಕೆ ಗರಿಷ್ಠ ಶೇ.20 ರಷ್ಟು ಒಂದು ಲಕ್ಷ ರೂ. ಮೀರದಂತೆ ಸಾಲ ಸಹಾಯಧನ ಸೌಲಭ್ಯ.



- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಒಂದು ಲಕ್ಷ ಯುವಜನರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ಮತ್ತು ಎಲ್ಲಾ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವ ತರಬೇತಿ ನೀಡಲು ಕ್ರಮ.
- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ಯಮಿಗಳು ರಾಷ್ಟ್ರೀಕೃತ ಬ್ಯಾಂಕುಗಳಿಂದ ಪಡೆಯುವ ಎರಡು ಕೋಟಿ ರೂ.ವರೆಗಿನ ಸಾಲಕ್ಕೂ ಸರ್ಕಾರದಿಂದ ಸಮಾನಾಂತರ ಖಾತ್ರಿ ನೀಡುವ ಸೌಲಭ್ಯ. ಚರ್ಮ ಆಧಾರಿತ ಸಾಂಪ್ರದಾಯಿಕ ಕುಶಲಕರ್ಮಿಗಳ ಕುಟುಂಬಗಳ 100 ಯುವಜನರಿಗೆ ದೆಹಲಿ, ತಮಿಳುನಾಡು, ಮಹಾರಾಷ್ಟ್ರ, ಉತ್ತರ ಪ್ರದೇಶ ಮತ್ತು ಪಶ್ಚಿಮ ಬಂಗಾಳದಲ್ಲಿ ತರಬೇತಿ ಕಾರ್ಯಕ್ರಮ.
- ಪರಿಶಿಷ್ಟ ಪಂಗಡದ ಅಲೆಮಾರಿ ಹಾಗೂ ಅರೆ ಅಲೆಮಾರಿ ಸಮುದಾಯಗಳ ಸಮಗ್ರ ಅಭಿವೃದ್ಧಿಗೆ 50 ಕೋಟಿ ರೂ. ಅನುದಾನ ಹಾಗೂ ರಾಜ್ಯದ 8 ಜಿಲ್ಲೆಗಳಲ್ಲಿ ವಾಸಿಸುತ್ತಿರುವ  ಬುಡಕಟ್ಟು ಸಮುದಾಯಗಳ ಜನರಿಗೆ ನೀಡುವ ಪೌಷ್ಟಿಕ ಆಹಾರ ಯೋಜನೆಯನ್ನು 12 ತಿಂಗಳಿಗೆ ಹೆಚ್ಚಿಸಲು 48 ಕೋಟಿ ರೂ. ಅನುದಾನ.
- ಅರಣ್ಯ ಉತ್ಪನ್ನಗಳ ಸಂಸ್ಕರಣೆ ಮತ್ತು ಮೌಲ್ಯವರ್ಧನೆಗಾಗಿ ಬುಡಕಟ್ಟು ಪ್ರದೇಶಗಳಲ್ಲಿ 100 ಅರಣ್ಯ ಉತ್ಪನ್ನ ಘಟಕಗಳನ್ನು TRIFED ಸಮನ್ವಯದಲ್ಲಿ ಸ್ಥಾಪಿಸಲಾಗುವುದು.
- ಹಿಂದುಳಿದ ವರ್ಗಗಳ ಅಲೆಮಾರಿ ಮತ್ತು ಅರೆ ಅಲೆಮಾರಿ ಜಾತಿಗಳ ಕುಲಶಾಸ್ತ್ರೀಯ ಅಧ್ಯಯನ ಕೈಗೊಳ್ಳಲು 2 ಕೋಟಿ ರೂ. ಮೀಸಲಿಡಲಾಗಿದೆ.
- ಜಿಲ್ಲಾ ಮಟ್ಟದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಹಿರಿಯ ನಾಗರಿಕರ ಆರೈಕೆ ಮತ್ತು ನೆರವಿಗಾಗಿ ವೃದ್ಧಾಶ್ರಮಗಳನ್ನು ಸಮಾಜ ಕಲ್ಯಾಣ ಇಲಾಖೆಯ ಕೇಂದ್ರ ಪರಿಹಾರ ಸಮಿತಿ (CRC) ಮತ್ತು NGO ಗಳ ಸಹಭಾಗಿತ್ವದಲ್ಲಿ ಸ್ಥಾಪಿಸಲಾಗುವುದು.
- ನಾಗರಿಕ ಹಕ್ಕುಗಳ ಜಾರಿ ನಿರ್ದೇಶನಾಲಯವನ್ನು ದೌರ್ಜನ್ಯ ತಡೆ ಅಧಿನಿಯಮದಡಿ ರಕ್ಷಣಾ ಕೋಶವನ್ನಾಗಿ ಘೋಷಿಸಲಾಗಿದೆ. ಈ ಕೋಶವು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಅಗತ್ಯ ಕ್ರಮವಹಿಸಲಾಗುವುದು.

**ಹಿಂದುಳಿದ ವರ್ಗಗಳ ಕಲ್ಯಾಣ**

- ಹಿಂದುಳಿದ ವರ್ಗಗಳಲ್ಲೇ ಅತ್ಯಂತ ಹಿಂದುಳಿದವರಾಗಿರುವ ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯದವರನ್ನು ಸಮಾಜದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಈ ಜಾತಿಗಳ ಕುಲಶಾಸ್ತ್ರೀಯ ಅಧ್ಯಯನವನ್ನು ಡಿ. ದೇವರಾಜ ಅರಸು ಸಂಶೋಧನಾ ಸಂಸ್ಥೆ ಮುಖಾಂತರ ಕೈಗೊಳ್ಳಲು ಅನುದಾನ ಘೋಷಣೆ ಮಾಡಿದೆ.
- ಹಿಂದುಳಿದ ವರ್ಗಗಳ ಪ್ರವರ್ಗ-1 ಮತ್ತು ಪ್ರವರ್ಗ-2ಎ ನಲ್ಲಿ ಬರುವ ಸಮುದಾಯದ ಗುತ್ತಿಗೆದಾರರಿಗೆ ಒಂದು ಕೋಟಿ ರೂ. ವರೆಗಿನ ಸಿ ಕಾಮಗಾರಿಗಳಲ್ಲಿ ಮೀಸಲಾತಿ ಸೌಲಭ್ಯ,
- ಹಿಂದುಳಿದ ವರ್ಗದ ಪ್ರವರ್ಗ-1 ಮತ್ತು ಪ್ರವರ್ಗ-2( ಸಮುದಾಯಗಳ ಉದ್ಯಮಿಗಳಿಗೆ ಸೇವಾ ವಲಯದ ಉದ್ಯ ಚಟುವಟಿಕೆಗಳಿಗೆ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಕೋಟಿ ರೂ. ವರೆಗಿನ ಸಾಲಕ್ಕೆ ಶೇ.6 ರಷ್ಟು ಬಡ್ಡಿ ಸಹಾಯಧನ,

NAMMAKPSC ACADEMY HEBBAL | VIJAYANAGAR Est: 2014 BREAKING BARRIERS TO GREATNESS

- **'ಸ್ವಾವಲಂಬಿ ಸಾರಥಿ' ಯೋಜನೆಯಡಿ**, ಹಿಂದುಳಿದ ವರ್ಗಗಳ ನಿರುದ್ಯೋಗಿ ಯುವಜನರು ನಾಲ್ಕು ಚಕ್ರಗಳ ವಾಹನ ಖರೀದಿಗೆ ಪಡೆಯುವ **ಸಾಲಕ್ಕೆ ಶೇ.50 ರಷ್ಟು, ಗರಿಷ್ಠ 3 ಲಕ್ಷ ರೂ.** ಸಹಾಯಧನ ನೀಡುವ ಮೂಲಕ ಸ್ವಯಂ ಉದ್ಯೋಗ ಕೈಗೊಳ್ಳಲು ಪ್ರೋತ್ಸಾಹಕ್ಕೆ ನಿರ್ಧಾರ.
- ಸ್ವಯಂ ಉದ್ಯೋಗ ಸಾಲ ಯೋಜನೆಯಡಿ ಸ್ವಯಂ ಉದ್ಯೋಗಾವಕಾಶಗಳನ್ನು ಕಲ್ಪಿಸಿಕೊಡಲು ವಾಣಿಜ್ಯ ಬ್ಯಾಂಕುಗಳ ಮೂಲಕ ಸಾಲ ಪಡೆದಲ್ಲಿ ಶೇ.20 ರಷ್ಟು ಅಥವಾ ಗರಿಷ್ಠ ಒಂದು ಲಕ್ಷ ರೂ. ಗಳ ಸಾಲ ಸಹಾಯಧನವನ್ನು ವಾಣಿಜ್ಯ ಬ್ಯಾಂಕುಗಳ ಮುಖಾಂತರ ನೀಡಲು ನಿರ್ಧರಿಸಲಾಗಿದೆ.

**ಅಲಸಂಖ್ಯಾತ**

- 126 ಶಾದಿ ಮಹಲ್ ಮತ್ತು ಸಮುದಾಯ ಭವನಗಳ ನಿರ್ಮಾಣ ಕಾರ್ಯಗಳನ್ನು ಪೂರ್ಣಗೊಳಿಸಲು ಕ್ರಮ,
- 868 ಹಿಂದೂಯೇತರ ಧಾರ್ಮಿಕ ಸಂಸ್ಥೆಗಳಿಗೆ ನೀಡಲಾಗುತ್ತಿರುವ ತಸ್ತಿಕ್ ಮೊತ್ತ 60,000 ರೂ. ಗಳಿಗೆ ಹೆಚ್ಚಳ.
- 2023-24 13 ವಿಶೇಷ ಅಭಿವೃದ್ಧಿ ಮುಖ್ಯಮಂತ್ರಿಗಳ ಅಭಿವೃದ್ಧಿ ಕಾರ್ಯಕ್ರಮಗಳಡಿ ಯೋಜನೆ ಹಾಗೂ ಅಭಿವೃದ್ಧಿ ಅಲಸಂಖ್ಯಾತರ ಕಾಲೋನಿ ಅಲ್ಪಸಂಖ್ಯಾತರ ಸಮುದಾಯಗಳಿಗೆ ವಿವಿಧ ಕಾರ್ಯಕ್ರಮಗಳಿಗೆ ಒಟ್ಟು ಅನುದಾನ.
- ಜೈನರ ಪ್ರಮುಖ ಪುಣ್ಯಕ್ಷೇತ್ರಗಳ ಅಭಿವೃದ್ಧಿಗಾಗಿ ಅನುದಾನ.
- ಕರ್ನಾಟಕ ಕ್ರಿಶ್ಚಿಯನ್ ಅಭಿವೃದ್ಧಿ ನಿಗಮ ಸ್ಥಾಪನೆಗೆ ಕ್ರಮ ಅನುದಾನ.
- ರಾಜ್ಯದಲ್ಲಿರುವ ವಕ್ಫ್ ಆಸ್ತಿಗಳ ಸಂರಕ್ಷಣೆ ಮತ್ತು ಅಭಿವೃದ್ಧಿಗಾಗಿ ನೆರವು. ಮೈಸೂರು, ಕಲಬುರಗಿ ಮತ್ತು ಹುಬ್ಬಳ್ಳಿ ಗುರುದ್ವಾರಗಳ ಅಭಿವೃದ್ಧಿಗೆ ಅನುದಾನ.
- ಗುರುದ್ವಾರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಗ್ರಂಥಿಗಳಿಗೆ ಮಾಸಿಕ ಗೌರವಧನ ಸೌಲಭ್ಯ.
- ವಿವಿಧ ವಸತಿ ಯೋಜನೆಗಳಡಿ ನಿರ್ಮಾಣದ ವಿವಿಧ ಹಂತಗಳಲ್ಲಿರುವ ಮೂರು ಲಕ್ಷ ಮನೆಗಳನ್ನು ಪೂರ್ಣಗೊಳಿಸಲು 2,450 ಕೋಟಿ ರೂ. ಅನುದಾನ.

**ಅಸಂಘಟಿತ ವಲಯಗಳಲ್ಲಿ ಇ-ಕಾಮರ್ಸ್ ಸಂಸ್ಥೆಗಳಲ್ಲಿ ಪೂರ್ಣಕಾಲಿಕ/ಅರೆಕಾಲಿಕ ನೌಕರರಾಗಿ ಕಾರ್ಯನಿರ್ವಹಿಸುತ್ತಿರುವ ಒಟ್ಟು 4 ಲಕ್ಷ ರೂ. ಗಳ ಜೀವವಿಮೆ ಹಾಗೂ ಅಪಘಾತ ವಿಮಾ ಸೌಲಭ್ಯ.**

**ರಾಜ್ಯದ ಕಾರ್ಮಿಕ ರಾಜ್ಯ ವಿಮಾ ಆಸ್ಪತ್ರೆಗಳಲ್ಲಿ 85 ಕೋಟಿ ರೂ. ವೆಚ್ಚದಲ್ಲಿ ವಿವಿಧ ವೈದ್ಯಕೀಯ ಸೌಲಭ್ಯಗಳ ಉನ್ನತೀಕರಣ. ಎಲ್ಲಾ ಕಾರ್ಮಿಕ ರಾಜ್ಯ ವಿಮಾ ಆಸ್ಪತ್ರೆಗಳಲ್ಲಿ ಆಯುಷ್ ವಿಭಾಗ ಪ್ರಾರಂಭ. 100 ಕೋಟಿ ರೂ. ವೆಚ್ಚದಲ್ಲಿ ರಾಜ್ಯದಲ್ಲಿ 50 ವರ್ಷಗಳನ್ನು ಪೂರೈಸಿದ 12 ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳ ಅಭಿವೃದ್ಧಿ.**

## ಗ್ರಾಮೀಣಾಭಿವೃದ್ಧಿ

- ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಮೂಲಕ 25 ಲಕ್ಷ ಮನೆಗಳಿಗೆ ನಳ ಸಂಪರ್ಕ, 5000 ಸಾವಿರ ಶಾಲಾ ಆವರಣ **'ವಿದ್ಯಾಧಾಮ'ಗಳಾಗಿ** ಉನ್ನತೀಕರಣ, 4000 ಗ್ರಾಮ ಪಂಚಾಯಿತಿಗಳಲ್ಲಿ **'ಕೂಸಿನ ಮನೆ'** ಶಿಶುಪಾಲನಾ ಕೇಂದ್ರ ಆರಂಭಿಸುವುದು ಸೇರಿದಂತೆ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯನ್ನು ಇನ್ನಷ್ಟುಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರುವ ಉದ್ದೇಶದಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ 18,038 ಕೋಟಿ ರು. ನಿಗದಿ ಮಾಡಲಾಗಿದೆ.

1. **ಜಲ್ ಜೀವನ್ ಮಿಷನ್** ಯೋಜನೆಯಡಿ ಸುಸ್ಥಿರ ಜಲಮೂಲ ಆಧರಿಸಿ 118 ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಅನುಷ್ಠಾನದ ಮೂಲಕ 25 ಲಕ್ಷ ಮನೆಗಳಿಗೆ ನಳಸಂಪರ್ಕ ಒದಗಿಸುವ ಗುರಿ.

**ಜಲ ಜೀವನ್ ಮಿಷನ್ ಯೋಜನೆ** : ಜಲ ಜೀವನ್ ಮಿಷನ್, 2024 ರ ವೇಳೆ ಗೆ ಗ್ರಾಮೀಣ ಭಾರತದ ಪ್ರತಿಯೊಂದು ಮನೆಗೆ ನಲ್ಲಿಯ ಮೂಲಕ ಸುರಕ್ಷಿತ ಮತ್ತುಸಮರ್ಪಕ ಕುಡಿಯುವ ನೀರನ್ನು ಒದಗಿಸಲು ಕಲ್ಪಿಸಲಾಗಿದೆ. ಪ್ರತಿ ವ್ಯಕ್ತಿಗೆ ದಿನಕ್ಕೆ 55 ಲೀಟರ್ ನೀರು ಪೂರೈಕೆಯನ್ನು ಕಲ್ಪಿಸುತ್ತದೆ. · ಜಲ ಜೀವನ್ ಮಿಷನ್ ನೀರಿನ ಸಮುದಾಯದ ವಿಧಾನವನ್ನು ಆಧರಿಸಿದೆ ಮತ್ತುಮಿಷನ್ನ ಪ್ರಮುಖ ಅಂಶವಾಗಿ ವ್ಯಾಪಕವಾದ ಮಾಹಿತಿ, ಶಿಕ್ಷಣ ಮತ್ತುಸಂವಹನವನ್ನು ಒಳಗೊಂ ಡಿರುತ್ತದೆ. ಮಿಷನ್ ಅನ್ನು ಆಗಸ್ಟ್ 15, 2019 ರಂದು ಪ್ರಾರಂಭಿಸಲಾಯಿತು.· ಜಲ ಜೀವನ್ ಮಿಷನ್, ಜಲ ಶಕ್ತಿಸಚಿವಾಲಯದ ಅಡಿಯಲ್ಲಿಕೇಂದ್ರ ಸರ್ಕಾರದ ಯೋಜನೆಯಾಗಿದ

2.ನರೇಗಾ ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ 5000 ಗೋಮಾಳ ಪ್ರದೇಶಗಳು, 50 ಸಾವಿರ ಹುಲ್ಲುಗಾವಲು ಪ್ರದೇಶಗಳು, ಎರಡು ಲಕ್ಷ ಬರ ಪರಿಹಾರ ಕಾಮಗಾರಿಗಳು, 81 ಸಾವಿರ ಪ್ರವಾಹ ನಿಯಂತ್ರಣ ಕಾಮಗಾರಿಗಳು ಹಾಗೂ 4268 ಭೂ ಕುಸಿತ ತಡೆ ಕಾಮಗಾರಿಗಳು ಮತ್ತು 27,903 ಸ್ಮಶಾನ ಭೂಮಿಯನ್ನು 'ಶಾಂತಿಧಾಮ'ಗಳನ್ನಾಗಿ ಅಭಿವೃದ್ಧಿಪಡಿಸುವ ಕಾಮಗಾರಿ ಕೈಗೆತ್ತಿಕೊಳ್ಳಲು ನಿರ್ಧರಿಸಲಾಗಿದೆ.

**3. 4000 ಕೂಸಿನ ಮನೆ:** ಮಹಿಳೆಯರಿಗೆ ಹೆಚ್ಚಿನ ಉದ್ಯೋಗಾವಕಾಶಗಳನ್ನು ಕಲ್ಪಿಸಲು ಹಾಗೂ ಆರು ವರ್ಷದ ಒಳಗಿನ ಮಕ್ಕಳ ಆರೋಗ್ಯ, ಪೌಷ್ಟಿಕತೆ ಮತ್ತು ಸುರಕ್ಷತೆಗಾಗಿ 'ಕೂಸಿನ ಮನೆ' ಎಂಬ ಹೆಸರಿನಲ್ಲಿ 4,000 ಗ್ರಾಮ ಪಂಚಾಯಿತಿಗಳಲ್ಲಿ ಶಿಶುಪಾಲನಾ ಕೇಂದ್ರಗಳನ್ನು ನರೇಗಾ ಯೋಜನೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಯೋಗದೊಂದಿಗೆ ಪ್ರಾರಂಭಿಸಲಾಗುವುದು.

4. **"ಅರಿವು ಕೇಂದ್ರ'**: ಗ್ರಾಮ ಪಂಚಾಯಿತಿಯ ಗ್ರಂಥಾಲಯಗಳನ್ನು 'ಅರಿವು ಕೇಂದ್ರಗಳು' ಎಂದು ಮೇಲ್ದರ್ಜೆಗೇರಿಸುವ ಮೂಲಕ ಡಿಜಿಟಲ್ ಕಲಿಕಾ ಸಾಮಗ್ರಿಗಳು, ವೃತ್ತಿಪರ ಮಾರ್ಗದರ್ಶನ ವ್ಯವಸ್ಥೆ, ಸಂವಿಧಾನದ ಶೈಕ್ಷಣಿಕ ವ್ಯವಸ್ಥೆ, ವಿಶೇಷ ಚೇತನ ಸ್ನೇಹಿ ತಾಂತ್ರಿಕತೆ ಹಾಗೂ ನುರಿತ ವ್ಯಕ್ತಿಗಳಿಂದ ಜ್ಞಾನಾರ್ಜನೆ ಮುಂತಾದ ಸೌಲಭ್ಯಗಳನ್ನು ನೀಡಲಾಗುವುದು. ಜೊತೆಗೆ, ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ವಾರಾಂತ್ಯದಲ್ಲಿಯೂ ತೆರೆಯಲಾಗುವುದು.

4. ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸ್ಥಳೀಯ ಆಡಳಿತವನ್ನು ಬಲಪಡಿಸುವ ಸಲುವಾಗಿ ಪ್ರತಿ ತಾಲ್ಲೂಕಿನಲ್ಲಿ ಒಬ್ಬ ನುರಿತ ಯುವ ಪದವೀಧರರನ್ನು 24 ತಿಂಗಳುಗಳ ಅವಧಿಗೆ 'ಮುಖ್ಯಮಂತ್ರಿಗಳ ಫೆಲೋಶಿಪ್' ಗೆ ಆಯ್ಕೆ ಮಾಡಲಾಗುವುದು. ಈ ಕಾರ್ಯಕ್ರಮಕ್ಕಾಗಿ 10 ಕೋಟಿ ರೂ. ಗಳನ್ನು ಒದಗಿಸಲಾಗುವುದು.

5. ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ 400 ಸಮುದಾಯ ಶೌಚಾಲಯ ಸಂಕೀರ್ಣಗಳನ್ನು ತಲಾ 25 ಲಕ್ಷ ರೂ. ಗಳ ವೆಚ್ಚದಲ್ಲಿ ನಿರ್ಮಿಸಲಾಗುವುದು ಹಾಗೂ ಇವುಗಳ ಕಾರ್ಯಾಚರಣೆ ಮತ್ತು ನಿರ್ವಹಣೆಗೆ ಸೂಕ್ತ ವ್ಯವಸ್ಥೆ ಮಾಡಲಾಗುವುದು. ಇದಕ್ಕಾಗಿ 100 ಕೋಟಿ ರೂ. ಒದಗಿಸಲಾಗುವುದು.

6. ಒಣ ತ್ಯಾಜ್ಯದ ವೈಜ್ಞಾನಿಕ ವಿಲೇವಾರಿಗೆ 27 ಜಿಲ್ಲೆಗಳಲ್ಲಿ ಮೆಟೀರಿಯಲ್ ರಿಕವರಿ ಸೌಲಭ್ಯ ನಿರ್ಮಾಣಕ್ಕೆ ನೆರವು. ಅಭಿವೃದ್ಧಿ ಆಕಾಂಕ್ಷಿ ತಾಲ್ಲೂಕುಗಳಲ್ಲಿ ಅಭಿವೃದ್ಧಿಯ ಬಹು ಆಯಾಮ ಸೂಚ್ಯಂಕಗಳ ಸುಧಾರಣೆಗೆ 3,000 ಕೋಟಿ ರೂ. ವೆಚ್ಚ.

## *ನಗರಾಭಿವೃದ್ಧಿ*

- **'ಬ್ರ್ಯಾಂಡ್ ಬೆಂಗಳೂರು':** ಬೆಂಗಳೂರು ನಗರವನ್ನು ಅಂತಾರಾಷ್ಟ್ರೀಯ ಮಟ್ಟಕ್ಕೆ ಏರಿಸಲು 'ಬ್ರ್ಯಾಂಡ್ ಬೆಂಗಳೂರು' ಪರಿಕಲ್ಪನೆ ಜಾರಿಗೊಳಿಸಲಾಗಿದೆ.




'ಬ್ರ್ಯಾಂಡ್ ಬೆಂಗಳೂರು' ಪರಿಕಲ್ಪನೆಯು ಬೆಂಗಳೂರು ನಗರದ ನಿವಾಸಿಗಳ ಸುರಕ್ಷತೆ ಹಾಗೂ ಅನುಕೂಲವನ್ನು ಕೇಂದ್ರಬಿಂದುವಾಗಿಸಿದೆ. ಈ ಪರಿಕಲ್ಪನೆಯು ನಗರದ ಸಂಚಾರ ವ್ಯವಸ್ಥೆ, ಪರಿಸರ, ಘನತ್ಯಾಜ್ಯ ನಿರ್ವಹಣೆ, ಸಾರ್ವಜನಿಕ ಸ್ಥಳಗಳ ಸದ್ಬಳಕೆ, ಸಾರ್ವಜನಿಕರ ಆರೋಗ್ಯ, ಪ್ರಾಣಿಗಳ ಆರೋಗ್ಯ, ಜನಸ್ನೇಹಿ ಇ-ಆಡಳಿತ, ನೀರಿನ ಭದ್ರತೆ ಹಾಗೂ ಪ್ರವಾಹ ನಿರ್ವಹಣೆ – ಈ 9 ಸವಾಲುಗಳನ್ನು ಯಶಸ್ವಿಯಾಗಿ ಎದುರಿಸುವ ಮೂಲಕ ಬೆಂಗಳೂರನ್ನು ಅಂತಾರಾಷ್ಟ್ರೀಯ ಮಟ್ಟಕ್ಕೆ ಏರಿಸುವುದು ನಮ್ಮ ಗುರಿಯಾಗಿದೆ.

- **ದ್ರವ ತ್ಯಾಜ್ಯ ನಿರ್ವಹಣೆ:** ಪಾರಂಪರಿಕ ಮತ್ತು ದ್ರವ ತ್ಯಾಜ್ಯದ ಸಮರ್ಪಕ ನಿರ್ವಹಣೆ ಹಾಗೂ ಒಳಚರಂಡಿ ನೀರು ಸಂಸ್ಕರಿಸುವ ಆಧುನಿಕ ಪದ್ಧತಿಗಳನ್ನು ಅಳವಡಿಸುವ ಮೂಲಕ ನದಿಗಳು ಮತ್ತು ಕೆರೆಗಳಿಗೆ ಹರಿಯುವ ಮಾಲಿನ್ಯ ನಿಯಂತ್ರಿಸಲು ಬೆಂಗಳೂರಿನಲ್ಲಿ ಮತ್ತು ಇತರೇ ಪಟ್ಟಣಗಳಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು.
- **ತ್ಯಾಜ್ಯ ನೀರು ಸಂಸ್ಕರಣಾ ಘಟಕ:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ 20 ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳನ್ನು ಮೇಲ್ದರ್ಜೆಗೇರಿಸಲು 1,411 ಕೋಟಿ ರೂ. ಮೊತ್ತದ ಯೋಜನೆಗಳಿಗೆ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಸಂಪನ್ಮೂಲದಿಂದ ಅನುಷ್ಠಾನಗೊಳಿಸಲು ಅನುಮೋದನೆ ನೀಡಿದ್ದು, ಮಾರ್ಚ್ 2026 ರೊಳಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ. ಈ ಯೋಜನೆಗಳ ಮೂಲಕ ಬೆಂಗಳೂರಿನಲ್ಲಿ ಸುಸ್ಥಿರ ಜಲ ಮತ್ತು ಪರಿಸರ ಸಂರಕ್ಷಣೆಯಾಗಲಿದೆ.

- **ವೈಜ್ಞಾನಿಕ ತ್ಯಾಜ್ಯ ವಿಲೇವಾರಿ:** ಬೆಂಗಳೂರು ನಗರದಲ್ಲಿ ವೈಜ್ಞಾನಿಕ ತ್ಯಾಜ್ಯ ವಿಲೇವಾರಿಗೆ ಸರ್ಕಾರ ಆದ್ಯತೆ ನೀಡಲಿದೆ. ಬೆಂಗಳೂರು ನಗರದ 97 ಲಕ್ಷ ಟನ್ ನಷ್ಟು ಹಳೆ ತ್ಯಾಜ್ಯವನ್ನು (Legacy Waste) ಜೈವಿಕ ಗಣಿಗಾರಿಕೆ ಮತ್ತು ಜೈವಿಕ ಪರಿಹಾರದ ಮೂಲಕ ಸಂಸ್ಕರಿಸಲಾಗುವುದು ಮತ್ತು ಮುಂದಿನ ಐದು ವರ್ಷಗಳ ಅವಧಿಯಲ್ಲಿ ಇಂತಹ 256 ಎಕರೆ ಭೂಮಿಯನ್ನು ಉದ್ಯಾನವನಗಳಾಗಿ ಪರಿವರ್ತಿಸಲಾಗುವುದು.
- ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಸಂಸ್ಥೆಯ (BSWMCL) ಪರಿಣಾಮಕಾರಿ ಕಾರ್ಯಾಚರಣೆಗೆ ಅನುದಾನ.
- **ಸ್ವಚ್ಛ ಭಾರತ 2.0 ಯೋಜನೆ:** ಕೇಂದ್ರ ಪುರಸ್ಕೃತ ಸ್ವಚ್ಛ ಭಾರತ 2.0 ಯೋಜನೆಯನ್ನು ವೆಚ್ಚ ಹಂಚಿಕೆ ಆಧಾರದಲ್ಲಿ ಜಾರಿಗೊಳಿಸಿದ್ದು, ಬಿಬಿಎಂಪಿ ಸೇರಿದಂತೆ ರಾಜ್ಯದ 314 ನಗರ ಸ್ಥಳೀಯ ಸಂಸ್ಥೆಗಳಿಗೆ ಒಟ್ಟು 4,500 ಕೋಟಿ ರೂ.ಗಳ ಕ್ರಿಯಾ ಯೋಜನೆಗೆ ಅನುಮೋದನೆ ದೊರೆತಿದೆ. ಇದರಲ್ಲಿ ಕೇಂದ್ರ ಸರ್ಕಾರದ ಪಾಲು 1,900 ಕೋಟಿ ರೂ. ಮತ್ತು ರಾಜ್ಯ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಪಾಲು 2,600 ಕೋಟಿ ರೂ. ಗಳಾಗಿವೆ. ಈ ಯೋಜನೆಯಡಿಯಲ್ಲಿ ಸುಸ್ಥಿರ ಘನತ್ಯಾಜ್ಯ ನಿರ್ವಹಣೆ ಮತ್ತು ಬಳಸಿದ ನೀರಿನ ನಿರ್ವಹಣೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು.

**ಸ್ವಚ್ಛ ಭಾರತ್ ಮಿಷನ್-ಅರ್ಬನ್ 2.0 ಬಗ್ಗೆ**

- ಈ ಯೋಜನೆಯನ್ನು 1 ಅಕ್ಟೋಬರ್ 2021ರಲ್ಲಿ ಪ್ರಾರಂಭಿಸಲಾಗಿದೆ.
- ಸ್ವಚ್ಛ ಭಾರತ ಮಿಷನ್-ಅರ್ಬನ್ 2.0 ಎಲ್ಲಾ ನಗರಗಳನ್ನು 'ಕಸ ಮುಕ್ತ' ಮಾಡುವ ಗುರಿ ಹೊಂದಿದ್ದು, ಅಮೃತ್ ವ್ಯಾಪ್ತಿಯ ನಗರಗಳನ್ನು ಹೊರತುಪಡಿಸಿ ಎಲ್ಲಾ ನಗರಗಳಲ್ಲಿ ಬೂದು ಮತ್ತು ಕಪ್ಪು ನೀರಿನ ನಿರ್ವಹಣೆಯನ್ನು ಖಾತ್ರಿಪಡಿಸುತ್ತದೆ ಮತ್ತು ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳನ್ನು ಭದ್ರಪಡಿಸುತ್ತದೆ ಮುಕ್ತ ಮಲವಿಸರ್ಜನೆ ಮುಕ್ತ+(ಒಡಿಎಫ್+) ಮತ್ತು ಒಡಿಎಫ್ ++, ಆ ಮೂಲಕ ನಗರ ಪ್ರದೇಶಗಳಲ್ಲಿ ಸುರಕ್ಷಿತ ನೈರ್ಮಲ್ಯದ ದೃಷ್ಟಿಕೋನವನ್ನು ಇದರ ಮೂಲಕ ಅರಿತುಕೊಳ್ಳಬಹುದಾಗಿದೆ.ಪರಿಣಾಮಕಾರಿ ಘನ ತ್ಯಾಜ್ಯ ನಿರ್ವಹಣೆಗಾಗಿ,ಪುರಸಭೆಯ ಘನ ತ್ಯಾಜ್ಯಗಳ ವೈಜ್ಞಾನಿಕ ಸಂಸ್ಕರಣೆ ಮತ್ತು ತಾಜ್ಯ ಸ್ಥಳಗಳ ಪುನರ್ವಸತಿ ಮೇಲೆ ಹೆಚ್ಚಿಗೆ ಕೇಂದ್ರಿಕರಿಸಲಾಗುವುದು ಎನ್ನಲಾಗಿದೆ.

- **ವೈಟ್ ಟ್ಯಾಪಿಂಗ್ :** ಪದೇ ಪದೇ ದುರಸ್ತಿಗೆ ಮರುಕಳಿಸುವ ವೆಚ್ಚವನ್ನು ತಪ್ಪಿಸಲು ನಗರದ ರಸ್ತೆಗಳನ್ನು ವೈಟ್ ಟ್ಯಾಪಿಂಗ್ ಮಾಡಲು ಕ್ರಿಯಾ ಯೋಜನೆ ರೂಪಿಸಲಾಗಿದೆ. 2016-17 2017-18ರಲ್ಲಿ ವೈಟ್ ಟಾಪಿಂಗ್ ರಸ್ತೆಗಳಾಗಿ ಅಭಿವೃದ್ಧಿಪಡಿಸಲಾದ 190 ಕಿ.ಮೀ. ರಸ್ತೆಗಳು ಇಂದಿಗೂ ಅತ್ಯುತ್ತಮ ಸ್ಥಿತಿಯಲ್ಲಿವೆ. ಈ ಯೋಜನೆಯನ್ನು ಪುನರಾರಂಭಿಸಿ 2023-24ನೇ ಸಾಲಿನಲ್ಲಿ 100 ಕಿ.ಮೀ. ಉದ್ದದ ಮುಖ್ಯ ರಸ್ತೆಗಳನ್ನು ವೈಟ್ ಟ್ಯಾಪಿಂಗ್ ರಸ್ತೆಗಳಾಗಿ ಅಭಿವೃದ್ಧಿಪಡಿಸಲಾಗುವುದು.
- **ಹೈಡೆನ್ಸಿಟಿ ಕಾರಿಡಾರ್:** ಬೆಂಗಳೂರು ನಗರದಲ್ಲಿರುವ ಹೆಚ್ಚಿನ ಸಂಚಾರ ದಟ್ಟಣೆಯನ್ನು ಹೊಂದಿರುವ 192 ಕಿ.ಮೀ. ಉದ್ದದ ವಿವಿಧ 12 ಪ್ರಮುಖ ರಸ್ತೆಗಳನ್ನು ಹೈಡೆನ್ಸಿಟಿ ಕಾರಿಡಾರ್‌ಗಳೆಂದು (High Density Corridor) 2016ರಲ್ಲಿ ಗುರುತಿಸಲಾಗಿರುತ್ತದೆ. ಈ ಪೈಕಿ 92 ಕಿ.ಮೀ. ಉದ್ದದ ರಸ್ತೆಗಳನ್ನು

ಅಭಿವೃದ್ಧಿಪಡಿಸಲಾಗಿದೆ. 2023-24ನೇ ಸಾಲಿನಲ್ಲಿ 83 ಕಿ.ಮೀ. ಉದ್ದದ ರಸ್ತೆಗಳನ್ನು ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗುವುದು.

- **ಪೆರಿಫೆರಲ್ ರಿಂಗ್ ರಸ್ತೆ ನಿರ್ಮಾಣ:** ಬೆಂಗಳೂರು ನಗರದಲ್ಲಿ ಹೆಚ್ಚುತ್ತಿರುವ ಸಂಚಾರ ದಟ್ಟಣೆ ನಿವಾರಣೆಗಾಗಿ ರೂಪಿಸಿರುವ ಬೆಂಗಳೂರು ಪೆರಿಫೆರಲ್ ರಿಂಗ್ ರಸ್ತೆ ನಿರ್ಮಾಣ ಪ್ರಕ್ರಿಯೆಯು ಕಳೆದ 15 ವರ್ಷಗಳಿಂದ ಪೂರ್ಣಗೊಂಡಿಲ್ಲ. ಈ ಯೋಜನೆಗೆ ಎದುರಾದ ತಾಂತ್ರಿಕ ಅಡಚಣೆಗಳನ್ನು ನಿವಾರಿಸಲು ಸರ್ವೋಚ್ಛ ನ್ಯಾಯಾಲಯದಿಂದ ದಿನಾಂಕ: 25.11.2021 ರಂದು ಅನುಮತಿ ದೊರಕಿದೆ.
- **ನಮ್ಮ ಮೆಟ್ರೋ ಯೋಜನೆ:** ಸುಮಾರು 5.7 ಲಕ್ಷ ಪ್ರಯಾಣಿಕರು ದಿನಂಪ್ರತಿ ಸಂಚರಿಸುವ 70 ಕಿ.ಮೀ. ಉದ್ದದ ಸಂಪರ್ಕ ಜಾಲವನ್ನು ಹೊಂದಿರುವ **ನಮ್ಮ ಮೆಟ್ರೋ ರಾಷ್ಟ್ರದಲ್ಲಿಯೇ 2ನೇ ಅತೀ ದೊಡ್ಡ ಮೆಟ್ರೋ ಸೇವೆಯಾಗಿರುತ್ತದೆ.** 2040 ಅಂತ್ಯದ ವೇಳೆಗೆ ಬೈಯಪ್ಪನಹಳ್ಳಿಯಿಂದ ಕೃಷ್ಣರಾಜಪುರದವರೆಗೆ, ಕೆಂಗೇರಿಯಿಂದ ಚಲ್ಲಘಟ್ಟದವರೆಗೆ, ನಾಗಸಂದ್ರದಿಂದ ಮಾದಾವರದವರೆಗೆ, ಆರ್.ವಿ ರಸ್ತೆಯಿಂದ ಬೊಮ್ಮಸಂದ್ರದವರೆಗೆ ಒಟ್ಟು 27 ಕಿ.ಮೀ.ಗಳ ನೂತನ ಮಾರ್ಗಗಳನ್ನು ಪ್ರಾರಂಭಿಸಲಾಗುವುದು. ಮುಂದಿನ 3 ವರ್ಷಗಳಲ್ಲಿ ಈಗಿರುವ 70 ಕಿಮೀ ನ ಸಂಪರ್ಕಜಾಲವನ್ನ 176 ಕಿಮೀಗೆ ವಿಸ್ತರಿಸುವ ಮೂಲಕ ಮೆಟ್ರೊ ಕಾರ್ಯಾಚರಣೆಯ ಸಂಪರ್ಕ ಜಾಲವನ್ನು ಎರಡೂವರೆ ಪಟ್ಟು ಹೆಚ್ಚಿಸಲಾಗುವುದು. ಪ್ರಗತಿಯಲ್ಲಿರುವ ಏರ್ ಪೋರ್ಟ್ ಲೈನ್ ಕಾಮಗಾರಿಯನ್ನು ಪೂರ್ಣಗೊಳಿಸಿ 2026 ರಲ್ಲಿ ಕಾರ್ಯಾರಂಭ ಮಾಡಲಾಗುವುದು.
- **ರಾಜಕಾಲುವೆಗಳ ಒತ್ತುವರಿ ತೆರವು:** ಬೆಂಗಳೂರಿನಲ್ಲಿ ಮಳೆನೀರು ಸರಾಗವಾಗಿ ಹರಿಯದಿರಲು ರಾಜಕಾಲುವೆಗಳ ಒತ್ತುವರಿ ಪ್ರಮುಖ ಕಾರಣವಾಗಿದ್ದು, ಇದರಿಂದಾಗಿ ಪ್ರವಾಹ ಉಂಟಾಗುವುದಲ್ಲದೆ, ಮಳೆ ಬಂದಾಗ ರಸ್ತೆಗಳಲ್ಲಿ ನೀರು ನಿಂತು, ಮನೆಗಳಿಗೆ ನೀರು ನುಗ್ಗಿ ಅನಾಹುತಗಳು ಸಂಭವಿಸುತ್ತಿವೆ. ಈ ಸಮಸ್ಯೆಯನ್ನು ನಿವಾರಿಸಲು ಕಂದಾಯ ಇಲಾಖೆ ಗುರುತಿಸಿರುವ ಒತ್ತುವರಿಗಳನ್ನು ಆದ್ಯತೆ ಮೇಲೆ ತೆರವುಗೊಳಿಸಲಾಗುವುದು.
- **ಅಮೃತ್ 2.0 ಯೋಜನೆ:** ಕೇಂದ್ರ ಪುರಸ್ಕೃತ ಅಮೃತ್ 2.0 ಯೋಜನೆಯಡಿ ರಾಜ್ಯದ ಒಂದು ಲಕ್ಷಕ್ಕಿಂತ ಕಡಿಮೆ ಜನಸಂಖ್ಯೆ ಇರುವ 287 ಪಟ್ಟಣಗಳಲ್ಲಿ ನೀರು ಸರಬರಾಜು ಮತ್ತು ಜಲಮೂಲಗಳ ಸಂರಕ್ಷಣೆ ಕಾಮಗಾರಿ ಕೈಗೊಳ್ಳಲು 9,230 ಕೋಟಿ ರೂ. ಗಳ ಮೊತ್ತದಲ್ಲಿ ಯೋಜಿಸಲಾಗಿದೆ. ಈ ಅನುದಾನದಲ್ಲಿ ಕೇಂದ್ರ ಸರ್ಕಾರದ ಪಾಲು 4,615 ಕೋಟಿ ರೂ.ಗಳು, ರಾಜ್ಯ ಸರ್ಕಾರದ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಪಾಲು 4,612 ಕೋಟಿ ರೂ.ಗಳಾಗಿರುತ್ತದೆ. ಪ್ರಸಕ್ತ ಸಾಲಿನಲ್ಲಿ ಈ ಯೋಜನೆಗೆ ಒಟ್ಟು 800 ಕೋಟಿ ರೂ. ಗಳನ್ನು ಒದಗಿಸಲಾಗಿದೆ.



**ಅಮೃತ್ (ಅಟಲ್ ಮಿಷನ್ ಫಾರ್ ರಿಜುವೇನೇಶನ್ ಅಂಡ್ ಅರ್ಬನ್ ಟ್ರಾನ್ಸ್ ಫಾರ್ಮೇಶನ್)2.0 ಯೋಜನೆಯ ವಿವರ**

- ಈ ಯೋಜನೆಯನ್ನು 1 ಅಕ್ಟೋಬರ್ 2021ರಲ್ಲಿ ಪ್ರಾರಂಭಿಸಲಾಗಿದೆ.
- ಸುಮಾರು 2.68 ಕೋಟಿ ಟ್ಯಾಪ್ ಸಂಪರ್ಕಗಳನ್ನು ಒದಗಿಸುವ ಮೂಲಕ ಸುಮಾರು 4,700 ನಗರ ಸ್ಥಳೀಯ ಸಂಸ್ಥೆಗಳ ಎಲ್ಲಾ ಮನೆಗಳಿಗೆ 100% ನೀರಿನ ಪೂರೈಕೆಯನ್ನು ಒದಗಿಸುವ ಗುರಿಯನ್ನು ಹೊಂದಿದೆ, ಜೊತೆಗೆ 500 ಅಮೃತ್ ನಗರಗಳಲ್ಲಿ 100% ಒಳಚರಂಡಿ ಮತ್ತು ಕೊಳಚೆನೀರನ್ನು ಒದಗಿಸುತ್ತದೆ 2.64 ಕೋಟಿ ಒಳಚರಂಡಿ ಅಥವಾ ಕೊಳಚೆ ಸಂಪರ್ಕ, ನಗರ ಪ್ರದೇಶಗಳಲ್ಲಿ 10.5 ಕೋಟಿಗೂ ಹೆಚ್ಚು ಜನರಿಗೆ ಪ್ರಯೋಜನವಾಗಿದೆ. ಅಮೃತ್ 2.0 ವೃತ್ತಾಕಾರದ ಆರ್ಥಿಕ ತತ್ವಗಳನ್ನು ಅನುಸರಿಸುತ್ತದೆ ಮತ್ತು ಕಂಪನಿಯ ಪ್ರಕಾರ ಮೇಲ್ಮೈ ಮತ್ತು ಅಂತರ್ಜಲ ಕಾಯಗಳ ಸಂರಕ್ಷಣೆ ಮತ್ತು ನವೀಕರಣವನ್ನು ಉತ್ತೇಜಿಸುತ್ತದೆ.
- **ಇಂದಿರಾ ಕ್ಯಾಂಟೀನ್:** ಮೊದಲನೇ ಹಂತದಲ್ಲಿ (Phase-1) ಹೊಸ ಮೆನುವಿನೊಂದಿಗೆ, ಇಂದಿರಾ ಕ್ಯಾಂಟೀನ್ ಯೋಜನೆಯನ್ನು ಬಿಬಿಎಂಪಿ ಹಾಗೂ ರಾಜ್ಯದ – ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪುನರಾರಂಭ ಮಾಡಲಾಗುವುದು. 2ನೇ ಹಂತದಲ್ಲಿ (Phase-2) ಎಲ್ಲಾ ಹೊಸ ಪಟ್ಟಣಗಳಲ್ಲಿ ಮತ್ತು ಬಿಬಿಎಂಪಿಯ ಹೊಸ ವಾರ್ಡ್‌ಗಳಲ್ಲಿ ಈ ಯೋಜನೆಯನ್ನು ವಿಸ್ತರಿಸಲಾಗುವುದು. ಪ್ರಸಕ್ತ ಸಾಲಿನಲ್ಲಿ ಇಂದಿರಾ ಕ್ಯಾಂಟೀನ್ ಗಳ ದುರಸ್ತಿ, ನವೀಕರಣ ಹಾಗೂ ನಿರ್ವಹಣೆಗೆ ರಾಜ್ಯ ಸರ್ಕಾರವು 100 ಕೋಟಿ ರೂ. ಒದಗಿಸಲಿದೆ.

**ಇಂದಿರಾ ಕ್ಯಾಂಟೀನ್:**ಆಗಸ್ಟ್ 15 , 1917 ರಲ್ಲಿ ಪ್ರಾರಂಭಿಸಲಾಗಿತ್ತು

ಇಂದಿರಾ ಕ್ಯಾಂಟೀನ್ ಎನ್ನುವುದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವಾಲಯ, ತಮಿಳುನಾಡಿನ ಅಮ್ಮ ಉಣವಾಗಮ್‌ನಿಂದ ಪ್ರೇರಿತವಾದ ಕರ್ನಾಟಕ ಸರ್ಕಾರದ ಆಹಾರ ಸಬ್ಸಿಡಿ ಕಾರ್ಯಕ್ರಮವಾಗಿದೆ. ಇದಕ್ಕೆ ಭಾರತದ ಮೊದಲ ಮತ್ತು ಏಕೈಕ ಮಹಿಳಾ ಪ್ರಧಾನ ಮಂತ್ರಿ ಇಂದಿರಾ ಗಾಂಧಿಯವರ ಹೆಸರನ್ನು ಇಡಲಾಗಿದೆ.

## *ಮೂಲಸೌಕರ್ಯ ಅಭಿವೃದ್ಧಿ*



- ಸರ್ಕಾರದ ಕರ್ನಾಟಕ ಭೂ ಕಂದಾಯ ಕಾಯ್ದೆಯ ಸೆಕ್ಷನ್ 95 ಕ್ಕೆ ತಿದ್ದುಪಡಿ; ಸ್ವಯಂ ಘೋಷಣೆ ಮೂಲಕ ಕೃಷಿಯೇತರ ಉದ್ದೇಶಕ್ಕೆ ಜಮೀನಿನ ಬಳಕೆಗೆ ಅವಕಾಶ.
- ದಕ್ಷಿಣ ಕನ್ನಡ, ರಾಯಚೂರು, ಉತ್ತರ ಕನ್ನಡ, ಚಿತ್ರದುರ್ಗ, ಹಾಸನ ಮತ್ತು ಬಳ್ಳಾರಿ ಜಿಲ್ಲೆಗಳ ಜಿಲ್ಲಾಡಳಿತ ಕಟ್ಟಡ ಹಾಗೂ 25 ತಾಲ್ಲೂಕು ಆಡಳಿತ ಸೌಧ ಕಟ್ಟಡ ಕಾಮಗಾರಿ ಪೂರ್ಣಗೊಳಿಸಲು ಕ್ರಮ.

- ಹವಾಮಾನ ವೈಪರೀತ್ಯಗಳ ಪರಿಣಾಮಗಳನ್ನು ಪರಿಹರಿಸಲು ರಾಜ್ಯ ವಿಪತ್ತು ಉಪಶಮನ ನಿಧಿಯಿಂದ (SDMF) ಕಾಮಗಾರಿಗಳನ್ನು ತೆಗೆದುಕೊಳ್ಳಲು ಹಾಗೂ ಉತ್ತರ ಕರ್ನಾಟಕದಲ್ಲಿ ಡಾಪ್ಲರ್ ಹವಾಮಾನ ರಾಡಾರ್ ಕಣ್ಗಾವಲು ಯಂತ್ರವನ್ನು ಸ್ಥಾಪಿಸಲು ಕ್ರಮ.
- ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿಯಡಿಯಲ್ಲಿ (SDRF) ನಿರ್ದಿಷ್ಟ ವಿಪತ್ತು ಅಪಾಯಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ವಿವಿಧ ವಿಪತ್ತು ಪರಿಹಾರ ಕೈಗೊಳ್ಳಲು ಕ್ರಮ.

## ರಸ್ತೆ, ರಾಜ್ಯ ಹೆದ್ದಾರಿಗಳ ಅಭಿವೃದ್ಧಿ




- ರಾಯಚೂರು ಬಳಿಯ ಕಲ್ಮಲಾ ಜಂಕ್ಷನ್ ನಿಂದ ಸಿಂಧನೂರು ಬಳಿಯ ಬಳ್ಳಾರಿ ಲಿಂಗಸುಗೂರು ರಸ್ತೆ ವೃತ್ತದವರೆಗೆ ಒಟ್ಟು 78 ಕಿ.ಮೀ. ಉದ್ದದ ರಸ್ತೆ ಅಭಿವೃದ್ಧಿ. –
- **ಹೈಬ್ರಿಡ್ ಆನ್ಯುಟಿ ಯೋಜನೆ:** ದೇವನಹಳ್ಳಿ - ವಿಜಯಪುರ ಹೆಚ್.ಕ್ರಾಸ್ ಮಾಲೂರು ತಮಿಳುನಾಡು ಗಡಿಯವರೆಗೆ ಕೈಗಾರಿಕಾ ಸಂಪರ್ಕವನ್ನು ಕಲ್ಪಿಸಲು ನಾಲ್ಕು ಮತ್ತು ಆರು ಪಥದ 123 ಉದ್ದದ ರಸ್ತೆ ನಿರ್ಮಾಣ ಕಾಮಗಾರಿಯನ್ನು ಹೈಬ್ರಿಡ್ ಆನ್ಯುಟಿ ಯೋಜನೆಯಡಿ (Hybrid Annuity Model) ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಕೈಗೊಳ್ಳಲಾಗುವುದು.
- **ಸಾರ್ವಜನಿಕರ ಸಂಚಾರ ಮತ್ತು ವಾಣಿಜ್ಯ ಚುಟುವಟಿಕೆಗಳ ಉತ್ತೇಜನ:** 2023-24ನೇ ಸಾಲಿನಲ್ಲಿ ಸಾರ್ವಜನಿಕರ ಸಂಚಾರ ಮತ್ತು ವಾಣಿಜ್ಯ ಚುಟುವಟಿಕೆಗಳ ಉತ್ತೇಜನಕ್ಕೆ ಪ್ರಗತಿಯಲ್ಲಿರುವ ಒಟ್ಟು 2,000 ಕಿ.ಮೀ. ಉದ್ದದ ರಾಜ್ಯ ಹೆದ್ದಾರಿಗಳನ್ನು ಮತ್ತು ರಾಜ್ಯದಲ್ಲಿನ ಅಂತರ್‌ಜಿಲ್ಲಾ ಸಂಪರ್ಕಕ್ಕಾಗಿ ಒಟ್ಟಾರೆಯಾಗಿ 2,400 ಕಿ.ಮೀ. ಉದ್ದದ ಜಿಲ್ಲಾ ರಸ್ತೆಗಳ ಅಭಿವೃದ್ಧಿ ಗುರಿ. ಪ್ರಗತಿಯಲ್ಲಿರುವ ಒಂಬತ್ತು ರೈಲ್ವೆ ಯೋಜನಾ ಕಾಮಗಾರಿಗಳು ಹಾಗೂ ಅನುಮೋದಿತ ರೈಲ್ವೆ ಮೇಲ್ಸೇತುವೆ ಕೆಳ ಸೇತುವೆಗಳ ನಿರ್ಮಾಣ ಕಾಮಗಾರಿಗಳನ್ನು ಪೂರ್ಣಗೊಳಿಸಲು ಆದ್ಯತೆ.
- **'ಏರ್‌ಸ್ಟ್ರಿಪ್'ಗಳ ಅಭಿವೃದ್ಧಿ** : ಪ್ರವಾಸೋದ್ಯಮ ಮತ್ತು ಉದ್ಯಮ ವಲಯಗಳನ್ನು ಉತ್ತೇಜಿಸಲು ಹಾಗೂ ವಿಪತ್ತು ನಿರ್ವಹಣೆ ವೇಳೆ ರಕ್ಷಣಾ ಕಾರ್ಯಗಳಿಗೆ ನೆರವಾಗುವ ಉದ್ದೇಶದಿಂದ ಧರ್ಮಸ್ಥಳ, ಕೊಡಗು ಮತ್ತು ಚಿಕ್ಕಮಗಳೂರಿನಲ್ಲಿ ಹೊಸ 'ಏರ್‌ಸ್ಟ್ರಿಪ್'ಗಳ ಅಭಿವೃದ್ಧಿಗೆ ಕ್ರಮ ಗೊಳ್ಳಲಾಗುವುದು.

- **<u>ಸಮಗ್ರ ನಾಗರಿಕ ವಿಮಾನಯಾನ ನೀತಿ:</u>** ರಾಜ್ಯದಲ್ಲಿ ವಾಯುಯಾನ ಆಧಾರಿತ ಅಭಿವೃದ್ಧಿಗೆ ಉತ್ತೇಜನ ನೀಡಲು ಸಮಗ್ರ ನಾಗರಿಕ ವಿಮಾನಯಾನ ನೀತಿಯನ್ನು ರೂಪಿಸಲಾಗುವುದು. ಈ ನೀತಿಯಡಿ ಕೈಗೆಟಕುವ ಬೆಲೆಯಲ್ಲಿ ವಾಯುಯಾನ ಸಂಚಾರ, ಪ್ರವಾಸೋದ್ಯಮ, ಸರಕು ಸಾಗಣೆ ಹಾಗೂ ಕೈಗಾರಿಕೋದ್ಯಮಗಳ ಅಭಿವೃದ್ಧಿಗೆ ಪೂರಕ ವಾತಾವರಣ ನಿರ್ಮಿಸಲಾಗುವುದು.ವಿಜಯಪುರ ವಿಮಾನ ನಿಲ್ದಾಣದ ಸಿವಿಲ್ ಕಾಮಗಾರಿಗಳನ್ನು ಪೂರ್ಣಗೊಳಿಸಿ ವಿಮಾನ ನಿಲ್ದಾಣದ ಕಾರ್ಯಾಚರಣೆಯನ್ನು ಪ್ರಸಕ್ತ ಸಾಲಿನಲ್ಲಿಯೇ ಪ್ರಾರಂಭಿಸಲಾಗುವುದು.
- **ನಗರ ಅನಿಲ ವಿತರಣಾ ನೀತಿ:** ರಾಜ್ಯದಲ್ಲಿನ ನೈಸರ್ಗಿಕ ಅನಿಲ ವಿತರಣಾ ಜಾಲದ ವಿಸ್ತರಣೆಗೆ ಅನುವು ಮಾಡಿಕೊಡಲು, ರಾಜ್ಯಾದ್ಯಂತ ಏಕರೂಪದ ಅನುಮತಿ ಶುಲ್ಕ ಒಳಗೊಂಡಂತೆ, ನಗರ ಅನಿಲ ವಿತರಣಾ ನೀತಿಯನ್ನು (City Gas Distribution Policy) ರೂಪಿಸಲಾಗುವುದು.

## <u>ಬಂದರುಗಳಲ್ಲಿ ಹೂಳು ತೆಗೆಯುವುದು ಮತ್ತು ಅಭಿವೃದ್ಧಿ</u>

- ಮೀನುಗಾರಿಕಾ ದೋಣಿಗಳು ತಂಗುವ ಜೆಟ್ಟಿಗಳು ಹಾಗೂ ಬಂದರುಗಳಲ್ಲಿ ಹೂಳು ತೆಗೆಯುವುದು ಮತ್ತು ಮಲ್ಪೆ, ಹೊನ್ನಾವರ, ಭಟ್ಕಳ, ಕುಂದಾಪುರ ಮತ್ತು ಬೇಲೆಕೇರಿ ಬಂದರುಗಳಲ್ಲಿ ಎರಡು ವರ್ಷಗಳಿಗೊಮ್ಮೆ ಹೂಳೆತ್ತುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು.
- ರಾಜ್ಯದ ಕಿರು ಬಂದರುಗಳ ವಾಣಿಜ್ಯೀಕರಣ ಮತ್ತು ಸುಸ್ಥಿರ ಕಾರ್ಯನಿರ್ವಹಣೆಗೆ ವಿಸ್ತೃತ ಕ್ರಿಯಾ ಯೋಜನೆಯನ್ನು ರೂಪಿಸಲಾಗುವುದು.
- ನೈಸರ್ಗಿಕ ಮೀನುಗಾರಿಕಾ ಬಂದರುಗಳನ್ನು ಸುಸ್ಥಿತಿಯಲ್ಲಿಡಲು ಸಮಗ್ರ ಕರಾವಳಿ ನಿರ್ವಹಣಾ ಸಮಿತಿಯ ಸಬಲೀಕರಣ ಮಾಡಲಾಗುವುದು.
- **ಬಂದರು ಅವಲಂಬಿತ ಕೈಗಾರಿಕೆಗಳಿಗೆ ಉತ್ತೇಜನ ನೀಡಲು ಉತ್ತರ ಕನ್ನಡ ಜಿಲ್ಲೆಯ ಕೇಣಿಯಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸರ್ವ ಋತು ಡೀಪ್‌ವಾಟರ್ ಗ್ರೀನ್‌ಫೀಲ್ಡ್ ಬಂದರು ಅಭಿವೃದ್ಧಿ ಪಡಿಸಲಾಗುವುದು.**

### <u>ಕೇಣಿ ಗ್ರೀನ್‌ಫೀಲ್ಡ್ ಬಂದರು</u>

- 2022ರ ಸೆಪ್ಟೆಂಬರ್‌ನಲ್ಲಿ ರಾಜ್ಯ ಸರ್ಕಾರವು ಕೇಣಿ ಮತ್ತು ಪಾವಿನಕುರ್ವೆಯಲ್ಲಿ ಆಳ ಸಮುದ್ರದ ಗ್ರೀನ್‌ಫೀಲ್ಡ್ ಬಂದರುಗಳನ್ನು ನಿರ್ಮಿಸಿ, ನಿರ್ವಹಿಸಲು ಜಾಗತಿಕ ಟೆಂಡರ್‌ಗಳನ್ನು ಆಹ್ವಾನಿಸಿತ್ತು.
- ಕೇಣಿ ಪ್ರದೇಶವು ಸುಮಾರು ಎಂಟು ತಿಂಗಳ ಕಾಲ ಸಂಚಾರಕ್ಕೆ ಮುಕ್ತವಾದ ಹವಾಮಾನ ಹೊಂದಿರುವ ಪ್ರದೇಶವಾಗಿದೆ ಎನ್ನಲಾಗಿದ್ದು, ಇಲ್ಲಿ ಉದ್ದೇಶಿತ ಬಂದರು ಪೂರ್ಣಗೊಂಡ ನಂತರ, ವಿಸ್ತಾರವಾದ ಪ್ರದೇಶ, ಉತ್ತಮ ರಸ್ತೆ ಸಂಪರ್ಕದಿಂದಾಗಿ 3ರಿಂದ 5 ಮಿಲಿಯನ್ ಟನ್ ಸರಕು ನಿರ್ವಹಿಸುವ ಸಾಮರ್ಥ್ಯವನ್ನು ಇದು ಹೊಂದಲಿದೆ. ಉತ್ತರದಲ್ಲಿ ಮರ್ಮಗೋವಾ ಮತ್ತು ದಕ್ಷಿಣದಲ್ಲಿ ಹೊಸ ಮಂಗಳೂರು ಬಂದರುಗಳಿಗೆ ಸಹಕಾರಿಯಾಗುವಂತೆ ಆಯಕಟ್ಟಿನ ಸ್ಥಳ ಇದಾಗಿದ್ದು, ಕೊಂಕಣ ರೈಲು ಮಾರ್ಗವು ಉದ್ದೇಶಿತ ಪ್ರದೇಶದಿಂದ ಸುಮಾರು 4 ಕಿ.ಮೀ ದೂರದಲ್ಲಿದೆ. ಸಮೀಪದ ಅಂಕೋಲಾ ರೈಲು ನಿಲ್ದಾಣವು ಇಲ್ಲಿಂದ ಸರಿಸುಮಾರು 6.7 ಕಿಮೀ ದೂರದಲ್ಲಿದೆ.

- ಉತ್ತರ ಕನ್ನಡ ಜಿಲ್ಲೆಯ ಮಂಕಿಯಲ್ಲಿ ಬಹುಪಯೋಗಿ ಬಂದರಿನ ಅಭಿವೃದ್ಧಿಗೆ ಪ್ರಸಕ್ತ ಸಾಲಿನಲ್ಲಿ ಕಾರ್ಯಸಾಧ್ಯತಾ ವರದಿ ಸಿದ್ಧಪಡಿಸಲಾಗುವುದು
- **ಟೆಕ್ನಾಲಜಿ ಇನ್ನೋವೇಶನ್ ಪಾರ್ಕ್:** ಬೆಂಗಳೂರಿನ ಕಾಡುಗೋಡಿಯಲ್ಲಿ 100 ಎಕರೆ ಪ್ರದೇಶದಲ್ಲಿ ಅಭಿವೃದ್ಧಿಪಡಿಸಲು ಕ್ರಮ. ಟೆಕ್ ಪಾರ್ಕ್ ಪರೀಕ್ಷೆ, ವಿನ್ಯಾಸ, ನಾವೀನ್ಯತೆ, ಅರೆವಾಹಕಗಳ ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿ ಸೇವೆಗಳನ್ನು ಒದಗಿಸುತ್ತದೆ, ಜೊತೆಗೆ ತಾಂತ್ರಿಕ ಸಂಶೋಧನಾ ಸಂಸ್ಥೆಯನ್ನು ಕಲ್ಪಿಸುತ್ತದೆ. ಪ್ರಸ್ತಾವಿತ ಸೆಮಿಕಾನ್ ಪಾರ್ಕ್ ಅನ್ನು ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್ (ಕೆಡಿಇಎಂ) ಸ್ವಾಗತಿಸಿದೆ.ಇದು ರಾಜ್ಯದಲ್ಲಿ ಎಲೆಕ್ಟ್ರಾನಿಕ್ಸ್ ಸಿಸ್ಟಮ್ ಡಿಸೈನ್ ಮತ್ತು ಮ್ಯಾನುಫ್ಯಾಕ್ಚರಿಂಗ್ (ESDM) ವಲಯಕ್ಕೆ ಭಾರಿ ಉತ್ತೇಜನವನ್ನು ನೀಡುತ್ತದೆ"
- ಉದ್ಯಮಗಳ ಸ್ಥಾಪನೆಗೆ ಒಂದೇ ಪೋರ್ಟಲ್ ನಲ್ಲಿ ಎಲ್ಲಾ ಪರವಾನಗಿ ನೀಡಲು ಅತ್ಯಾಧುನಿಕ ಏಕಗವಾಕ್ಷಿ ವ್ಯವಸ್ಥೆ ಜಾರಿ.
- ಕೆ.ಜಿ.ಎಫ್. (KGF) ನಲ್ಲಿ ಬೃಹತ್ ಕೈಗಾರಿಕಾ ಟೌನ್‌ಷಿಪ್ ಅನ್ನು ಅಭಿವೃದ್ಧಿಪಡಿಸಲು ಕ್ರಮ.
- ವಿಜಯಪುರ ಜಿಲ್ಲೆಯಲ್ಲಿ ಉತ್ಪಾದನಾ ಕ್ಲಸ್ಟರ್ ಮತ್ತು ದಕ್ಷಿಣ ಕನ್ನಡದಲ್ಲಿ ರಫ್ತು ಆಧಾರಿತ ಕೈಗಾರಿಕೆಗಳ ಕ್ಲಸ್ಟರ್ ಅಭಿವೃದ್ಧಿಗೆ ಕ್ರಮ. ಕೃಷಿ ಉತ್ಪನ್ನಗಳ ಸಂಸ್ಕರಣೆಗೆ ಸಂಬಂಧಿಸಿದ ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ಹೊಸ ನೀತಿ ಜಾರಿ,
- ಕೈಗಾರಿಕೆಗಳ ಸ್ಥಾಪನೆಗೆ ಎರಡು ಎಕರೆವರೆಗಿನ ಕೃಷಿ ಭೂಮಿಯನ್ನು ಕೈಗಾರಿಕಾ ಉದ್ದೇಶಕ್ಕಾಗಿ ಪರಿವರ್ತಿಸದೆ ಬಳಸಲು ಕರ್ನಾಟಕ ಭೂ ಕಂದಾಯ ಕಾಯ್ದೆಗೆ ತಿದ್ದುಪಡಿ.
- **ಬೆಂಗಳೂರಿನ ದೇವನಹಳ್ಳಿ ಏರೋಸ್ಪೇಸ್ ಮತ್ತು ಡಿಫೆನ್ಸ್ ಪಾರ್ಕ್‌ನಲ್ಲಿ ಅತ್ಯಾಧುನಿಕ ಕರ್ನಾಟಕ ಏರೋಸ್ಪೇಸ್ ತಂತ್ರಜ್ಞಾನ ಕೇಂದ್ರ ಸ್ಥಾಪನೆ.**
- ಎಂ.ಎಸ್.ಎಂ.ಇ. ಗಳ ಅನುಕೂಲಕ್ಕಾಗಿ ರಾಜ್ಯದಲ್ಲಿ ಸಾಮಾನ್ಯ ಸೌಲಭ್ಯ ಕೇಂದ್ರಗಳ ಅಭಿವೃದ್ಧಿಗೆ ಕ್ರಮ.
- ರಾಜ್ಯದ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ (KSSIDC) ವತಿಯಿಂದ ಹೊಸದಾಗಿ ಏಳು ಕೈಗಾರಿಕಾ ವಸಾಹತುಗಳ ಸ್ಥಾಪನೆ.
- 10 ಹೆಚ್.ಪಿ. ವರೆಗಿನ ವಿದ್ಯುತ್ ಸಂಪರ್ಕ ಹೊಂದಿರುವ ಮಗ್ಗ ಮತ್ತು ಮಗ್ಗಪೂರ್ವ ಘಟಕಗಳಿಗೆ 250 ಯುನಿಟ್ ವರೆಗೆ ಉಚಿತ ವಿದ್ಯುತ್ ಸೌಲಭ್ಯ. ಮಂಡ್ಯದ ಮೈಸೂರು ಷುಗರ್ ಕಂಪನಿಯ ಪುನರುಜ್ಜೀವನಗೊಳಿಸಲು 50 ಕೋಟಿ ರೂ. ಬಂಡವಾಳ,



## ಸ್ಟಾರ್ಟಪ್ ಉತ್ತೇಜನಕ್ಕೆ ಕ್ರಮಗಳು:

- **'Propel' ಯೋಜನೆ**: ಸ್ಟಾರ್ಟಪ್ ನೀತಿಯಡಿಯಲ್ಲಿ ಅನುದಾನ ನೀಡಿರುವ ಸ್ಟಾರ್ಟ್‌ಅಪ್‌ಗಳ ಪರಿಹಾರಗಳ ಅಳವಡಿಕೆಯನ್ನು ವೇಗಗೊಳಿಸಲು 'Propel' ಎಂಬ ಯೋಜನೆಯನ್ನು ಐದು ಕೋಟಿ ರೂ.ಗಳ ವೆಚ್ಚದಲ್ಲಿ ಆಯೋಜಿಸಲಾಗುವುದು. ಇದಕ್ಕಾಗಿ ಪ್ರಸಕ್ತ ಸಾಲಿನಲ್ಲಿ ಒಂದು ಕೋಟಿ ರೂ. ಅನುದಾನವನ್ನು ನಿಗದಿಪಡಿಸಲಾಗಿದೆ.
- **GIA-MAP ಕಾರ್ಯಕ್ರಮ:** ಸ್ಟಾರ್ಟ್‌ಅಪ್‌ಗಳಿಗೆ ಗ್ಲೋಬಲ್ ಇನ್ನೋವೇಶನ್ ಅಲೈಯನ್ಸ್- ಮಾರುಕಟ್ಟೆ ಪ್ರವೇಶ ಕಾರ್ಯಕ್ರಮ (Global Innovation Alliance- Market Access Programme (GIA-MAP)) ಕಾರ್ಯಕ್ರಮವನ್ನು ವೆಚ್ಚದಲ್ಲಿ ಆಯೋಜಿಸಲಾಗುವುದು. ಇದಕ್ಕಾಗಿ ಪ್ರಸಕ್ತ ಸಾಲಿನಲ್ಲಿ ಒಂದು ಕೋಟಿ ರೂ. ಅನುದಾನವನ್ನು ನಿಗದಿಪಡಿಸಲಾಗಿದೆ.
- **ನ್ಯೂ ಏಜ್ ಇನ್ಕ್ಯುಬೇಶನ್ ನೆಟ್‌ವರ್ಕ್** (NAIN) ಕೇಂದ್ರಗಳನ್ನು ಬೆಂಬಲಿಸಲು ತಂತ್ರಜ್ಞಾನ ವರ್ಗಾವಣೆ ಸಂಸ್ಥೆಯನ್ನು ಸ್ಥಾಪಿಸಲಾಗುವುದು.
- ಜೈವಿಕ-ಬ್ಯಾಂಕ್ (Bio Bank) ಅನ್ನು ಸ್ಥಾಪಿಸಲಾಗುವುದು.
- **ಸೆಂಟರ್ ಆಫ್ ಎಕ್ಸಲೆನ್ಸ್** : ಹೆಲ್ತ್-ಟೆಕ್ ಮತ್ತು ಮೆಡ್-ಟೆಕ್‌ನಲ್ಲಿ ಸೆಂಟರ್ ಆಫ್ ಎಕ್ಸಲೆನ್ಸ್ ಕೇಂದ್ರವನ್ನು ಸ್ಥಾಪಿಸಲಾಗುವುದು.
- ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ **`ಕರ್ನಾಟಕದಲ್ಲಿ ವೈರ್‌ಲೆಸ್ ಮತ್ತು ವೈರ್ಡ್ ತಂತ್ರಜ್ಞಾನಗಳಲ್ಲಿ ಶ್ರೇಷ್ಠತೆಯ ಕೇಂದ್ರ (COEWWT)' ಅನ್ನು** ಸ್ಥಾಪಿಸಲಾಗುವುದು.
- ಸೆಂಟರ್ ಆಫ್ ಎಕ್ಸಲೆನ್ಸ್ ಇನ್ ಡಿಸೈನ್ (Centre of Excellence in Design) ಕೇಂದ್ರವನ್ನು 20 ಕೋಟಿ ರೂ.ಗಳ ಯೋಜನಾ ವೆಚ್ಚದಲ್ಲಿ ಸ್ಥಾಪಿಸಲಾಗುವುದು. ಇದಕ್ಕಾಗಿ ಪ್ರಸಕ್ತ ಸಾಲಿನಲ್ಲಿ ಎಂಟು ಕೋಟಿ ರೂ. ಗಳ ಅನುದಾನವನ್ನು ನಿಗದಿಪಡಿಸಲಾಗಿದೆ.
- **ಕೆಎಸ್‌ಆರ್‌ಎಫ್**: ಕರ್ನಾಟಕ ಸಂಶೋಧನೆ, ಅಭಿವೃದ್ಧಿ ಮತ್ತು ನಾವೀನ್ಯತೆ ನೀತಿಯ ಅನುಷ್ಠಾನಕ್ಕೆ ದೃಢವಾದ ಮತ್ತು ಪಾರದರ್ಶಕ ಆಡಳಿತದ ಚೌಕಟ್ಟನ್ನು ರಚಿಸುವುದು ಹಾಗೂ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಾಡುವುದು ಅಗತ್ಯವಾಗಿದೆ. ಈ ಉದ್ದೇಶಕ್ಕಾಗಿ ಕರ್ನಾಟಕ ರಾಜ್ಯ ಸಂಶೋಧನಾ ಪ್ರತಿಷ್ಠಾನವನ್ನು (ಕೆಎಸ್ ಆರ್‌ಎಫ್) ರಚಿಸಲಾಗುವುದು.
- **ಇ-ಪ್ಲಾಟ್‌ಫಾರ್ಮ್ e-KRDIP**: ಸಂಶೋಧನೆ ಮತ್ತು ನಾವೀನ್ಯತೆ ವ್ಯವಸ್ಥೆಯು ಉದ್ಯಮಗಳು, ವಿಶ್ವವಿದ್ಯಾನಿಲಯಗಳು, ಸಂಶೋಧನಾ ಸಂಸ್ಥೆಗಳು ಮತ್ತು ಸರ್ಕಾರಗಳು ಸೇರಿದಂತೆ ಇವರ ನಡುವಿನ ಸಂಬಂಧಗಳ ಸಂಕೀರ್ಣ ವ್ಯವಸ್ಥೆಯಾಗಿದೆ. ಈ ಎಲ್ಲಾ ಭಾಗೀದಾರರನ್ನು ಒಟ್ಟುಗೂಡಿಸಲು ಮತ್ತು ಅವರ ನಡುವೆ ಸಮನ್ವಯತೆಯನ್ನು ಸಾಧಿಸಲು ಇ-ಪ್ಲಾಟ್‌ಫಾರ್ಮ್ e-KRDIP ಅನ್ನು ರಚಿಸಲಾಗುವುದು.

- ಸ್ಥಳೀಯ ಸಮಸ್ಯೆಗಳನ್ನು ಪರಿಹರಿಸಲು ರೈತರು, ಕುಶಲಕರ್ಮಿಗಳು, ಕಾರ್ಮಿಕರು, ಯಂತ್ರಕಾರರು ಮತ್ತು ಸಾಮಾನ್ಯ ಜನರು ರಚಿಸಿದ ತಳಹಂತದ ನಾವೀನ್ಯತೆಗಳನ್ನು ಗುರುತಿಸಿ, ವ್ಯಾಖ್ಯಾನಿಸಲು ಮತ್ತು ಅವುಗಳಿಗೆ ಮೌಲ್ಯವನ್ನು ದೊರಕಿಸುವ ಮೂಲಕ ವಾಣಿಜ್ಯೀಕರಣಕ್ಕೆ ಬೆಂಬಲವನ್ನು ನೀಡುವ ಯೋಜನೆಗೆ ಐದು ಕೋಟಿ ರೂ. ಒದಗಿಸಲಾಗುವುದು.

## *ಕಲೆ ಮತ್ತು ಸಾಹಿತ್ಯ*

- ಖ್ಯಾತ ಸಾಹಿತಿ **ಕೆ.ಪಿ. ಪೂರ್ಣಚಂದ್ರ ತೇಜಸ್ವಿ** ಅವರ ಹೆಸರಿನಲ್ಲಿ ಸ್ಥಾಪಿಸಿರುವ ಪ್ರತಿಷ್ಠಾನದ ಚಟುವಟಿಕೆಗೆ ನೆರವು ಹಾಗೂ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತ **ಡಾ. ಎಂ. ಎಂ. ಕಲಬುರಗಿ** ಅವರ ಹೆಸರಿನಲ್ಲಿ ಟ್ರಸ್ಟ್ ಸ್ಥಾಪನೆಗೆ ಕ್ರಮ.
- ರಾಮನಗರದ ಜಾನಪದ ಲೋಕಕ್ಕೆ 2 ಕೋಟಿ ರೂ. ಅನುದಾನ. ಕೊಪ್ಪಳ ಜಿಲ್ಲೆಯಲ್ಲಿ ಜಾನಪದ ಲೋಕ ಸ್ಥಾಪನೆಗೆ ಕ್ರಮ. ಮೈಸೂರು ರಾಜ್ಯ ಕರ್ನಾಟಕ ಎಂದು ಮರುನಾಮಕರಣವಾಗಿ 50 ವರ್ಷ ಪೂರ್ಣಗೊಳ್ಳಲಿರುವ ಹಿನ್ನೆಲೆಯಲ್ಲಿ ವಿಶೇಷ ಕಾರ್ಯಕ್ರಮಗಳ ಆಯೋಜನೆ.
- ಬಂಜಾರ ಸಮುದಾಯ ಹಾಗೂ ಬುಡಕಟ್ಟು ಸಮುದಾಯಗಳ ಸಾಂಸ್ಕೃತಿಕ ಮತ್ತು ಜಾನಪದ ನೃತ್ಯ ಕಲೆಗಳ ಪ್ರೋತ್ಸಾಹಕ್ಕೆ ವಿಶೇಷ ಕಾರ್ಯಕ್ರಮ.

### ಕೋಟೆಗಳ ಸಮಗ್ರ ಅಭಿವೃದ್ಧಿ

- ಕಿತ್ತೂರು ಕರ್ನಾಟಕ ಭಾಗದಲ್ಲಿನ ಸವದತ್ತಿ ಯಲ್ಲಮ್ಮನ ಗುಡ್ಡ. ದೇವರಗುಡ್ಡ, ಕಪ್ಪತ್ತಗುಡ್ಡ, ಬಾದಾಮಿ ಬನಶಂಕರಿ, ಲಕ್ಕುಂಡಿ, ಮಾಗಡಿ ಪಕ್ಷಿಧಾಮ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಹಂಪಿ, ಮೈಲಾರ, ಗಾಣಗಾಪುರ, ಸನ್ನತಿ ಮತ್ತು ಮಳಖೇಡ, ಬೀದರ್, ರಾಯಚೂರು ಹಾಗೂ ಕಲಬುರಗಿ ಕೋಟೆಗಳ ಸಮಗ್ರ ಅಭಿವೃದ್ಧಿಗೆ ಕ್ರಮ.

### ಕಡಲ ತೀರದ ಪ್ರವಾಸೋದ್ಯಮ

- ಕಡಲ ತೀರದ ಪ್ರವಾಸೋದ್ಯಮ ಅಭಿವೃದ್ಧಿಗೆ ಕರಾವಳಿ ಪ್ರವಾಸೋದ್ಯಮ ಕಾರ್ಯಪಡೆ ರಚನೆ, ಅಂತಾರಾಷ್ಟ್ರೀಯ ಸರ್ಫಿಂಗ್ ತಾಣವಾಗಿ **ಸಸಿಹಿತ್ಲು** ಕಡಲ ತೀರದ ಅಭಿವೃದ್ಧಿ. ರಾಜ್ಯದ ವಿವಿಧ ಪ್ರವಾಸಿ ತಾಣಗಳಲ್ಲಿ ಯಾತ್ರಿನಿವಾಸ/ಡಾರ್ಮಿಟರಿ ನಿರ್ಮಾಣಕ್ಕೆ ಕ್ರಮ.

### ವಸ್ತುಸಂಗ್ರಹಾಲಯಗಳು

- ಮೈಸೂರಿನ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಆವರಣವನ್ನು ಮೇಲ್ದರ್ಜೆಗೇರಿಸಲು ಕ್ರಮ. ಕಲಬುರಗಿ, ಗದಗ ಮತ್ತು ಬೆಂಗಳೂರಿನ ಸರ್ಕಾರಿ ವಸ್ತುಸಂಗ್ರಹಾಲಯಗಳನ್ನು ಅಭಿವೃದ್ಧಿಪಡಿಸಲು ಮತ್ತು ವಿಜಯಪುರದಲ್ಲಿರುವ ಆನಂದಮಹಲ್ ಕಟ್ಟಡವನ್ನು ವಸ್ತುಸಂಗ್ರಹಾಲಯವನ್ನಾಗಿ ಪರಿವರ್ತಿಸಲು ಕ್ರಮ. ಮೈಸೂರಿನ ಚಾಮುಂಡಿವಿಹಾರ ಕ್ರೀಡಾಂಗಣದ ಬಳಿ Augmented Reality (AR) ಮತ್ತು Virtual

NAMMAKPSC ACADEMY | BREAKING BARRIERS TO GREATNESS | HEBBAL | VIJAYANAGAR Est: 2014

Reality (VR) ತಂತ್ರಜ್ಞಾನದೊಂದಿಗೆ ಅಂತಾರಾಷ್ಟ್ರೀಯ ಗುಣಮಟ್ಟದ "ಕರ್ನಾಟಕ ಪುರಾತತ್ವ ವಸ್ತುಸಂಗ್ರಹಾಲಯ ಮತ್ತು ಕಲಾಗ್ಯಾಲರಿ" ನಿರ್ಮಾಣ.

## ರಾಷ್ಟ್ರೀಯ ಸಂರಕ್ಷಿತ ಸ್ಮಾರಕಗಳು

- ರಾಷ್ಟ್ರೀಯ ಸಂರಕ್ಷಿತ ಸ್ಮಾರಕಗಳಾದ ಹಂಪಿಯ ವಿಜಯವಿಠಲ ದೇವಸ್ಥಾನ, ಬೀದರ್ ಕೋಟೆ, ನಂದಿಬೆಟ್ಟದ ಶ್ರೀ ಭೋಗನಂದೀಶ್ವರ ದೇವಸ್ಥಾನ, ವಿಜಯಪುರದ ಗೋಲಗುಂಬಜ್, ಕಿತ್ತೂರು ಕೋಟೆ ಮತ್ತು ಬಾದಾಮಿ ಗುಹೆಗಳ ಬಳಿ "3D ಪ್ರೊಜೆಕ್ಷನ್, ಮಲ್ಟಿಮೀಡಿಯಾ, ಸೌಂಡ್ ಮತ್ತು ಲೈಟ್ ಷೋ ಸೌಲಭ್ಯ ಕಲ್ಪಿಸಲು ಕ್ರಮ.

**ಕೆ.ಪಿ.ಪೂರ್ಣಚಂದ್ರ ತೇಜಸ್ವಿ**(ಸೆಪ್ಟೆಂಬರ್ ೮ ೧೯೩೮ - ಏಪ್ರಿಲ್ ೫ ೨೦೦೭) - ಕನ್ನಡದ ಪ್ರಮುಖ ಸಾಹಿತಿಗಳಲ್ಲೊಬ್ಬರು. ತೇಜಸ್ವಿ ಅವರು ರಾಷ್ಟ್ರಕವಿ ಕುವೆಂಪು ಅವರ ಪುತ್ರ ಹಾಗೂ ಕನ್ನಡ ನವ್ಯ ಸಾಹಿತ್ಯದ ಪ್ರಮುಖ ಲೇಖಕ ಹಾಗೂ ಸ್ವತಂತ್ರ ಪ್ರವೃತ್ತಿಯ ಬರಹಗಾರರು.ನವ್ಯ ಸಾಹಿತ್ಯದ ಕಾಲಘಟ್ಟದಲ್ಲಿ ಪ್ರಮುಖವಾಗಿ ಕೇಳಿ ಬಂದ ಹೆಸರು, **ಅಬಚೂರಿನ ಪೋಸ್ಟಾಫೀಸು** ಕಥಾ ಸಂಕಲನದ ಮೂಲಕ ಬಂಡಾಯ ಸಾಹಿತ್ಯವನ್ನು ಪ್ರಾರಂಭಿಸಿದರು. ಇವರ **ಮೊದಲ ಕಥೆ ಲಿಂಗ ಬಂದ.** ಈ ಕಥೆಗಾಗಿ ಅವರು ರಾಜ್ಯೋತ್ಸವ ಪ್ರಶಸ್ತಿ ಪಡೆದರು.
**ಕಾದಂಬರಿಗಳು:** ಕರ್ವಾಲೋ (೧೯೮೦), ಚಿದಂಬರ ರಹಸ್ಯ (೧೯೮೫), ಜುಗಾರಿ ಕ್ರಾಸ್ (೧೯೯೪), ಮಾಯಾಲೋಕ (೨೦೦೫), ಕಾಡು ಮತ್ತು ಕ್ರೌರ್ಯ (೨೦೦೩)

**ನೀಳ್ಗತೆಗಳು:** ಸ್ವರೂಪ (೧೯೬೬), ನಿಗೂಢ ಮನುಷ್ಯರು (೧೯೭೩),

**ಕಥಾಸಂಕಲನ:** ಹುಲಿಯೂರಿನ ಸರಹದ್ದು (೧೯೬೨), ಅಬಚೂರಿನ ಪೋಸ್ಟಾಫೀಸು (೧೯೭೩),ಕಿರಗೂರಿನ ಗಯ್ಯಾಳಿಗಳು (೧೯೯೧), ಪಾಕಕ್ರಾಂತಿ ಮತ್ತು ಇತರ ಕತೆಗಳು

**ನಾಟಕ:** ಯಮಳ ಪ್ರಶ್ನೆ (೧೯೬೪)

**ಆತ್ಮ ಚರಿತ್ರೆ:** ಅಣ್ಣನ ನೆನಪು. (೧೯೯೬) ಕುವೆಂಪು ಅವರ ಕುರಿತು.

**ಪ್ರವಾಸ ಕಥನ:** ಅಲೆಮಾರಿಯ ಅಂಡಮಾನ್ ಹಾಗು ಮಹಾನದಿ ನೈಲ್ (೧೯೯೦)

**ಡಾ. ಎಂ. ಎಂ. ಕಲಬುರಗಿ:** ಡಾ. ಎಂ. ಎಂ. ಕಲಬುರ್ಗಿ (ಮಲ್ಲೇಶಪ್ಪ ಮಡಿವಾಳಪ್ಪ ಕಲಬುರ್ಗಿ)ಯವರು ೧೯೩೮ ನವಂಬರ ೨೮ರಂದು ವಿಜಯಪುರ ಜಿಲ್ಲೆಯ ಸಿಂದಗಿ ತಾಲೂಕಿನ ಗುಬ್ಬೆವಾಡ ಗ್ರಾಮದಲ್ಲಿ ಜನಿಸಿದರು. ಇವರ ತಾಯಿ ಗುರಮ್ಮ; ತಂದೆ ಮಡಿವಾಳಪ್ಪ.ಕಲಬುರ್ಗಿಯವರು, ಕರ್ನಾಟಕದ ಬಹು ಪ್ರಸಿದ್ಧ ವಿದ್ವಾಂಸರಲ್ಲಿ ಒಬ್ಬರು. ಅವರ ಅಧ್ಯಯನ ಮತ್ತು ಕೊಡುಗೆಗಳು, ಶಾಸನಶಾಸ್ತ್ರ, ಸಾಹಿತ್ಯ ಚರಿತ್ರೆ, ಛಂದಸ್ಸು, ಇತಿಹಾಸ, ವಾಸ್ತುಶಿಲ್ಪ, ಗ್ರಂಥಸಂಪಾದನೆ, ಹಸ್ತಪ್ರತಿಶಾಸ್ತ್ರ, ಜಾನಪದ, ಸ್ಥಳನಾಮಗಳ ಅಧ್ಯಯನ, ಸಾಹಿತ್ಯ ವಿಮರ್ಶೆ ಮುಂತಾದ ಹತ್ತು ಹಲವು ಕ್ಷೇತ್ರಗಳಲ್ಲಿ ಹರಡಿಕೊಂಡಿವೆ. ಇವೆಲ್ಲದರ ಹಿನ್ನೆಲೆಯಲ್ಲಿ ಸಾಂಸ್ಕೃತಿಕ ಅಧ್ಯಯನದ ವಿಶಾಲವಾದ ಪರಿಪ್ರೇಕ್ಷ್ಯವಿದೆ. 'ಬಸವಣ್ಣನವರ ಕುರಿತ ಶಾಸನಗಳು' ಎಂ.ಎಂ.ಕಲಬುರಗಿ ಅವರ ಮೊದಲ ಕೃತಿ. 41 ಪ್ರಾಚೀನ ಗ್ರಂಥಗಳನ್ನು ಸಂಪಾದಿಸಿರುವ ಅವರು, 100 ಕೃತಿಗಳನ್ನು ರಚನೆ ಮಾಡಿದ್ದಾರೆ. ಸೃಜನಶೀಲ ಸಾಹಿತ್ಯದಲ್ಲೂ ಆಸಕ್ತಿಯಿರುವ ಕಲಬುರ್ಗಿಯವರು ಎರಡು ನಾಟಕಗಳು ಮತ್ತು ಒಂದು ಕವನ ಸಂಕಲನವನ್ನು ಪ್ರಕಟಿಸಿದ್ದಾರೆ.

## ಕ್ರೀಡೆಗೆ ಪ್ರೋತ್ಸಾಹ

- ಬೆಂಗಳೂರಿನಲ್ಲಿ ಬಾಸ್ಕೆಟ್‌ಬಾಲ್ ಪ್ರಾದೇಶಿಕ ತರಬೇತಿ ಕೇಂದ್ರ ಮತ್ತು ಮೈಸೂರಿನಲ್ಲಿ ಸೈಕ್ಲಿಂಗ್ ವೇಲೋಡ್ರೋಮ್ ಸ್ಥಾಪನೆಗೆ ಅನುದಾನ.
- ಕ್ರೀಡಾ ಚಟುವಟಿಕೆಗಳಲ್ಲಿ ವಿಶೇಷಚೇತನರ ಮತ್ತು ಮಹಿಳೆಯರ ಭಾಗವಹಿಸುವಿಕೆಯನ್ನು ಹೆಚ್ಚಿಸಲು ಅಗತ್ಯ ಸೌಲಭ್ಯ ತರಬೇತುದಾರರ ಸೇವೆ ಒದಗಿಸಲು 10 ಕೋಟಿ ರೂ.
- ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ಕ್ರೀಡಾ ವಸ್ತು ಸಂಗ್ರಹಾಲಯ ಹಾಗೂ ಕ್ರೀಡಾ ವಸತಿ ನಿಲಯ ಸ್ಥಾಪನೆ. ಒಲಂಪಿಕ್ ಹಾಗೂ ಪ್ಯಾರಾಲಿಪಿಕ್ ವಿಜೇತರಿಗೆ ಗ್ರೂಪ್-ಎ ಹುದ್ದೆ ಮತ್ತು ಏಷಿಯನ್ ಹಾಗೂ ಕಾಮನ್ ವೆಲ್ತ್ ಕ್ರೀಡಾ ವಿಜೇತರಿಗೆ ಗ್ರೂಪ್-ಬಿ ಹುದ್ದೆಗಳಿಗೆ ನೇಮಕ ಮಾಡಿಕೊಳ್ಳಲು ಕ್ರಮ.
- ಕ್ರೀಡಾಪಟುಗಳಿಗೆ ಪೊಲೀಸ್ ಮತ್ತು ಅರಣ್ಯ ಇಲಾಖೆಯ ನೇಮಕಾತಿಯಲ್ಲಿ ಶೇ.3 ರಷ್ಟು ಹುದ್ದೆಗಳನ್ನು ಮೀಸಲಾತಿ ನಿಗದಿಗೆ ಕ್ರಮ.
- ಈಜುಪಟುಗಳ ಅಂತಾರಾಷ್ಟ್ರೀಯ ಸ್ಪರ್ಧೆಗೆ ತರಬೇತಿ ನೀಡಲು ಮುಂದಿನ ಐದು ವರ್ಷಗಳವರೆಗೆ ಪ್ರತಿ ವರ್ಷ ಎರಡು ಕೋಟಿ ರೂ.ಗಳ ಅನುದಾನ.

## ಮಾನವ - ವನ್ಯಪ್ರಾಣಿ ಸಂಘರ್ಷ ನಿಯಂತ್ರಣ:

- ರಾಜ್ಯದಲ್ಲಿ ಮಾನವ – ಕಾಡಾನೆ ಸಂಘರ್ಷ ನಿಯಂತ್ರಿಸಲು ಬ್ಯಾರಿಕೇಡ್ ನಿರ್ಮಾಣ ಕಾಮಗಾರಿಗೆ ಅನುದಾನ.
- ಮಾನವ - ವನ್ಯಪ್ರಾಣಿ ಸಂಘರ್ಷದಲ್ಲಿ ಸಂರಕ್ಷಿಸಿದ, ಗಾಯಗೊಂಡ, ಅನಾರೋಗ್ಯ ಪೀಡಿತ ಪ್ರಾಣಿಗಳ ರಕ್ಷಣೆ/ನಿರ್ವಹಣೆಗಾಗಿ ಬನ್ನೇರುಘಟ್ಟ ಮತ್ತು ಮೈಸೂರಿನಲ್ಲಿರುವ ಪುನರ್ವಸತಿ ಕೇಂದ್ರಗಳ ಸಾಮರ್ಥ್ಯ ವರ್ಧನೆ ಹಾಗೂ ಶಿವಮೊಗ್ಗ ಹಾಗೂ ಬೆಳಗಾವಿಯಲ್ಲಿ ಹೊಸ ಕೇಂದ್ರಗಳ ನಿರ್ಮಾಣ.
- ಮಾನವ ಕಾಡಾನೆ ಸಂಘರ್ಷವನ್ನು ನಿಯಂತ್ರಿಸಲು ರಾಮನಗರ ಮತ್ತು ಬನ್ನೇರುಘಟ್ಟ ಪ್ರದೇಶಗಳಲ್ಲಿ ಎರಡು ಹೊಸ ಆನೆ ಕಾರ್ಯಪಡೆ ರಚನೆ.
- ಬೀದರ್‌ನಲ್ಲಿ ಹೆಚ್ಚಾಗಿ ಕಂಡುಬರುವ ಕೃಷ್ಣಮೃಗಗಳ ಸಂರಕ್ಷಣೆಗೆ ಕೃಷ್ಣಮೃಗ ಸಂರಕ್ಷಣಾ ಮೀಸಲು ಪ್ರದೇಶವನ್ನಾಗಿ ಘೋಷಣೆ; ಪ್ರದೇಶದ ರಕ್ಷಣೆ ಮತ್ತು ನಿರ್ವಹಣೆಗೆ ಎರಡು ಕೋಟಿ ರೂ.

### ಹಸಿರೀಕರಣ ಕಾರ್ಯಕ್ರಮ

- ಬಯಲು ಸೀಮೆಯ 17 ಜಿಲ್ಲೆಗಳಲ್ಲಿ ಮುಂದಿನ 5 ವರ್ಷಗಳಲ್ಲಿ ಹಸಿರೀಕರಣ ಕಾರ್ಯಕ್ರಮ.
- ಈ ಹಸಿರುಮನೆ ಅನಿಲಗಳು (GHG) ಹೊರಸೂಸುವಿಕೆಯನ್ನು ನಿಯಂತ್ರಿಸಲು ಹಾಗೂ ಮೇಲ್ವಿಚಾರಣೆ ಮಾಡಲು ಹೊಸ ನೀತಿ ಜಾರಿ.
- ಎಲ್ಲಾ ಪ್ರಮುಖ ಯೋಜನೆಗಳಲ್ಲಿ ಪರಿಸರ ಹೊಂದಾಣಿಕೆಯನ್ನು ಮಾಡುವ ಕುರಿತು ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆಯ (EMPRI) ವತಿಯಿಂದ ಮೌಲ್ಯಮಾಪನ ಮಾಡಲು ಕ್ರಮ.

## *ಇತರ ಬಜೆಟ್ ಹಂಚಿಕೆಗಳು*

- ನೋಂದಣಿಯೇತರ ವಹಿವಾಟುಗಳಿಗೆ ಇ-ಮುದ್ರಾಂಕ ಮತ್ತು ಡಿಜಿಟಲ್ ಸ್ಟ್ಯಾಂಪಿಂಗ್ ವ್ಯವಸ್ಥೆಯನ್ನು ಕಡ್ಡಾಯಗೊಳಿಸಲು ಕ್ರಮ.
- ವಿವಾಹ ನೋಂದಣಿ ಪ್ರಕ್ರಿಯೆ ಸುಗಮಗೊಳಿಸಲು ಆನ್‌ಲೈನ್ ನಲ್ಲಿ ಮುಂಗಡ ಸಮಯ ನಿಗದಿ ಹಾಗೂ ಗ್ರಾಮ ಒನ್, ಬಾಪೂಜಿ ಸೇವಾ ಕೇಂದ್ರಗಳಲ್ಲಿಯೂ ಅರ್ಜಿ ಸಲ್ಲಿಸಲು ಅವಕಾಶ. ಬೆಂಗಳೂರಿನ 8 ಉಪನೋಂದಣಾಧಿಕಾರಿ ಕಛೇರಿಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಮೂಲಕ ಜನಸ್ನೇಹಿ ಕಛೇರಿಗಳನ್ನಾಗಿ ಉನ್ನತೀಕರಿಸಲು ಕ್ರಮ.
- ಮೈಸೂರಿನ ಶ್ರೀ ಚಾಮುಂಡೇಶ್ವರಿ ದೇವಾಲಯ ಹಾಗೂ ಚಾಮುಂಡಿ ಬೆಟ್ಟದ ಸಮಗ್ರ ಅಭಿವೃದ್ಧಿಗಾಗಿ ಶ್ರೀ ಚಾಮುಂಡೇಶ್ವರಿ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ರಚನೆಗೆ ಕ್ರಮ.
- ನಮ್ಮ ರಾಜ್ಯದಲ್ಲಿಯೂ ದೇವಾಲಯಗಳ ನಿರ್ಮಾಣಕ್ಕಾಗಿ ನುರಿತ ಶಿಲ್ಪಿಗಳನ್ನು ತಯಾರಿಸಲು ಕೋಲಾರ ಜಿಲ್ಲೆಯಲ್ಲಿ ಶಿಲ್ಪಕಲಾ ತರಬೇತಿ ಕೇಂದ್ರ ಪ್ರಾರಂಭ.
- "ಸಿ" ವರ್ಗದ ಒಟ್ಟು 121 ಮುಜರಾಯಿ ದೇವಸ್ಥಾನಗಳಿಗೆ ಸಮಾನವಾಗಿ 15,000 ರೂ.ಗಳ ಸಹಾಯಾನುದಾನವನ್ನು ನೀಡಲು ಕ್ರಮ.
- ತಾಲ್ಲೂಕು ಹಂತದ ಕಛೇರಿಗಳಲ್ಲಿನ ಶಾಸನಬದ್ಧ ಕಾಲಮಿತಿ ಇರುವಂತಹ ಸೇವೆಗಳನ್ನು ಹೊರತುಪಡಿಸಿ, ಉಳಿದ ಸೇವೆಗಳನ್ನು ಗರಿಷ್ಠ ಒಂದು ವಾರದೊಳಗೆ ಒದಗಿಸಲು ಪ್ರಯತ್ನ. ರಾಜ್ಯದ ಆರು ತಾಲ್ಲೂಕುಗಳಲ್ಲಿ ಪ್ರಾಯೋಗಿಕವಾಗಿ ಜಾರಿ.
- 100 ಪ್ರಮುಖ ಸೇವಾಸಿಂಧು ಸೇವೆಗಳನ್ನು ಸಕಾಲ ವಿನ್ಯಾಸಕ್ಕೆ ಅನುಗುಣವಾಗಿ ಪರಿವರ್ತಿಸಲು **ವ್ಯಾಪಾರ ಪ್ರಕ್ರಿಯೆ ಮರು-ಇಂಜಿನಿಯರಿಂಗ್** ಕೋಶ ಸ್ಥಾಪನೆ.
- ಮೈಸೂರು ಜಿಲ್ಲೆಯಲ್ಲಿ ಖಾಸಗಿ ಸಹಭಾಗಿತ್ವದಲ್ಲಿ ಚಿತ್ರನಗರಿ ನಿರ್ಮಾಣ. ಕನ್ನಡದ ಗುಣಾತ್ಮಕ ಚಿತ್ರಗಳಿಗೆ ಸಹಾಯಧನ ನೀಡುವ ಯೋಜನೆಗೆ ಮರು ಚಾಲನೆ.
- ಬೆಂಗಳೂರಿನಲ್ಲಿರುವ ಡಾ. ರಾಜ್‌ಕುಮಾರ್ ಸ್ಮಾರಕದ ಬಳಿ ಕನ್ನಡ ಚಿತ್ರರಂಗ ಬೆಳೆದು ಬಂದ ಇತಿಹಾಸವನ್ನು ದಾಖಲಿಸುವ ವಸ್ತು ಸಂಗ್ರಹಾಲಯ ನಿರ್ಮಾಣ.
- ಸಂಕಷ್ಟದಲ್ಲಿರುವ ಪತ್ರಕರ್ತರ ಮಾಸಾಶನ ಮೊತ್ತ 12 ಸಾವಿರ ರೂ. ಗಳಿಗೆ ಹಾಗೂ ಕುಟುಂಬ ಮಾಸಾಶನ 6 ಸಾವಿರ ರೂ. ಗಳಿಗೆ ಹೆಚ್ಚಳ.
- ಪೊಲೀಸ್ ಠಾಣೆ ಮತ್ತು ಕಛೇರಿ ಕಟ್ಟಡಗಳು, ಎಂಟ್ರಿ ಶೆಡ್ ಶಸ್ತ್ರಾಗಾರ ಮುಂತಾದ ಕಟ್ಟಡಗಳ ನಿರ್ಮಾಣ ಕಾರ್ಯಕ್ಕೆ ಅನುದಾನ. ಬೆಂಗಳೂರು ನಗರದಲ್ಲಿ ಹೊಸದಾಗಿ 05 ಸಂಚಾರ ಪೊಲೀಸ್ ಠಾಣೆಗಳನ್ನು ಮತ್ತು 06 ಮಹಿಳಾ ಪೊಲೀಸ್ ಠಾಣೆಗಳನ್ನು ಸ್ಥಾಪಿಸಲು ಕ್ರಮ. ಎರಡು ಹಂತಗಳಲ್ಲಿ ಒಟ್ಟು 2,454 ಹುದ್ದೆಗಳ ಸೃಜನೆ.

NAMMAKPSC ACADEMY BREAKING BARRIERS TO GREATNESS VIJAYANAGAR Est: 2014

- ಪೊಲೀಸ್ ಗೃಹ 2025 ಯೋಜನೆಯಡಿ ಪ್ರಸಕ್ತ ವರ್ಷ 2,125 ವಸತಿಗೃಹ ನಿರ್ಮಾಣ ಕಾರ್ಯ ಪೂರ್ಣಗೊಳಿಸಲು ಅನುದಾನ.
- ಪೊಲೀಸ್ ಮೊಬಿಲಿಟಿ ಯೋಜನೆಯಡಿ ಇಲಾಖೆಯಲ್ಲಿನ ಹಳೆಯ ವಾಹನಗಳನ್ನು ಬದಲಾಯಿಸಲು ಅನುದಾನ.
- ಪೊಲೀಸ್ ತರಬೇತಿ ಶಾಲೆಗಳ ಬಲವರ್ಧನೆಗೆ ಅನುದಾನ.
- ಅಪರಾಧ ತನಿಖಾ ವಿಭಾಗ (CID), ಸೈಬರ್ ಅಪರಾಧ ಘಟಕ (CCD) ಮತ್ತು ಸೈಬರ್ ಎಕಾನಾಮಿಕ್ಸ್ ಮತ್ತು ನಾರ್ಕೋಟಿಕ್ಸ್ (CEN) ಪೊಲೀಸ್ ಠಾಣೆಗಳ ಘಟಕಗಳ ಉನ್ನತೀಕರಣ.
- ರಾಜ್ಯದ ಇತರೆ ಏಳು ಕೇಂದ್ರ ಕಾರಾಗೃಹಗಳಲ್ಲಿ 10 ಕೋಟಿ ರೂ. ವೆಚ್ಚದಲ್ಲಿ ತ್ಯಾಜ್ಯ ನಿರ್ವಹಣಾ ಘಟಕ ನಿರ್ಮಾಣ (STP) ಹಾಗೂ ಐದು ಕೇಂದ್ರ ಕಾರಾಗೃಹಗಳಲ್ಲಿ ಭದ್ರತಾ ವಾಚ್ ಟವರ್‌ಗಳ ನಿರ್ಮಾಣ;
- ಬಂದಿಗಳನ್ನು ವಿಡಿಯೋ ಕಾನ್ಫರೆನ್ಸ್ ಮೂಲಕ ನ್ಯಾಯಾಲಯಕ್ಕೆ ಹಾಜರುಪಡಿಸುವ ವ್ಯವಸ್ಥೆ ಬಲಪಡಿಸಲು ಅನುದಾನ.
- ಬೆಂಗಳೂರಿನಲ್ಲಿರುವ ಕರ್ನಾಟಕ ಪ್ರಿಸನ್ಸ್ ಅಕಾಡೆಮಿಯನ್ನು ಪ್ರಸಕ್ತ ವರ್ಷದಲ್ಲಿ ಕಾರ್ಯಾರಂಭಗೊಳಿಸಲು ಅನುದಾನ.
- **ಕೆ-ಸೇಫ್ ಯೋಜನೆಯಡಿ** ಹತ್ತು 3 ಬೇ ಅಗ್ನಿಶಾಮಕ ಠಾಣಾ ಕಟ್ಟಡಗಳ ನಿರ್ಮಾಣವನ್ನು ಹಾಗೂ ಅಗತ್ಯವಿರುವ ಅಗ್ನಿಶಾಮಕ ವಾಹನಗಳನ್ನು ಒದಗಿಸಲು ನೆರವು. ಅಗ್ನಿಶಮನ ಕರ್ತವ್ಯ ನಿರ್ವಹಣೆಗೆ ಅಗತ್ಯವಿರುವ ಯಂತ್ರೋಪಕರಣಗಳ ಖರೀದಿಗೆ ಅನುದಾನ.
- ವಾರ್ಷಿಕ ಸುಮಾರು ಕರ್ನಾಟಕ ರಾಜ್ಯ ರಸ್ತೆ ಸುರಕ್ಷತೆ ನಿಧಿಯಡಿ 2023-24 ನೇ ಸಾಲಿನಿಂದ ಸಾರಿಗೆ, ಪೊಲೀಸ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಲೋಕೋಪಯೋಗಿ ಇಲಾಖೆಗಳಿಗೆ 2023-24 ನೇ ಸಾಲಿನಲ್ಲಿ ಅನುದಾನ.
- ರಾಜ್ಯದ ಹಲವಾರು ಪ್ರದೇಶಗಳಲ್ಲಿನ ವಾಯುಗುಣಮಟ್ಟವನ್ನು ಸುಧಾರಿಸುವ ಕಾರ್ಯಕ್ರಮಗಳಿಗೆ ಕ್ರಿಯಾ ಯೋಜನೆ ಅನುಷ್ಠಾನ.
- ರಾಮನಗರದ ಬಿಡದಿಯಲ್ಲಿ ಮಹಿಳೆಯರಿಗಾಗಿ ಪ್ರಾದೇಶಿಕ ವಾಹನ ಚಾಲನಾ ತರಬೇತಿ ಕೇಂದ್ರ ಸ್ಥಾಪನೆಗೆ ಸಹಾಯಧನ.




NAMMAKPSC ACADEMY
HEBBAL | VIJAYANAGAR
BREAKING BARRIERS TO GREATNESS

## *ತೆರಿಗೆ ಪ್ರಸ್ತಾವನೆ*

- ವಾಣಿಜ್ಯ ತೆರಿಗೆ ಅತ್ಯಧಿಕ ತೆರಿಗೆ ಪಾವತಿದಾರರಿಗೆ ಬೆಂಗಳೂರಿನಲ್ಲಿ ಒಂದು ಪ್ರತ್ಯೇಕ ವಿಭಾಗ ಸ್ಥಾಪನೆ.
- 2023-24ನೇ ಸಾಲಿನಲ್ಲಿ 1,01,000 ಕೋಟಿ ರೂ.ಗಳ ರಾಜಸ್ವ ಸಂಗ್ರಹ ಗುರಿ.
- ಅಬಕಾರಿ ಮದ್ಯದ ಎಲ್ಲಾ 18 ಘೋಷಿತ ಬೆಲೆ ಸ್ಲ್ಯಾಬ್ ಗಳ ಮೇಲೆ ಶೇ.20ರಷ್ಟು ಹಾಗೂ ಬಿಯ ಮೇಲೆ ಶೇ.10ರಷ್ಟು ಹೆಚ್ಚುವರಿ ಅಬಕಾರಿ ಸುಂಕ ಹೆಚ್ಚಳ.
- 2023-24ನೇ ಸಾಲಿನಲ್ಲಿ 36,000 ಕೋಟಿ ರೂ.ಗಳ ರಾಜಸ್ವ ಸಂಗ್ರಹ ಗುರಿ.
- ನೋಂದಣಿ ಮತ್ತು ಮುದ್ರಾಂಕ ಎಲ್ಲಾ ಸ್ಥಿರಾಸ್ತಿಗಳ ಮಾರ್ಗಸೂಚಿ ದರಗಳ ಪರಿಷ್ಕರಣೆ 2023-24ನೇ ಸಾಲಿನಲ್ಲಿ 25,000 ಕೋಟಿ ರೂ.ಗಳ ರಾಜಸ್ವ ಸಂಗ್ರಹ ಗುರಿ.
- ಸಾರಿಗೆ ಮೋಟಾರು ವಾಹನ ತೆರಿಗೆ ಕಾಯ್ದೆ ತಿದ್ದುಪಡಿಗೊಳಿಸಿ ಸರಳಗೊಳಿಸಲು ಕ್ರಮ. 2023-24ನೇ ಸಾಲಿನಲ್ಲಿ 11,500 ಕೋಟಿ ರೂ.ಗಳ ರಾಜಸ್ವ ಸಂಗ್ರಹ ಗುರಿ.
- ಗಣಿ ಮತ್ತು ಭೂವಿಜ್ಞಾನ 2023-24ನೇ ಸಾಲಿನಲ್ಲಿ 9,000 ಕೋಟಿ ರೂ.ಗಳ ರಾಜಸ್ವ ಸಂಗ್ರಹ ಗುರಿ.



# ಕರ್ನಾಟಕ ರಾಜ್ಯ ಬಜೆಟ್ 2023-24 (ಫೆಬ್ರುವರಿ) ಮುಖ್ಯಾಂಶಗಳು

## *ಆಯವ್ಯಯ ಪಕ್ಷಿನೋಟ*

- ಆಯವ್ಯಯ ಗಾತ್ರ (ಸಂಚಿತ ನಿಧಿ): 3, 09,182 ಕೋಟಿ ರೂ.
- ಒಟ್ಟು ಸ್ವೀಕೃತಿ- 3, 03,911 ಕೋಟಿ ರೂ.;
- ರಾಜಸ್ವ ಸ್ವೀಕೃಷಿ 2, 25,910 ಕೋಟಿ ರೂ.
- ಸಾರ್ವಜನಿಕ ಋಣ- 77,750 ಕೋಟಿ ರೂ. ಸೇರಿದಂತೆ ಬಂಡವಾಳ ಸ್ವೀಕೃತಿ 78,000 ಕೋಟಿ ರೂ.
- ಒಟ್ಟು ವೆಚ್ಚ- 3, 03,000 ಕೋಟಿ ರೂ.,
- ರಾಜಸ್ವ ವೆಚ್ಚ- 2, 25,507 ಕೋಟಿ ರೂ.
- ಬಂಡವಾಳ ವೆಚ್ಚ- 61.234 ಕೋಟಿ ರೂ.
- ಸಾಲ ಮರುಪಾವತಿ- 22,441 ಕೋಟಿ ರೂ.

## *ವಿವಿಧ ವಲಯಗಳಿಗೆ ಒದಗಿಸಲಾದ ಆಯವ್ಯಯ*

1. ಕೃಷಿ ಮತ್ತು ಪೂರಕ ಚಟುವಟಿಕೆಗಳು- 39,031 ಕೋಟಿ ರೂ.
2. ಸರ್ವೋದಯ ಮತ್ತು ಕ್ಷೇಮಾಭಿವೃದ್ಧಿ- 80,318 ಕೋಟಿ ರೂ.
3. ಆರ್ಥಿಕ ಅಭಿವೃದ್ಧಿಗೆ ಉತ್ತೇಜನ- 61,488 ಕೋಟಿ ರೂ.
4. ಬೆಂಗಳೂರು ಸಮಗ್ರ ಅಭಿವೃದ್ಧಿ- 9,698 ಕೋಟಿ ರೂ.
5. ಸಂಸ್ಕೃತಿ, ಪರಂಪರೆ ಮತ್ತು ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣೆ- 3.458 ಕೋಟಿ ರೂ.
6. ಆಡಳಿತ ಸುಧಾರಣೆ ಮತ್ತು ಸಾರ್ವಜನಿಕ ಸೇವೆ- 68,585 ಕೋಟಿ




- ಮಹಿಳೆಯರ ಸಬಲೀಕರಣ ಹಾಗೂ ಕ್ಷೇಮಾಭಿವೃದ್ಧಿಗೆ ಮಹಿಳಾ ಉದ್ದೇಶಿತ ಆಯವ್ಯಯದಲ್ಲಿ ಒದಗಿಸಿದ ಅನುದಾನ 46,278 ಕೋಟಿ ರೂ.
- ಮಕ್ಕಳ ಅಭ್ಯುದಯಕ್ಕೆ ಆಯವ್ಯಯದಲ್ಲಿ ಒದಗಿಸಿದ ಅನುದಾನ 47.256 ಕೋಟಿ
- ಎಸ್.ಸಿ.ಎಸ್.ಪಿ. ಹಾಗೂ ಟಿ.ಎಸ್.ಪಿ. ಯಡಿ ಆಯವ್ಯಯದಲ್ಲಿ ಒದಗಿಸಿದ ಅನುದಾನ 30,215 ಕೋಟಿ ರೂ.: ಎಸ್.ಸಿ.ಎಸ್.ಪಿ.ಯಡಿ 21,343 ಕೋಟಿ ರೂ. ಹಾಗೂ ಟಿ.ಎಸ್.ಪಿ. ಯಡಿ 8,872 ಕೋಟಿ ರೂ.

## *2023-24ನೇ ಸಾಲಿನ ಹೊಸ ಘೋಷಣೆಗಳು:*

### ಕೃಷಿ ಮತ್ತು ಪೂರಕ ಚಟುವಟಿಕೆಗಳು:

- ರೈತರಿಗೆ ನೀಡಲಾಗುವ ಬಡ್ಡಿ ರಹಿತ ಅಲ್ಪಾವಧಿ ಸಾಲದ ಮಿತಿ 3 ಲಕ್ಷ ರೂ. ಗಳಿಂದ 5 ಲಕ್ಷ ರೂ. ಗಳಿಗೆ ಹೆಚ್ಚಳ. 30 ಲಕ್ಷ ರೈತರಿಗೆ 25,000 ಕೋಟಿ ರೂ. ಸಾಲ ವಿತರಣೆ ಗುರಿ.
- **'ಭೂ ಸಿರಿ' ಯೋಜನೆ**ಯಡಿ ಕಿಸಾನ್ ಕ್ರೆಡಿಟ್ ಕಾರ್ಡ್ ಹೊಂದಿರುವ ರೈತರಿಗೆ 10 ಸಾವಿರ ರೂ. ಗಳ ಹೆಚ್ಚುವರಿ ಸಹಾಯಧನ; 50 ಲಕ್ಷ ರೈತರಿಗೆ ಅನುಕೂಲ.
- 56 ಲಕ್ಷ ಸಣ್ಣಸಣ್ಣ ಮತ್ತು ಅತಿ ಸಣ್ಣ ರೈತರ ಕುಟುಂಬಗಳಿಗೆ 8 ಕೋಟಿ ರೂ. ವೆಚ್ಚದಲ್ಲಿ **ಜೀವನ ಜ್ಯೋತಿ ವಿಮಾ ಯೋಜನೆ** ಜಾರಿ.
- ಕಿರುಧಾನ್ಯ ಬೆಳೆಗಾರರಿಗೆ ಉತ್ತೇಜನ ನೀಡಲು **ರೈತ ಸಿರಿ ಯೋಜನೆ**ಯಡಿ 10 ಸಾವಿರ ರೂ. ಪ್ರೋತ್ಸಾಹಧನ.
- **ಮುಖ್ಯಮಂತ್ರಿ ರೈತ ಉನ್ನತಿ ಯೋಜನೆ**ಯಡಿ ರೈತ ಉತ್ಪಾದಕ ಸಂಸ್ಥೆಗಳನ್ನು ಪ್ರೋತ್ಸಾಹಿಸಲು 10 ಲಕ್ಷ ರೂ. ವರೆಗಿನ ಬಂಡವಾಳಕ್ಕೆ ಬಡ್ಡಿ ಸಹಾಯಧನ ಸೌಲಭ್ಯ.
- ಸಿರಿಧಾನ್ಯ ಸಂಸ್ಕರಿಸುವ FPO ಗಳಿಗೆ ಪ್ರಾಶಸ್ತ್ಯ
- **ರೈತ ಸಂಪದ ಯೋಜನೆಯಡಿ** ಕೃಷಿ ಮತ್ತು ತೋಟಗಾರಿಕಾ ಉತ್ಪನ್ನಗಳ ಸಂಸ್ಕರಣೆ ಮತ್ತು ರಫ್ತು ಉತ್ತೇಜನಕ್ಕೆ 100 ಕೋಟಿ ರೂ.;
- **ಕೃಷಿ ಯಂತ್ರಧಾರೆ ಕೇಂದ್ರಗಳಿಗೆ** ಹೈ-ಟೆಕ್ ಹಾರ್ವೆಸ್ಟರ್ ಗಳನ್ನು ಒದಗಿಸಲು 50 ಕೋಟಿ ರೂ.
- ಅಡಿಕೆ ಬೆಳೆಯ ರೋಗ ನಿರ್ವಹಣೆ ಮತ್ತು ಉತ್ಪಾದಕತೆ ಹೆಚ್ಚಿಸುವ ಕುರಿತು ಸಂಶೋಧನೆಗೆ **ತೀರ್ಥಹಳ್ಳಿಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರಕ್ಕೆ** ನೆರವು.
- **ತಿಪಟೂರಿನಲ್ಲಿ ತೋಟಗಾರಿಕ ಮಹಾವಿದ್ಯಾಲಯ ಸ್ಥಾಪನೆ**
- ಕರ್ನಾಟಕ ದ್ರಾಕ್ಷಿ ಮತ್ತು ದ್ರಾಕ್ಷಾರಸ ಮಂಡಳಿಯ ಮೂಲಕ ವಿಶೇಷ ಯೋಜನೆ.
- **ಸಹಸ್ರ ಸರೋವರ ಹಾಗೂ ಸಹ್ಯಾದ್ರಿ ಸಿರಿ ಯೋಜನೆಗಳಿಗೆ** ಅನುದಾನ.
- ರೈತರ ಜಮೀನುಗಳಲ್ಲಿ ಜಲಹೊಂಡ ನಿರ್ಮಿಸುವ **ಜಲನಿಧಿ ಯೋಜನೆ** ಜಾರಿ,
- **ಶಿಡ್ಲಘಟ್ಟದಲ್ಲಿ ಹೈಟೆಕ್ ರೇಷ್ಮೆ ಗೂಡು ಮಾರುಕಟ್ಟೆ** ಸ್ಥಾಪನೆ.

### ಪಶುಸಂಗೋಪನೆ:

- 32 ಸ್ವಯಂ ಚಾಲಿತ ರೀಲಿಂಗ್ ಘಟಕಗಳ ಸ್ಥಾಪನೆಗೆ ನೆರವು: ಸಾವಿರ ರೇಷ್ಮೆ ಬೆಳೆಗಾರರಿಗೆ ಶೆಡ್ಡರ್ಸ್ ಒದಗಿಸಲು 12 ಕೋಟಿ ರೂ. ಅನುದಾನ: ರಾಜ್ಯದಲ್ಲಿ 10 ಸ್ಥಳಗಳಲ್ಲಿ **ಹಾಟ್ ಏರ್ ಕನ್ವೇಯರ್ ಡ್ರೈಯರ್** ಅಳವಡಿಕೆಗೆ 5 ಕೋಟಿ ರೂ. ಅನುದಾನ.
- ಮೈಸೂರು ಬಿತ್ತನೆ ಪ್ರದೇಶದ ಮೂಲಸೌಕರ್ಯ ಅಭಿವೃದ್ಧಿಗೆ 8 ಕೋಟಿ

- **ಬಳ್ಳಾರಿ ಜಿಲ್ಲೆಯಲ್ಲಿ** 100 ಕೋಟಿ ರೂ. ವೆಚ್ಚದಲ್ಲಿ 2 ಲಕ್ಷ ಲೀ. **ಹಾಲು ಸಂಸ್ಕರಣಾ ಸಾಮರ್ಥ್ಯದ ಮೆಗಾಡೈರಿ** ಸ್ಥಾಪನೆ.
- ಬೆಂಗಳೂರಿನಲ್ಲಿ ನಿರ್ಲಕ್ಷಿತ ಪ್ರಾಣಿಗಳ ಚಿಕಿತ್ಸೆಗೆ ಸಂಚಾರಿ ಚಿಕಿತ್ಸಾಲಯಗಳ ಸ್ಥಾಪನೆ
- ಬೀದಿನಾಯಿಗಳನ್ನು ದತ್ತುಪಡೆಯಲು ಆನ್ ಲೈನ್ ವೇದಿಕೆ ಸೃಜನೆ:
- ಮುಧೋಳ ಹೌಂಡ್ ಶ್ವಾನ ತಳಿ ಅಭಿವೃದ್ಧಿಗೆ 5 ಕೋಟಿ ರೂ. ಅನುದಾನ

## ಮೀನುಗಾರಿಕೆ

- ಸೀಮೆ ಎಣ್ಣೆ ಆಧಾರಿತ ದೋಣಿಗಳಲ್ಲಿ ಪೆಟ್ರೋಲ್ ಆಧಾರಿತ ಮೋಟರ್ ಎಂಜಿನ್ ಅಳವಡಿಕೆಗೆ ಮುಂದಿನ ಎರಡು ವರ್ಷಗಳಲ್ಲಿ 50 ಸಾವಿರ ರೂ. ಸಹಾಯಧನ. ಮುಂದಿನ ಎರಡು ವರ್ಷಗಳಿಗೆ ಸೀಮೆಎಣ್ಣೆ ಸಹಾಯಧನ ಮುಂದುವರಿಕೆ. ಡಿಬಿಟಿ ಮೂಲಕ ವರ್ಗಾವಣೆ, ಮೀನುಗಾರರಿಗೆ ನೀಡುವ ಡೀಸಲ್ ಸಬ್ಸಿಡಿ 2 ಲಕ್ಷ ಕಿಲೋ ಲೀಟರ್ ಗೆ ಏರಿಕೆ.
- **ಮತ್ಸ್ಯ ಸಂಪದ ಯೋಜನೆಯ**ಡಿ ಕರಾವಳಿ ಜಿಲ್ಲೆಗಳಲ್ಲಿ ಕೃತಕ ಬಂಡೆ ಸಾಲುಗಳ ಸ್ಥಾಪನೆ, 20 ಕೋಟಿ ರೂ. ಅನುದಾನದಲ್ಲಿ ಉತ್ತಮ ತಳಿಯ ಬಲಿತ ಬಿತ್ತನೆ ಮೀನು ಮರಿಗಳ ದಾಸ್ತಾನು ಪ್ರೋತ್ಸಾಹ.
- **ಹಾವೇರಿಯಲ್ಲಿ ಮೀನುಮರಿ ಉತ್ಪಾದನಾ ಮತ್ತು ಪಾಲನಾ ಕೇಂದ್ರ ಸ್ಥಾಪನೆ.**
- 10 ಸಾವಿರ ಮೀನುಗಾರರಿಗೆ ವಸತಿ ಸೌಲಭ್ಯ
- ಮೀನುಗಾರರ ದೋಣಿಗಳ ಸುರಕ್ಷತೆಗೆ ಜಿಪಿಎಸ್ ಟ್ರಾಕಿಂಗ್ ವ್ಯವಸ್ಥೆಗೆ ಅನುದಾನ.
- **ಕಲ್ಯಾಣ ಕರ್ನಾಟಕದ ಯಾದಗಿರಿ, ರಾಯಚೂರು ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ** ಸಿಗಡಿ ಕೃಷಿ ಕ್ಲಸ್ಟರ್ ಸ್ಥಾಪನೆ, **ಬೈಂದೂರು ತಾಲ್ಲೂಕು ಕಂಬದಕೋಣೆಯಲ್ಲಿ ಸೀ ಫುಡ್ ಪಾರ್ಕ್** ಸ್ಥಾಪನೆ-
- ಮೀನು ಉತ್ಪನ್ನಗಳ ಪೂರೈಕೆಗೆ ಪರಿಸರ ಸ್ನೇಹಿ ತ್ರಿಚಕ್ರ ಮೀನು ಮಾರಾಟ ವಾಹನಗಳ ವಿತರಣೆ ಯೋಜನೆ.

## ಸಹಕಾರಿ ಕ್ಷೇತ್ರದ ಸಬಲೀಕರಣ

- **ಕನಿಷ್ಠ ಬೆಂಬಲ ಬೆಲೆ ಯೋಜನೆಯ**ಡಿ ಆಹಾರ ಧಾನ್ಯ ಖರೀದಿಗೆ ಸ್ಥಾಪಿಸಿರುವ ಆವರ್ತ ನಿಧಿ 3,500 ಕೋಟಿ ರೂ. ಗಳಿಗೆ ಹೆಚ್ಚಳ. ಇದಕ್ಕಾಗಿ 1500 ಕೋಟಿ ರೂ. ಅನುದಾನ, **ರಾಜ್ಯದ ಇತಿಹಾಸದಲ್ಲಿಯೇ ಹೆಚ್ಚಿನ ಗಾತ್ರದ ಆವರ್ತ ನಿಧಿ.**
- **ಚಿಕ್ಕಬಳ್ಳಾಪುರದಲ್ಲಿ ಅಂತರರಾಷ್ಟ್ರೀಯ ಮಟ್ಟದ ಹೈಟೆಕ್ ಹೂವಿನ ಮಾರುಕಟ್ಟೆ,** ಬೆಂಗಳೂರು ಮತ್ತು ಹಾವೇರಿಯಲ್ಲಿ ಹೂವಿನ ಅತ್ಯಾಧುನಿಕ ಚಿಲ್ಲರೆ ಮಾರುಕಟ್ಟೆ ನಿರ್ಮಾಣ

## ನೀರಾವರಿಗೆ ಆದ್ಯತೆ

- ಯಾದಗಿರಿ ಮತ್ತು ಕಲಬುರಗಿಯಲ್ಲಿ 138 ಮೇಲೆ ಸಣ್ಣ ನೀರಾವರಿ ಕಾಮಗಾರಿ ಕೈಗೊಳ್ಳಲು ಕ್ರಮ.
- **ಪಶ್ಚಿಮ ವಾಹಿನಿ 2 ಹಂತದ** ಯೋಜನೆಯ ಕಾಮಗಾರಿಗಳ ಅನುಷ್ಠಾನ.
- **ಕೃಷ್ಣಾ ಮೇಲ್ದಂಡೆ ಹಂತ 3ರ** ಯೋಜನೆಗೆ 5,000 ಕೋಟಿ ರೂ. ಅನುದಾನ.

- 11,236 ಕೋಟಿ ರೂ. ಅಂದಾಜು ವೆಚ್ಚದ 38 ಯೋಜನೆಗಳ ಅನುಷ್ಠಾನ; 1.5 ಲಕ್ಷ ಎಕರೆ ನೀರಾವರಿ ಸಾಮರ್ಥ್ಯ ಸೃಜನೆಯ ಗುರಿ,
- ಪ್ರಗತಿಯಲ್ಲಿರುವ ತುಂಬಿಸುವ ಯೋಜನೆಗಳು, **ಸಸಾಲಟ್ಟಿ ಶಿವಲಿಂಗೇಶ್ವರ, ಮಂಟೂರು ಮಹಾಲಕ್ಷ್ಮೀ ಮತ್ತು ಶ್ರೀ ವೆಂಕಟೇಶ್ವರ ಏತ ನೀರಾವರಿ ಯೋಜನೆಗಳು ಮತ್ತು ಮಳವಳ್ಳಿ ಪೂರಿಗಾಲಿ ಸೂಕ್ಷ್ಮ ನೀರಾವರಿ ಯೋಜನೆಗಳನ್ನು** ಪೂರ್ಣಗೊಳಿಸಲು ಕ್ರಮ.
- **ಕಳಸಾ ಮತ್ತು ಬಂಡೂರಾ ನಾಲಾ ತಿರುವು ಯೋಜನೆಗೆ** 1,000 ಕೋಟಿ ರೂ. ಅನುದಾನ.
- ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರದಿಂದ 5,300 ಕೋಟಿ ರೂ.ಅನುದಾನ.
- ರಾಜ್ಯದ ನೀರಾವರಿ ಕ್ಷೇತ್ರಕ್ಕೆ ಒಟ್ಟಾರೆ 25,000 ಕೋಟಿ ರೂ. ಅನುದಾನ

## *ವಲಯ 2 ಸರ್ವೋದಯ ಮತ್ತು ಕ್ಷೇಮಾಭಿವೃದ್ಧಿ*

### ಅಭಿವೃದ್ಧಿ ಆಕಾಂಕ್ಷಿ ತಾಲ್ಲೂಕುಗಳು

- ಅಭಿವೃದ್ಧಿ ಆಕಾಂಕ್ಷಿ ತಾಲ್ಲೂಕುಗಳಲ್ಲಿ ಶಾಲಾ ಶಿಕ್ಷಣ ಮತ್ತು ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಮೂಲಸೌಕರ್ಯ ಅಭಿವೃದ್ಧಿ ಹಾಗೂ ಗುಣಮಟ್ಟ ಸುಧಾರಣೆಗೆ 892 ಕೋಟಿ ರೂ. ಅನುದಾನ; ಆರೋಗ್ಯ ಕ್ಷೇತ್ರದ ಸುಧಾರಣೆಗೆ 720 ಕೋಟಿ ರೂ. ಹಾಗೂ ಪೌಷ್ಟಿಕತೆ ವಲಯದಲ್ಲಿ ಸುಧಾರಣೆಗೆ 140 ಕೋಟಿ ರೂ. ಅನುದಾನ. ವಸತಿಗಾಗಿ 500 ಕೋಟಿ ರೂ. ಅನುದಾನ.

### ಗುಣಮಟ್ಟದ ಶಿಕ್ಷಣ

- ಸರ್ಕಾರಿ ಪದವಿ ಪೂರ್ವ ಮತ್ತು ಸರ್ಕಾರಿ ಪದವಿ ಕಾಲೇಜು ವಿದ್ಯಾರ್ಥಿಗಳಿಗೆ ಪೂರ್ಣ ಶುಲ್ಕ ವಿನಾಯಿತಿ. 8 ಲಕ್ಷ ವಿದ್ಯಾರ್ಥಿಗಳಿಗೆ ಅನುಕೂಲ.
- **ವಿವೇಕ ಯೋಜನೆಯಡಿ** ಅನುಮೋದನೆಯಾದ 7,601 ಶಾಲಾ ಕೊಠಡಿಗಳು ಸೇರಿದಂತೆ ಒಟ್ಟು 9556 ಶಾಲಾ ಕೊಠಡಿಗಳ ನಿರ್ಮಾಣ ಪ್ರಸಕ್ತ ವರ್ಷ ಪೂರ್ಣಗೊಳಿಸಲು ಕ್ರಮ.
- **ಸಿಂಪಿಗರ ಮಕ್ಕಳಿಗೆ ವಿದ್ಯಾನಿಧಿ ಸೌಲಭ್ಯ,** ವಿಸ್ತರಣೆ,
- **PM SHRI ಯೋಜನೆಯಡಿ** ಉತ್ತಮ ಮೂಲಭೂತ ಸೌಕರ್ಯ ಹಾಗೂ ಕಲಿಕಾ ಸಂಪನ್ಮೂಲ ಒದಗಿಸಲು 100 ಕೋಟಿ ರೂ. ಅನುದಾನ.
- **"ಹಳ್ಳಿ ಮುತ್ತು' ಯೋಜನೆಯಡಿ** ಗ್ರಾಮೀಣ ಸರ್ಕಾರಿ ಕನ್ನಡ ಮಾಧ್ಯಮ ಶಾಲೆಗಳಲ್ಲಿ ಓದಿ CET ಮೂಲಕ ಸರ್ಕಾರಿ ಕೋಟಾದಲ್ಲಿ ಆಯ್ಕೆಯಾಗುವ 500 ಅತ್ಯುತ್ತಮ ವಿದ್ಯಾರ್ಥಿಗಳ ಸಂಪೂರ್ಣ ಶುಲ್ಕ ಭರಿಸಲು ಕ್ರಮ.
- **'ವೃದ್ಧಿ' ಯೋಜನೆಯಡಿ** ಅತಿ ಹೆಚ್ಚು ದಾಖಲಾತಿ ಹೊಂದಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಸರ್ಕಾರಿ ಪಾಲಿಟೆಕ್ನಿಕ್ ಗಳಿಗೆ ಅಗತ್ಯ ಸೌಲಭ್ಯಕ್ಕಾಗಿ ಅನುದಾನ.
- 100 ಆಯ್ದ ಪದವಿ ಕಾಲೇಜುಗಳಲ್ಲಿ ಪ್ರೊ**. ಸಿ.ಎನ್.ಆರ್. ರಾವ್ ವಿಜ್ಞಾನ ವಿಭಾಗ** ಪ್ರಾರಂಭ.
- ಏಳು ಎಂಜಿನಿಯರಿಂಗ್ ಕಾಲೇಜುಗಳನ್ನು KIT ಗಳಾಗಿ ಪರಿವರ್ತಿಸಲು 50 ಕೋಟಿ ರೂ ಅನುದಾನ.

- **ಚಿಕ್ಕಮಗಳೂರಿನಲ್ಲಿ ಹೊಸ ವಿಶ್ವವಿದ್ಯಾಲಯ ಸ್ಥಾಪನೆ.**
- ಬಂಕಾಪುರದ ಸರ್ಕಾರಿ ಪಾಲಿಟೆಕ್ನಿಕ್ ಅನ್ನು ಇಂಜಿನಿಯರಿಂಗ್ ಕಾಲೇಜಾಗಿ ಪರಿವರ್ತಿಸಲಾಗುವುದು
- **ಚಿಕ್ಕನಾಯಕನಹಳ್ಳಿಯಲ್ಲಿ ಹೊಸ ಪಾಲಿಟೆಕ್ನಿಕ್** ಪ್ರಾರಂಭ,
- ಎಲ್ಲಾ ವಿಶ್ವವಿದ್ಯಾನಿಲಯಗಳ ಪಠ್ಯಕ್ರಮ ಮತ್ತು ಉಲ್ಲೇಖ ಪುಸ್ತಕಗಳ ಕನ್ನಡ ಅನುವಾದವನ್ನು ಕೈಗೊಳ್ಳಲು ಕ್ರಮ.

## ಆರೋಗ್ಯ ಸೇವೆಗೆ ಆದ್ಯತೆ

- ರಕ್ತ ಹೀನತೆ ನಿವಾರಣೆಗೆ **ಆರೋಗ್ಯ ಪುಷ್ಟಿ'** ಯೋಜನೆ ಜಾರಿ,
- ಆರೋಗ್ಯ ಇಲಾಖೆಯಡಿ 100 ಕೋಟಿ ರೂ. ಅನುದಾನ.
- **'ಮನೆ ಮನೆಗೆ ಆರೋಗ್ಯ ಕಾರ್ಯಕ್ರಮದಡಿ ಗ್ರಾ**ಮೀಣ ಜನತೆಯ ಸಮಗ್ರ ಆರೋಗ್ಯ ತಪಾಸಣೆಗೆ 2023-24ರಲ್ಲಿ ಎರಡು ಬಾರಿ ಆರೋಗ್ಯ ಶಿಬಿರ ಆಯೋಜನೆ,
- ಕ್ಷಯ ರೋಗಿಗಳ ಆರಂಭಿಕ ತಪಾಸಣೆಗೆ 12.50 ಕೋಟಿ ರೂ.;
- **ಮೆದುಳು ಆರೋಗ್ಯ ಯೋಜನೆ** ರಾಜ್ಯಾದ್ಯಂತ ವಿಸ್ತರಣೆ.
- **ಜೀವಸುಧೆ' ಯೋಜನೆಯಡಿ** ಕ್ಯಾನ್ಸರ್ ತಪಾಸಣೆ ಶಿಬಿರ ಹಮ್ಮಿಕೊಳ್ಳಲು 12 ಕೋಟಿ ರೂ.,
- **'ವಾತ್ಸಲ್ಯ' ಯೋಜನೆಯಡಿ** ಆರು ವರ್ಷದೊಳಗಿನ ಮಕ್ಕಳ ಆರೋಗ್ಯ ತಪಾಸಣೆ ಶಿಬಿರ ಕಾರ್ಯಕ್ರಮ,
- ಉಚಿತ ಡಯಾಲಿಸಿಸ್ ಸೇವೆ 1 ಲಕ್ಷ ಸೈಕಲ್ ಗಳಿಗೆ ವಿಸ್ತರಣೆ.
- ಏಳು ತಾಲ್ಲೂಕು ಕೇಂದ್ರಗಳ ಸಮುದಾಯ ಆರೋಗ್ಯ ಕೇಂದ್ರಗಳನ್ನು 100 ಹಾಸಿಗೆ ಸಾಮರ್ಥ್ಯದ ತಾಲ್ಲೂಕು ಆಸ್ಪತ್ರೆಯಾಗಿ ಉನ್ನತೀಕರಣ,
- **PM-ABHIM** ಅಡಿಯಲ್ಲಿ 50 ಹಾಸಿಗೆಗಳ 8 ಕ್ರಿಟಿಕಲ್ ಕೇರ್ ಬ್ಲಾಕ್ ಹಾಗೂ 100 ಹಾಸಿಗೆಗಳ 2 ಕ್ರಿಟಿಕಲ್ ಕೇರ್ ಬ್ಲಾಕ್ ಸ್ಥಾಪನೆ.
- **ನಗು ಮಗು'** ಯೋಜನೆಯಡಿ ತಾಲ್ಲೂಕು ಆಸ್ಪತ್ರೆಯಲ್ಲಿ ಹೆರಿಗೆಯಾದ ತಾಯಿ ಮತ್ತು ನವಜಾತ ಶಿಶುಗಳಿಗೆ ಉಚಿತ ಸಾರಿಗೆ ಸೌಲಭ್ಯ,.
- ಸ್ಥಳೀಯವಾಗಿ ಪ್ರಯೋಗಾಲಯ ಸೇವೆಗಳನ್ನು ಒದಗಿಸಲು 129 ತಾಲೂಕು ಪ್ರಯೋಗಾಲಯಗಳು, ಎಲ್ಲಾ ಜಿಲ್ಲೆಗಳಲ್ಲಿ ಜಿಲ್ಲಾ ಪ್ರಯೋಗಾಲಯಗಳು ಮತ್ತು **ಬೆಂಗಳೂರಿನಲ್ಲಿ ರಾಜ್ಯ ಮಟ್ಟದ ರೆಫರಲ್ ಪ್ರಯೋಗಾಲಯಗಳ ಸ್ಥಾಪನೆ.**
- ಆರೋಗ್ಯ ಸೇವೆಗಳ ಡಿಜಿಟಲೀಕರಣ, ರೋಗಿಗಳ ಆರೋಗ್ಯ ದಾಖಲೆಗಳ ಸುರಕ್ಷಿತ ಕ್ರೋಢೀಕರಣಕ್ಕೆ ಕ್ರಮ,
- ಸವಣೂರಿನಲ್ಲಿ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಸ್ಥಾಪನೆ.
- **ರಾಯಚೂರಿನಲ್ಲಿ AIIMS ಮಾದರಿಯ ಆಸ್ಪತ್ರೆ** ಹಾಗೂ **ಕುಮಟಾದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ** ಸ್ಥಾಪನೆ.

- **ಬೆಂಗಳೂರು, ಹುಬ್ಬಳ್ಳಿ, ಮೈಸೂರು ಮತ್ತು ಕಲ್ಬುರ್ಗಿ** 4 ವೈದ್ಯಯ ವಿಜ್ಞಾನ ಸಂಸ್ಥೆಗಳಲ್ಲಿ 6 ಕೋಟಿ ರೂ. ವೆಚ್ಚದಲ್ಲಿ IVF ಕ್ಲಿನಿಕ್ ಪ್ರಾರಂಭ;
- ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯಲ್ಲಿ 5 ಕೋಟಿ ರೂ. ವೆಚ್ಚದಲ್ಲಿ ಸಂಪೂರ್ಣ ಸ್ವಯಂ ಚಾಲಿತ ಮತ್ತು ಕೇಂದ್ರೀಕೃತ ರಕ್ತನಿಧಿ ನಿರ್ವಹಣಾ ವ್ಯವಸ್ಥೆ ಸ್ಥಾಪನೆ.
- NIMIIANS ಸಂಸ್ಥೆಯ ಆವರಣದಲ್ಲಿ 146 ಕೋಟಿ ರೂ. ವೆಚ್ಚದಲ್ಲಿ **ಅಂಗಾಂಗ ಜೋಡಣೆಗೆ ಮೀಸಲಾದ ದೇಶದ ಪ್ರಥಮ ಸಾರ್ವಜನಿಕ ಆಸ್ಪತ್ರೆ ಸ್ಥಾಪಿಸಲು** ಕ್ರಮ.

## ದುರ್ಬಲ ವರ್ಗಗಳ ಕ್ಷೇಮಾಭಿವೃದ್ಧಿ: ಮಹಿಳೆಯರು, ಮಕ್ಕಳು ಹಾಗೂ ವಿಶೇಷ ಚೇತನರು

- ಮಹಿಳೆಯರ ಸಬಲೀಕರಣಕ್ಕೆ **ಗೃಹಿಣಿ ಶಕ್ತಿ'** ಯೋಜನೆಯಡಿ
  - ಭೂರಹಿತ ಮಹಿಳಾ ಕೃಷಿ ಕಾರ್ಮಿಕರಿಗೆ ಮಾಸಿಕ 500 ರೂ. ಗಳ ಸಹಾಯಧನ;
  - 1 ಲಕ್ಷ ಮಹಿಳೆಯರಿಗೆ ಮನೆಯಲ್ಲಿಯೇ ಲಾಭದಾಯಕ ಉದ್ಯಮ ಪ್ರಾರಂಭಿಸಲು ಕೌಶಲ್ಯಾಭಿವೃದ್ಧಿ ತರಬೇತಿ;
  - ಸಂಘಟಿತ ವಲಯದಲ್ಲಿ ದುಡಿಯುವ 30 ಲಕ್ಷ ಮಹಿಳೆಯರಿಗೆ ಉಚಿತ ಬಸ್ ಪಾಸ್ ಒದಗಿಸಲು 1,000 ಕೋಟಿ
  - **"ಆರೋಗ್ಯ ಪುಷ್ಟಿ"** ಕಾರ್ಯಕ್ರಮದಡಿಯಲ್ಲಿ ಅಪೌಷ್ಟಿಕತೆ ಮತ್ತು ರಕ್ತಹೀನತೆಯನ್ನು ತಡೆಗಟ್ಟಲು ಅಂಗನವಾಡಿಗಳಲ್ಲಿ ಅರ್ಹ ವಿವಾಹಿತ ಮಹಿಳೆಯರಿಗೆ ಬೇಯಿಸಿದ ಊಟವನ್ನು ಒದಗಿಸಲು ಕ್ರಮ.
  - **"ವಿದ್ಯಾವಾಹಿನಿ"** ಯೋಜನೆಯಡಿಯಲ್ಲಿ ಶಾಲಾ ಕಾಲೇಜುಗಳ 8 ಲಕ್ಷ ವಿದ್ಯಾರ್ಥಿನಿಯರಿಗೆ ಉಚಿತ ಬಸ್ ಪಾಸ್:
- ಸಹಕಾರ ವಲಯದಲ್ಲಿ 45,000 ಮಹಿಳಾ ಸ್ವಸಹಾಯ ಗುಂಪುಗಳಿಗೆ ಶೂನ್ಯ ಬಡ್ಡಿ ದರದಲ್ಲಿ 1,800 ಕೋಟಿ ರೂ. ಸಾಲ ವಿತರಣೆ ಗುರಿ.
- **ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯನ್ನು ಮಕ್ಕಳ ಪೌಷ್ಟಿಕತೆ ಇಲಾಖೆ ಮತ್ತು ಮಹಿಳಾ ಸಬಲೀಕರಣ ಇಲಾಖೆ** ಯಾಗಿ ವಿಭಜನೆ.
- ನಗರ ಪ್ರದೇಶದ ಕಟ್ಟಡ ನಿರ್ಮಾಣ ಮಹಿಳಾ ಕಾರ್ಮಿಕರಿಗೆ ನೆರವಾಗಲು ನಗರ ಪ್ರದೇಶದಲ್ಲಿ 4,000 ಶಿಶುವಿಹಾರ ಹಾಗೂ ನರೇಗಾ ಯೋಜನೆಯ ಮಹಿಳಾ ಕಾರ್ಮಿಕರ ಭಾಗವಹಿಸುವಿಕೆ ಹೆಚ್ಚಿಸಲು 500 ಶಿಶುವಿಹಾರ ಪ್ರಾರಂಭ.
- **ಸ್ವಚೇತನ' ಯೋಜನೆಯಡಿ** 5000 ವಿಶೇಷ ಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ ವಿತರಣೆಗೆ 50 ಕೋಟಿ ರೂ. ಅನುದಾನ.

- ಆಸಿಡ್ ದಾಳಿ ಸಂತ್ರಸ್ತರಿಗೆ ವಸತಿ ಸೌಲಭ್ಯ ಹಾಗೂ ಸ್ವಯಂ ಉದ್ಯೋಗಕ್ಕಾಗಿ ಸಾಲಸೌಲಭ್ಯ ನೀಡಲು ಕ್ರಮ: ಉತ್ಕೃಷ್ಟ ಚಿಕಿತ್ಸೆಗೆ ಮತ್ತು ಕಾನೂನು ನೆರವು ನೀಡಲು ಮಹಿಳಾ ಅಭಿವೃದ್ಧಿ ನಿಗಮದಲ್ಲಿ ವಿಶೇಷ ನಿಧಿ ಸ್ಥಾಪನೆ.
- ಮಕ್ಕಳ ಪಾಲನಾ ಸಂಸ್ಥೆಗಳಿಂದ ಹೊರಬಂದ **18 ರಿಂದ 21 ವರ್ಷ ವಯೋಮಾನದ ಗಂಡುಮಕ್ಕಳಿಗೆ** 4 **ಅನುಪಾಲನಾ ಗೃಹ ಪ್ರಾರಂಭಿಸಲು** 2 ಕೋಟಿ ರೂ. ಅನುದಾನ.
- ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರಿಗೆ ನಿವೃತ್ತಿ ಉಪಧನ ನೀಡಲು ತೀರ್ಮಾನ: ಅರ್ಹರಿಗೆ ಸ್ವಯಂ ನಿವೃತ್ತಿಗೂ ಅವಕಾಶ

## ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಅಭ್ಯುದಯ

- **ಕರ್ನಾಟಕ ಪರಿಶಿಷ್ಟ ಜಾತಿ ಉಪ ಯೋಜನೆ ಮತ್ತು ಪರಿಶಿಷ್ಟ ಪಂಗಡ ಉಪಯೋಜನೆ** ಕಾಯ್ದೆ 2013ರಲ್ಲಿ ಸೆಕ್ಷನ್ 7(ಡಿ) ಸೇರಿದಂತೆ ವಿವಿಧ ಅಂಶಗಳ ಕುರಿತು ಪರಿಶೀಲನೆ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಜಮೀನು ಸಂರಕ್ಷಣೆಗೆ **ಟಿಸಿಎಚ್ ಕಾಯ್ದೆಗೆ** ತಿದ್ದುಪಡಿ ಗೆ ಕ್ರಮ.
- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿವಿಧ ನಿಗಮಗಳಿಗೆ ಒಟ್ಟು ರೂ.795 ಕೋಟಿ ಅನುದಾನ; ವಿವಿಧ ಯೋಜನೆಗಳ ಅನುಷ್ಠಾನ.
- 100 KRIES ವಸತಿ ಶಾಲೆಗಳಲ್ಲಿ ಪ್ರಿ-ಯೂನಿವರ್ಸಿಟಿ ಕೋರ್ಸ್ ಪ್ರಾರಂಭ; 10 ವಸತಿ ಶಾಲೆಗಳಲ್ಲಿ ಕ್ರೀಡಾ ಸೌಲಭ್ಯ ಕಲ್ಪಿಸಲು ಅನುದಾನ.
- 14 ಜಿಲ್ಲಾ ಕೇಂದ್ರಗಳಲ್ಲಿ 14 ಪರಿಶಿಷ್ಟ ಜಾತಿ ಮೆಟ್ರಿಕ್ ನಂತರದ ಹಾಸ್ಟೆಲ್‌ಗಳನ್ನು ಆರಂಭಿಸಲು ಅನುದಾನ.
- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ **ನಿರುದ್ಯೋಗಿಗಳಿಗೆ ಶೇ.4ರ ಬಡ್ಡಿದರದಲ್ಲಿ** ರೂ.10 ಲಕ್ಷದವರೆಗೆ ಸಾಲ ನೀಡಲು ಬಡ್ಡಿ ರಿಯಾಯಿತಿ.
- **'ಬಾಬು ಜಗಜೀವನರಾಮ್ ಸ್ವಯಂ ಉದ್ಯೋಗ ಯೋಜನೆ'** ಅಡಿಯಲ್ಲಿ ಎಲೆಕ್ಟ್ರಿಕ್ ತ್ರಿ ವೀಲರ್ ಅಥವಾ ಫೋರ್ ವೀಲರ್ ಸರಕುಗಳ ವಾಹನ ಖರೀದಿಗೆ 50% ಸಬ್ಸಿಡಿ.
- ರಾಜೀವ್ ಗಾಂಧಿ ವಸತಿ ನಿಗಮದ ಅಡಿಯಲ್ಲಿ ಸಫಾಯಿ ಕರ್ಮಚಾರಿಗಳಿಗೆ ವಸತಿ ಸೌಲಭ್ಯ.

## ಹಿಂದುಳಿದ ವರ್ಗಗಳ ಕಲ್ಯಾಣ

- ಬಿಲ್ಡ್ ಟು ಸೂಟ್' ಮಾದರಿಯಲ್ಲಿ 20 ಹೊಸ ಮೆಟ್ರಿಕ್ ನಂತರದ ಹಾಸ್ಟೆಲ್‌ಗಳ ನಿರ್ಮಾಣ ಮತ್ತು ಉನ್ನತ ಶಿಕ್ಷಣ ಇಲಾಖೆ ಅಡಿಯಲ್ಲಿ 160 ಹಾಸ್ಟೆಲ್‌ಗಳನ್ನು ಹಿಂದುಳಿದ ವರ್ಗಗಳ ಇಲಾಖೆಗೆ ಹಸ್ತಾಂತರಿಸುವುದು.
- ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳಿಗೆ ಮೂಲ ಸೌಕರ್ಯ ಮತ್ತು ದುರಸ್ತಿಗಾಗಿ ವಿಶೇಷ ಪ್ಯಾಕೇಜ್.
- ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಹಾಸ್ಟೆಲ್‌ಗಳಲ್ಲಿ 8 ರಿಂದ 10 ನೇ ತರಗತಿಯ 10,000 ವಿದ್ಯಾರ್ಥಿಗಳಿಗೆ ವಿಜ್ಞಾನ ಮತ್ತು ಗಣಿತ ವಿಷಯಗಳಲ್ಲಿ ಫೌಂಡೇಶನ್ ಕೋರ್ಸ್‌ಗೆ ಅನುದಾನ.

- ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ವಿವಿಧ ನಿಗಮಗಳಿಗೆ ಅನುದಾನ; ಲಭ್ಯವಿರುವ ಅನುದಾನವನ್ನು ಬಳಸಿಕೊಂಡು ವಿವಿಧ ಯೋಜನೆಗಳ ಅನುಷ್ಠಾನ.

## ಅಲ್ಪಸಂಖ್ಯಾತರ ಕಲ್ಯಾಣ

- ವಿದೇಶಿ ಶಿಕ್ಷಣ ಪಡೆಯುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ರೂ.20 ಲಕ್ಷದವರೆಗೆ ಬಡ್ಡಿ ರಹಿತ ಸಾಲ ಪಡೆಯಲು ಬಡ್ಡಿ ಸಹಾಯಧನ.
- 300 ಅಲ್ಪಸಂಖ್ಯಾತ ಮಹಿಳಾ ಪದವೀಧರರಿಗೆ ಐಐಎಂಬಿಯಲ್ಲಿ ಉದ್ಯಮಶೀಲತೆ ತರಬೇತಿ.
- ವಕ್ಫ್ ಆಸ್ತಿ ಸಂರಕ್ಷಣೆ ಮತ್ತು ಖಬರಸ್ಥಾನಗಳ ಅಭಿವೃದ್ಧಿಗೆ ಒಟ್ಟು ರೂ.20 ಕೋಟಿ ಅನುದಾನ.
- ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಕ್ಕೆ ಅನುದಾನ.
- ಲಭ್ಯವಿರುವ ಅನುದಾನವನ್ನು ಬಳಸಿಕೊಂಡು ವಿವಿಧ ಯೋಜನೆಗಳ ಅನುಷ್ಠಾನ.

## ವಸತಿ

- ಪ್ರಸಕ್ತ ಸಾಲಿನಲ್ಲಿ 5 ಲಕ್ಷ ಮನೆ ನಿರ್ಮಾಣದ ಗುರಿ, ಅಭಿವೃದ್ಧಿ ಆಕಾಂಕ್ಷಿ ತಾಲ್ಲೂಕುಗಳಲ್ಲಿ ವಸತಿ ಸೌಲಭ್ಯಕ್ಕೆ ಆದ್ಯತೆ.
- ಗೃಹಮಂಡಳಿ ವತಿಯಿಂದ 30 ಸಾವಿರ ಸ್ವತ್ತುಗಳನ್ನು ಅಭಿವೃದ್ಧಿ ಪಡಿಸಿ, ಹಂಚಿಕೆ ಮಾಡಲು ಕ್ರಮ. **ನಮ್ಮ ನೆಲೆ ಯೋಜನೆ**ಯಡಿ ಆರ್ಥಿಕವಾಗಿ ದುರ್ಬಲ ವರ್ಗದವರಿಗೆ ಇದರಲ್ಲಿ 10 ಸಾವಿರ ನಿವೇಶನ ಹಂಚಿಕೆ.

## ಕಾರ್ಮಿಕರ ಅಭ್ಯುದಯ

- ಅಸಂಘಟಿತ ಕಾರ್ಮಿಕರ ಕ್ಷೇಮಾಭಿವೃದ್ಧಿಗಾಗಿ **'ಕರ್ನಾಟಕ ಅಸಂಘಟಿತ ಕಾರ್ಮಿಕರ ಕಲ್ಯಾಣ ನಿಧಿ ಸ್ಥಾಪನೆ**. 75 ಲಕ್ಷ ಕ್ಕೂ ಹೆಚ್ಚು ಜನರಿಗೆ ಅನುಕೂಲ.
- 75 ಲಕ್ಷಕ್ಕೂ ಹೆಚ್ಚು ಜನರಿಗೆ ಲಾಭ.
- **ಗೌರವಧನ ಹೆಚ್ಚಳ:** ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರು, ಆಶಾ ಕಾರ್ಯಕರ್ತೆಯರು, ಅಡುಗೆಯವರು ಮತ್ತು ಮಧ್ಯಾಹ್ನ ಉಪಾಹಾರ ಯೋಜನೆಯಡಿ ಸಹಾಯಕರು, ಗ್ರಾಮ ಸಹಾಯಕರು, ಗೃಹರಕ್ಷಕರು ಮತ್ತು ಗ್ರಂಥಪಾಲಕರಿಗೆ ಮಾಸಿಕ ಗೌರವಧನವನ್ನು ರೂ.1,000 ಹೆಚ್ಚಿಸಲಾಗಿದೆ.

## ಎಲ್ಲರನ್ನೊಳಗೊಂಡ ಅಭಿವೃದ್ಧಿಗೆ ಕೌಶಲ್ಯಾಭಿವೃದ್ಧಿ

- **ಮುಖ್ಯಮಂತ್ರಿ ಕೌಶಲ್ಯ ಕರ್ನಾಟಕ ಯೋಜನೆ, ಅಮೃತ ಕೌಶಲ್ಯ ತರಬೇತಿ, ಪ್ರಧಾನ ಮಂತ್ರಿ ಕೌಶಲ್ಯ ವಿಕಾಸ ಯೋಜನೆ** ಮತ್ತು ಇತರ ಕಾರ್ಯಕ್ರಮಗಳಡಿ 5 ಲಕ್ಷ ಅಭ್ಯರ್ಥಿಗಳಿಗೆ ಕೌಶಲ್ಯಾಭಿವೃದ್ಧಿ ತರಬೇತಿಯ ಗುರಿ,
- ಸಾಂಪ್ರದಾಯಿಕ ಕೌಶಲ್ಯಗಳ ಪುನರುಜ್ಜೀವನಕ್ಕಾಗಿ ಬಿದಿರಿನ ಉತ್ಪನ್ನಗಳು, ಚನ್ನಪಟ್ಟಣದ ಆಟಿಕೆಗಳು, ಕಿನ್ನಾಳ ಕಲೆ, ಕುಂಬಾರಿಕೆ, ಬಿದರಿ ಕಲೆ, ಕಸೂತಿ ಮತ್ತು ಇತರವುಗಳ ಉತ್ಪಾದನೆಯಲ್ಲಿ ಉನ್ನತ ಮಟ್ಟದ ಕೌಶಲ್ಯ ತರಬೇತಿ.

- ಅಭಿವೃದ್ಧಿ ಆಕಾಂಕ್ಷಿ ತಾಲ್ಲೂಕುಗಳಲ್ಲಿ 50 ವರ್ಷಗಳನ್ನು ಪೂರೈಸಿದ ಸರ್ಕಾರಿ ಐಟಿಐಗಳನ್ನು ಪಾರಂಪರಿಕ ಸಂಸ್ಥೆಗಳಾಗಿ ಅಭಿವೃದ್ಧಿಪಡಿಸುವುದು.
- "ಕಲಿಕೆ ಜೊತೆ ಕೌಶಲ್ಯ" ಕಾರ್ಯಕ್ರಮದ ಅಡಿಯಲ್ಲಿ ಪದವಿ, ಇಂಜಿನಿಯರಿಂಗ್, ಪಾಲಿಟೆಕ್ನಿಕ್ ಮತ್ತು ITI ವಿದ್ಯಾರ್ಥಿಗಳಿಗೆ ಕೈಗಾರಿಕಾ ಮತ್ತು ವಾಣಿಜ್ಯೋದ್ಯಮ ತರಬೇತಿ; ಕೌಶಲ್ಯ ಅಭಿವೃದ್ಧಿಗೆ ಕ್ರಮ
- KREIS ಅಡಿಯಲ್ಲಿ ವಸತಿ ಶಾಲೆಗಳಲ್ಲಿ ಮತ್ತು ವಿಶೇಷ ಸಾಮರ್ಥ್ಯವುಳ್ಳ ಮಕ್ಕಳಿಗೆ ಬೆಂಗಳೂರಿನಲ್ಲಿ ತರಬೇತಿ.

## *ವಲಯ 3- ಆರ್ಥಿಕ ಅಭಿವೃದ್ಧಿಗೆ ಪ್ರಚೋದನೆ*

### ಗ್ರಾಮೀಣಾಭಿವೃದ್ಧಿಗೆ ಮಹತ್ವ

- ಗ್ರಾಮೀಣ ಮನೆಗಳಿಗೆ ನಲ್ಲಿ ಸಂಪರ್ಕ ಕಲ್ಪಿಸಲು ಜಲ ಜೀವನ್ ಮಿಷನ್ ಯೋಜನೆಗೆ ರೂ.6,231 ಕೋಟಿ ಹಂಚಿಕೆ.
- ಮಹಾತ್ಮಾ ಗಾಂಧಿ ಎನ್‌ಆರ್‌ಇಜಿಎ ಅಡಿಯಲ್ಲಿ 88 ಲಕ್ಷ ಕುಟುಂಬಗಳಿಗೆ ಉದ್ಯೋಗ ಒದಗಿಸುವ ಗುರಿ.
- ಪಂಚಾಯತ್ ರಾಜ್ ವ್ಯವಸ್ಥೆಯನ್ನು ಬಲಪಡಿಸಲು ಹೆಚ್ಚುವರಿ ಅನುದಾನ ರೂ. 780 ಕೋಟಿ. ಗ್ರಾಮ ಪಂಚಾಯಿತಿಗಳಿಗೆ ರೂ. 22 ಲಕ್ಷದಿಂದ ರೂ. 60 ಲಕ್ಷ.
- ಗ್ರಾಮದ ರಸ್ತೆಗಳು ಮತ್ತು ಕೃಷಿ ಭೂಮಿಯನ್ನು ಸಂಪರ್ಕಿಸುವ ಒಟ್ಟು 5,000 ಕಿಮೀ ರಸ್ತೆ ನಿರ್ಮಾಣಕ್ಕೆ ಅನುದಾನ.
- ನರೇಗಾ ಮತ್ತು ಸ್ವಚ್ಛ ಭಾರತ್ ಮಿಷನ್ ಅಡಿಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಒಳಚರಂಡಿ ವ್ಯವಸ್ಥೆ ನಿರ್ಮಾಣಕ್ಕೆ ಅನುದಾನ ಹಂಚಿಕೆ.
- ಗ್ರಂಥಾಲಯಗಳಿಲ್ಲದ 330 ಗ್ರಾಮ ಪಂಚಾಯಿತಿಗಳಲ್ಲಿ ಗ್ರಂಥಾಲಯಗಳ ಸ್ಥಾಪನೆ. ವಿಶೇಷ ಚೇತನ ಮಕ್ಕಳಿಗಾಗಿ 1,000 ಗ್ರಾಮೀಣ ಗ್ರಂಥಾಲಯಗಳ ಉನ್ನತೀಕರಣ.

### ಪ್ರಾದೇಶಿಕ ಸಮತೋಲನ

- ಕಲ್ಯಾಣ ಕರ್ನಾಟಕದಲ್ಲಿ 5,000 ಕೋಟಿ ರೂ. ವೆಚ್ಚದ ಕಾಮಗಾರಿಗಳ ಅನುಷ್ಠಾನಕ್ಕೆ ಕ್ರಮ.
- ದತ್ತಾಂಶ ವಿಶ್ಲೇಷಣೆ ಮತ್ತು ಮುನ್ಸೂಚನೆಗಾಗಿ ಯೋಜನಾ ಇಲಾಖೆಯ ಅಡಿಯಲ್ಲಿ **ಬಿಗ್ ಡಾಟಾ ಲೇಕ್ ಯೋಜನೆಯ** ಅನುಷ್ಠಾನ.

### ನಗರಗಳ ಸುಸ್ಥಿರ ಅಭಿವೃದ್ಧಿ

- ಕೇಂದ್ರ ಪ್ರಾಯೋಜಿತ **ಅಮೃತ್ 2.0 ಯೋಜನೆಯಡಿ** 185 ನಗರಗಳು ಮತ್ತು ಪಟ್ಟಣಗಳಲ್ಲಿ 7.21 ಲಕ್ಷ ಮನೆಗಳಿಗೆ ನಳ ಸಂಪರ್ಕಗಳನ್ನು ಒದಗಿಸಲು ಅನುದಾನ.
- **"ಪೌರ ಆಸರೆ"** ಯೋಜನೆಯಡಿ ಪೌರ ಕಾರ್ಮಿಕರಿಗೆ 5,000 ಮನೆಗಳ ನಿರ್ಮಾಣಕ್ಕೆ ರೂ.300 ಕೋಟಿ.
- **ಸ್ಮಾರ್ಟ್ ಸಿಟಿ ಅಭಿಯಾನದಡಿ** 143 ಕಾಮಗಾರಿ ಪೂರ್ಣಗೊಳಿಸಲು ಕ್ರಮ.

- **ಮೈಸೂರು, ಚಿಕ್ಕಬಳ್ಳಾಪುರ, ಚಿತ್ರದುರ್ಗ, ಹಾವೇರಿ, ಕೋಲಾರ ಮತ್ತು ರಾಮನಗರದಲ್ಲಿ ಇಂಟಿಗ್ರೇಟೆಡ್ ಟೌನ್‌ಶಿಪ್ ನಿರ್ಮಾಣ.**

**ಇಂಧನ ಕ್ಷೇತ್ರದ ಮುನ್ನಡೆ**

- ಸುಗಮ ವಿದ್ಯುತ್ ರವಾನೆ ಮತ್ತು ಪ್ರಸರಣಾ ಜಾಲದ ಬಲವರ್ಧನೆಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ವ್ಯಾಪ್ತಿಯಲ್ಲಿ 3,000 ಕೋಟಿ ರೂ. ಹೂಡಿಕೆ.
- ಕರ್ನಾಟಕ ಪವರ್ ಕಾರ್ಪೊರೇಷನ್ ಲಿಮಿಟೆಡ್‌ನ ಜನರೇಷನ್ ಸ್ವಿಚ್‌ಯಾರ್ಡ್ ಉಪಕರಣಗಳು ಮತ್ತು ರಕ್ಷಣಾ ವ್ಯವಸ್ಥೆಗಳ ಆಧುನೀಕರಣ.
- ರೂ.7,394 ಕೋಟಿ ವೆಚ್ಚದಲ್ಲಿ ಶರಾವತಿ ಪಂಪ್ಡ್ ಸ್ಟೋರೇಜ್ ಪವರ್ ಪ್ಲಾಂಟ್ ಯೋಜನೆ ಅನುಷ್ಠಾನ. PPP ಅಡಿಯಲ್ಲಿ ಹೊಸ 1,000 MW ಪಂಪ್ಡ್ ಸ್ಟೋರೇಜ್ ಪ್ಲಾಂಟ್ ಸ್ಥಾಪನೆ.
- ಪಾವಗಡ ಸೋಲಾರ್ ಪಾರ್ಕ್‌ನಲ್ಲಿ ಬ್ಯಾಟರಿ ಸಂಗ್ರಹಣೆ ಸೌಲಭ್ಯದೊಂದಿಗೆ 2 ಮೆಗಾವ್ಯಾಟ್ ಸಾಮರ್ಥ್ಯದ ಸೋಲಾರ್ ಪ್ಲಾಂಟ್ ಸ್ಥಾಪನೆ.




**ರಸ್ತೆ, ಹೆದ್ದಾರಿ ಅಭಿವೃದ್ಧಿ**

- ರಾಜ್ಯ ಕೋರ್ ನೆಟ್‌ವರ್ಕ್‌ನಲ್ಲಿ 1,700 ಕಿಮೀ ಉದ್ದದ ರಾಜ್ಯ ಹೆದ್ದಾರಿಗಳ ಅಭಿವೃದ್ಧಿಗೆ ರೂ.2,000 ಕೋಟಿ.
- **ಕೆ-ಶಿಪ್** 4 ರ ಅಡಿಯಲ್ಲಿ ರಾಜ್ಯ ಹೆದ್ದಾರಿಯ 2,943 ಕಿಮೀ ಉದ್ದದ ನಿರ್ಮಾಣವನ್ನು ಕೈಗೆತ್ತಿಕೊಳ್ಳಲು ಡಿಪಿಆರ್ ಸಿದ್ಧಪಡಿಸಲಾಗಿದೆ.
- ಪ್ರಮುಖ ಜಿಲ್ಲಾ ಕೇಂದ್ರ ಮತ್ತು ಸಂಪರ್ಕ ಗ್ರಾಮ ರಸ್ತೆಗಳಲ್ಲಿ ಸಂಪರ್ಕ ಕಲ್ಪಿಸಲು 5,000 ಕಿ.ಮೀ ಉದ್ದದ ರಸ್ತೆಗಳ ಅಭಿವೃದ್ಧಿ.
- ಬೀದರ್-ಕಲಬುರಗಿ-ಬಳ್ಳಾರಿ ಚತುಷ್ಪಥ ರಸ್ತೆ ಅಭಿವೃದ್ಧಿಗೆ ಕ್ರಮ.
- ಕೊಡಗು ಜಿಲ್ಲೆಯ ಪ್ರಮುಖ ರಸ್ತೆಗಳ ಅಭಿವೃದ್ಧಿಗೆ ವಿಶೇಷ ಪ್ಯಾಕೇಜ್.

**ಮೂಲಸೌಕರ್ಯ ಅಭಿವೃದ್ಧಿ**

- ರಾಜ್ಯದ ರೈಲ್ವೆ ಯೋಜನೆಗಳಿಗೆ ಕೇಂದ್ರದ ಆಯವ್ಯಯದಲ್ಲಿ 7,561 ಕೋಟಿ ರೂ. ನಿಗದಿ, ವಿವಿಧ ಯೋಜನೆಗಳಿಗೆ ರಾಜ್ಯದ ಪಾಲಿನ 2,647 ಕೋಟಿ ರೂ. ಗಳಿಗೂ ಹೆಚ್ಚು ಅನುದಾನ ಹಂಚಿಕೆ.

- ದಾವಣಗೆರೆ ಮತ್ತು ಕೊಪ್ಪಳ ವಿಮಾನ ನಿಲ್ದಾಣಗಳ ಕಾಮಗಾರಿ ಆರಂಭಿಸಲು ಕ್ರಮ.
- **"ಸಾಗರಮಾಲಾ" ಯೋಜನೆಯಡಿಯಲ್ಲಿ** 12 ಸಣ್ಣ ಬಂದರುಗಳ ಅಭಿವೃದ್ಧಿ ಯೋಜನೆಗಳನ್ನು ಪ್ರಾರಂಭಿಸುವುದು.
- ಉತ್ತರ ಕನ್ನಡ ಜಿಲ್ಲೆಯ **ಕೇಣಿ ಮತ್ತು ಪವಿನಕುರ್ವೆಯಲ್ಲಿ ಡೀಪ್ ವಾಟರ್ ಎಲ್ಲಾ ಹವಾಮಾನ ಗ್ರೀನ್ ಫೀಲ್ಡ್ ಬಂದರುಗಳನ್ನು** ಅಭಿವೃದ್ಧಿಪಡಿಸಲು ಕ್ರಮ.
- ಹಳೆ ಮಂಗಳೂರು ಬಂದರಿನಲ್ಲಿ ಹೆಚ್ಚುವರಿ ಶಿಪ್‌ಯಾರ್ಡ್ ಕಾರ್ಯಾಚರಣೆ ಆರಂಭಿಸಲು ಕ್ರಮ.
- ಪ್ರವಾಸೋದ್ಯಮವನ್ನು ಉತ್ತೇಜಿಸಲು **ಉಡುಪಿ ಜಿಲ್ಲೆಯ ಬೈಂದೂರಿನಲ್ಲಿ ಸಾಗರ ಅಭಿವೃದ್ಧಿಗೆ** ಕ್ರಮ.
- ಗುರುಪುರ ಮತ್ತು ನೇತ್ರಾವತಿ ನದಿಗಳಲ್ಲಿ ನಾಡದೋಣಿಗಳ ಸೇವೆ ಮತ್ತು ಬಾಗಲಕೋಟೆ-ಕಂಕಣವಾಡಿ-ಕದಂಪುರ, ಕಲಬುರಗಿ-ಸನ್ನತಿ, ಶಿವಮೊಗ್ಗ-ಕೋಗರು-ಶಿಗ್ಗ, ಮಂಗಳೂರು-ಹಂಗಾರಕಟ್ಟೆ ಮತ್ತು ಮಂಗಳೂರು-ಕಾರವಾರ-ಗೋವಾ-ಮುಂಬಯಿ ಮೂಲಕ ಜಲಮಾರ್ಗಗಳಲ್ಲಿ ಲಘು ಸರಕು ಸಾಗಣೆ ದೋಣಿ ಸೇವೆಗಳನ್ನು ಅಭಿವೃದ್ಧಿಪಡಿಸಲು ಕ್ರಮಗಳು.

## ಕೈಗಾರಿಕೆಗಳಿಗೆ ಉತ್ತೇಜನ

- ಬಹುರಾಷ್ಟ್ರೀಯ ಕಂಪನಿಗಳ ಕಾರ್ಯಾಚರಣೆಯ ಆರಂಭಿಕ ಪ್ರಾರಂಭಕ್ಕಾಗಿ **ಬೆಂಗಳೂರಿನ ಸುತ್ತಲೂ ಪ್ಲಗ್ ಮತ್ತು ಪ್ಲೇ ಇಂಡಸ್ಟ್ರಿಯಲ್ ಪಾರ್ಕ್ ಸ್ಥಾಪನೆ.**
- ಉತ್ತರ ಕನ್ನಡದ ಕೊಡ್ಕಣಿ, ಬೆಳಗಾವಿಯ ಕಣಗಾಲ, ಚಾಮರಾಜನಗರದ ಬದನಗುಪ್ಪೆ, ಕಲಬುರಗಿಯ ಚಿತ್ತಾಪುರ, ತುಮಕೂರಿನ ಬೈರಗೊಂಡನಹಳ್ಳಿ-ಚಿಕ್ಕನಾಯಕನಹಳ್ಳಿ, ಬೀದರ್‌ನ ಹುಮನಾಬಾದ್, ರಾಯಚೂರು ಗ್ರಾಮಾಂತರ, ಚಿತ್ರದುರ್ಗ, ಮೊಳಕಾಲ್ಮೂರು,ವಿಜಯಪುರದ ಹೂವಿನಹಿಪ್ಪರಗಿಯಲ್ಲಿ ಹೊಸ ಕೈಗಾರಿಕಾ ವಸಾಹತು ಸ್ಥಾಪನೆ.
- ಸೇವಾ ವಲಯದ ಮಹಿಳಾ ಉದ್ಯಮಿಗಳಿಗೆ ಶೇ.4ರ ಬಡ್ಡಿ ದರದಲ್ಲಿ ಒದಗಿಸಲಾದ ಸಾಲದ ಮಿತಿ ರೂ.2 ಕೋಟಿಯಿಂದ ರೂ.5 ಕೋಟಿಗೆ ಏರಿಕೆಯಾಗಿದೆ.
- ಜಿಲ್ಲಾ ಸಮಗ್ರ ಗಣಿ ಬಾಧಿತ ಪರಿಸರದಡಿ 151 ಯೋಜನೆಗಳ ಅನುಷ್ಠಾನ
- ಬಳ್ಳಾರಿ, ಚಿತ್ರದುರ್ಗ, ವಿಜಯನಗರ ಮತ್ತು ತುಮಕೂರು ಜಿಲ್ಲೆಗಳಲ್ಲಿ ಪುನಶ್ಚೇತನ ಅಭಿವೃದ್ಧಿ ಕಾರ್ಯಕ್ರಮ.
- ಕಲ್ಲು ಕ್ವಾರಿ ಗುತ್ತಿಗೆ ಮಂಜೂರಾತಿ ಸರಳೀಕರಣ. ಕಟ್ಟಡದ ಕಲ್ಲುಗಳ ಗಣಿಗಾರಿಕೆಯನ್ನು ಅವಲಂಬಿಸಿರುವ ಜನರಿಗೆ ಅನುಮತಿಗಳಲ್ಲಿ ವಿನಾಯಿತಿಗಳನ್ನು ಒದಗಿಸಲು ನಿಯಮಗಳ ಸಡಿಲಿಕೆ.
- **ರಾಯಚೂರು, ಕಲಬುರಗಿ, ವಿಜಯಪುರ ಮತ್ತು ಚಿಕ್ಕಮಗಳೂರುಗಳಲ್ಲಿ ಮೆಗಾ ಟೆಕ್ಸ್‌ಟೈಲ್ ಪಾರ್ಕ್‌ಗಳನ್ನು** ಮತ್ತು ರಾಜ್ಯದ 25 ಸ್ಥಳಗಳಲ್ಲಿ ಮಿನಿ ಟೆಕ್ಸ್‌ಟೈಲ್ ಪಾರ್ಕ್‌ಗಳನ್ನು ಸ್ಥಾಪಿಸುವುದು. 25 ಸಾವಿರ ಉದ್ಯೋಗ ಸೃಷ್ಟಿ ನಿರೀಕ್ಷೆ.
- ಮಂಡ್ಯದ ಮೈಶುಗರ್ ದಲ್ಲಿ ಎಥೆನಾಲ್ ಉತ್ಪಾದನಾ ಘಟಕ ಸ್ಥಾಪನೆ.

NAMMAKPSC ACADEMY BREAKING BARRIERS TO GREATNESS HEBBAL | VIJAYANAGAR Est. 2014

- ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿ ರೂ.30 ಕೋಟಿ ವೆಚ್ಚದಲ್ಲಿ ಸ್ಟಾರ್ಟ್ ಅಪ್ ಪಾರ್ಕ್ ಸ್ಥಾಪನೆ.
- ಬೆಂಗಳೂರಿನಲ್ಲಿ ಸಾಂಕ್ರಾಮಿಕ ಸನ್ನದ್ಧತೆ ಕೇಂದ್ರ ಸ್ಥಾಪನೆಗೆ ನೆರವು.
- ರಾಜ್ಯದ 6 ಪ್ರಾದೇಶಿಕ ಮತ್ತು ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರಗಳ ಉನ್ನತೀಕರಣ.
- ಸಂಶೋಧನೆ ಮತ್ತು ಅಭಿವೃದ್ಧಿ ಚಟುವಟಿಕೆಗಳ ಸಮನ್ವಯಕ್ಕಾಗಿ **ಕರ್ನಾಟಕ ರಾಜ್ಯ ಸಂಶೋಧನಾ ಪ್ರತಿಷ್ಠಾನದ** ಸ್ಥಾಪನೆ.

## *ವಲಯ 4- ಬೆಂಗಳೂರಿನ ಸಮಗ್ರ ಅಭಿವೃದ್ಧಿ*

- ಸಂಚಾರ ದಟ್ಟಣೆ ತಗ್ಗಿಸಲು 75 ಜಂಕ್ಷನ್‌ಗಳ ಅಭಿವೃದ್ಧಿಗೆ 150 ಕೋಟಿ ರೂ.
- ಟಿನ್ ಫ್ಯಾಕ್ಟರಿಯಿಂದ ಮೇಡಹಳ್ಳಿವರೆಗೆ ಎಲಿವೇಟೆಡ್ ರಸ್ತೆ ನಿರ್ಮಾಣ ಮತ್ತು ಯಶವಂತಪುರ ರೈಲು ನಿಲ್ದಾಣದಿಂದ ಮತ್ತಿಕೆರೆವರೆಗೆ ಮತ್ತು ಬಿಇಎಲ್ ರಸ್ತೆವರೆಗೆ ಸಮಗ್ರ ಮೇಲ್ಸೇತುವೆ ನಿರ್ಮಾಣ. 120 ಕಿಮೀ ಆರ್ಟಿರಿಯಲ್ ರಸ್ತೆಯ ವೈಟ್ ಟ್ಯಾಪಿಂಗ್ ಮತ್ತು 300 ಕಿಮೀ ಆರ್ಟಿರಿಯಲ್-ಸಬ್ ಆರ್ಟಿರಿಯಲ್ ರಸ್ತೆಗಳ ಅಭಿವೃದ್ಧಿ.
- 110 ಗ್ರಾಮಗಳ ರಸ್ತೆಗಳ ಪುನರ್ ನಿರ್ಮಾಣಕ್ಕೆ 300 ಕೋಟಿ ರೂ.
- ಬೈಯಪ್ಪನಹಳ್ಳಿಯ ಸರ್.ಎಂ.ವಿಶ್ವೇಶ್ವರಯ್ಯ ಮೆಟ್ರೊ ಟರ್ಮಿನಲ್ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸಂಚಾರ ದಟ್ಟಣೆ ತಗ್ಗಿಸಲು ರಸ್ತೆ ಅಭಿವೃದ್ಧಿಗೆ 300 ಕೋಟಿ ರೂ.
- ಬೆಂಗಳೂರು ಮೆಟ್ರೊ ರೈಲು ಯೋಜನೆಯಡಿ 40.15 ಕಿಮೀ ಮಾರ್ಗದ ಕಾಮಗಾರಿಗೆ ಕ್ರಮ.
- ಸ್ಯಾಟಲೈಟ್ ಟೌನ್ ರಿಂಗ್ ರೋಡ್ ನಿರ್ಮಾಣಕ್ಕೆ ಶೇ.30ರಷ್ಟು ಭೂಸ್ವಾಧೀನವನ್ನು ರಾಜ್ಯ ಸರ್ಕಾರ ಭರಿಸಲಿದೆ.
- ಬೆಂಗಳೂರು ಸಬ್ ಅರ್ಬನ್ ರೈಲು ಯೋಜನೆಗೆ ಅನುದಾನ.
- ಬೆಂಗಳೂರಿನಲ್ಲಿ ಪ್ರವಾಹ ನಿಯಂತ್ರಣಕ್ಕಾಗಿ ರೂ.3,000 ಕೋಟಿ ವಿಶ್ವಬ್ಯಾಂಕ್ ನೆರವಿನ ಯೋಜನೆಯ ಅನುಷ್ಠಾನ.
- ಕಾವೇರಿ ನೀರು ಸರಬರಾಜು ಯೋಜನೆಯ 5ನೇ ಹಂತದ ಕಾಮಗಾರಿಗಳನ್ನು ಪ್ರಸಕ್ತ ವರ್ಷದಲ್ಲಿ ಪೂರ್ಣಗೊಳಿಸಲು ಕ್ರಮ. 50 ಲಕ್ಷ ಜನರಿಗೆ ಶುದ್ಧ ಕುಡಿಯುವ ನೀರಿನ ಸೌಲಭ್ಯ.
- 110 ಗ್ರಾಮಗಳಿಗೆ 2ನೇ ಹಂತದ ಶುದ್ಧ ಕುಡಿಯುವ ನೀರಿನ ಯೋಜನೆ ಅನುಷ್ಠಾನಗೊಳಿಸಲು ಬಿಡಬ್ಲ್ಯೂಎಸ್ ಎಸ್‌ಬಿಗೆ ನೆರವು.
- ನಗರದಲ್ಲಿ ಹೆಚ್ಚುವರಿ 400 ಎಂಎಲ್‌ಡಿ ಒಳಚರಂಡಿ ಸಂಸ್ಕರಣಾ ಸಾಮರ್ಥ್ಯ ನಿರ್ಮಿಸಲು ಕ್ರಮ.
- ಪ್ರತಿ ವಾರ್ಡ್‌ನಲ್ಲಿ ಆಧುನಿಕ ವಾಸನೆರಹಿತ ತ್ಯಾಜ್ಯ ಸಂಸ್ಕರಣಾ ಘಟಕ ಸ್ಥಾಪನೆ.
- ಅಮೃತ ನಗರೋತ್ಥಾನದಡಿ ರೂ.180 ಕೋಟಿ ವೆಚ್ಚದ ಶಾಲಾಭಿವೃದ್ಧಿ ಯೋಜನೆಯ ಅನುಷ್ಠಾನ.

- ಬೃಹತ್ ತ್ಯಾಜ್ಯ ಉತ್ಪಾದಕರು ತಮ್ಮದೇ ಮಟ್ಟದಲ್ಲಿ ತ್ಯಾಜ್ಯವನ್ನು ಸಂಸ್ಕರಿಸಲು ಕಡ್ಡಾಯಗೊಳಿಸುವ ಕ್ರಮ.
- ಮಹಿಳೆಯರಿಗಾಗಿ 250 **"ಶೀ ಟಾಯ್ಲೆಟ್"**ಗಳ ನಿರ್ಮಾಣ.
- **ಬೆಂಗಳೂರಿನ ಆರೋಗ್ಯ ಆಡಳಿತ ವ್ಯವಸ್ಥೆಯನ್ನು ಬೆಂಗಳೂರು ಆರೋಗ್ಯ ವ್ಯವಸ್ಥೆಗಳು ಎಂದು ಪುನರ್ ರಚನೆ.**
- 3 ಹೈಟೆಕ್ ನರ್ಸರಿ ಸ್ಥಾಪನೆಗೆ ಕ್ರಮ.
- ಬಿಬಿಎಂಪಿ ಆಸ್ತಿಗಳ ಅತಿಕ್ರಮಣ ತಡೆಯಲು ಜಿಪಿಎಸ್ ಕಣ್ಗಾವಲು.
- ಸುರಕ್ಷಿತ ನಗರ ಯೋಜನೆ ಪೂರ್ಣಗೊಳಿಸಲು ಅನುದಾನ.

## *ವಲಯ 5- ಸಂಸ್ಕೃತಿ ಮತ್ತು ನೈಸರ್ಗಿಕ ಸಂಪನ್ಮೂಲಗಳ ರಕ್ಷಣೆ*

- ಬೆಂಗಳೂರಿನಲ್ಲಿ ಕನ್ನಡ ಮಾತೆ ಶ್ರೀ ಭುವನೇಶ್ವರಿ ಪ್ರತಿಮೆ ಸ್ಥಾಪನೆ ಮತ್ತು ಥೀಮ್ ಪಾರ್ಕ್ ಅಭಿವೃದ್ಧಿ.
- ದಾವಣಗೆರೆಯಲ್ಲಿ ವಿಶ್ವ ಕನ್ನಡ ಸಮ್ಮೇಳನ ನಡೆಯಲಿದೆ.
- ರಾಜ್ಯದ ಗಡಿ ಭಾಗಗಳ ರಸ್ತೆಗಳ ಅಭಿವೃದ್ಧಿಗೆ ವಿವಿಧ ಇಲಾಖೆಗಳ ಮೂಲಕ ಅನುದಾನ.
- "ನಮ್ಮ ಜಿಲ್ಲೆ ನಮ್ಮ ಸಂಸ್ಕೃತಿ" ಕಾರ್ಯಕ್ರಮದಡಿಯಲ್ಲಿ ಪ್ರತಿ ಜಿಲ್ಲೆಯಲ್ಲಿ ಜನಪದ ಹಬ್ಬ ನಡೆಯಲಿದೆ.
- ಕನ್ನಡಿಗರ ಹಿತಾಸಕ್ತಿ ಕಾಪಾಡಲು ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಕಾಯಿದೆ ಅನುಷ್ಠಾನ.

### ಯುವ ಸಬಲೀಕರಣಕ್ಕೆ ಆದ್ಯತೆ

- "ಬದುಕುವ ದಾರಿ" ಯೋಜನೆಯಡಿ ಶಾಲಾ ಶಿಕ್ಷಣದಿಂದ ಹೊರಗುಳಿದ ಯುವಕರಿಗೆ ಐಟಿಐಗಳಲ್ಲಿ ಮೂರು ತಿಂಗಳ ಅಲ್ಪಾವಧಿ ತರಬೇತಿಗಾಗಿ ರೂ.1,500 ವಿದ್ಯಾರ್ಥಿವೇತನ: 3 ತಿಂಗಳವರೆಗೆ ಅಪ್ರೆಂಟಿಸ್‌ಶಿಪ್ ಕಾರ್ಯಕ್ರಮದಡಿ ರೂ.1,500 ಸ್ಟೈಫಂಡ್.
- "ಯುವ ಸ್ನೇಹಿ" ಯೋಜನೆಯಡಿ ಮೂರು ವರ್ಷ ಕಳೆದರೂ ಉದ್ಯೋಗ ಸಿಗದ ಪದವೀಧರ ಯುವಕರಿಗೆ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಲು ರೂ.2,000 ಆರ್ಥಿಕ ನೆರವು.
- ರಾಜ್ಯದ ಜಿಲ್ಲೆಗಳು ಮತ್ತು ತಾಲೂಕುಗಳ ಕ್ರೀಡಾಂಗಣದ ಸಮಗ್ರ ಅಭಿವೃದ್ಧಿಗೆ ಅನುದಾನ.
- ಕರ್ನಾಟಕ ಒಲಿಂಪಿಕ್ ಕನಸು ಯೋಜನೆ ನಿಧಿ ಸ್ಥಾಪನೆಗೆ ರೂ.50 ಕೋಟಿ: ಪ್ರತಿಭಾನ್ವಿತ ಕ್ರೀಡಾಪಟುಗಳನ್ನು ಪ್ರಾಯೋಜಿಸಲು ಕ್ರಮ.

### ಪ್ರವಾಸೋದ್ಯಮ

- ಅಂಜನಾದ್ರಿಬೆಟ್ಟ, ಚಾಮುಂಡಿಬೆಟ್ಟ, ಹಂಪಿ ಸ್ಮಾರಕಗಳ ಅಭಿವೃದ್ಧಿ ಮತ್ತು ಮೈಸೂರು ವಸ್ತುಪ್ರದರ್ಶನ ಪ್ರಾಧಿಕಾರಕ್ಕೆ ಶಾಶ್ವತ ಸೌಲಭ್ಯ ಅಭಿವೃದ್ಧಿ ಯೋಜನೆ ಅನುಷ್ಠಾನ.
- ಹಂಪಿ ವಿಜಯವಿಟ್ಟಲ ದೇವಸ್ಥಾನ, ವಿಜಯಪುರ ಗೋಲ್ ಗುಂಬಜ್, ಚಿಕ್ಕಬಳ್ಳಾಪುರ ಜಿಲ್ಲೆ ಭೋಗನಂದೀಶ್ವರ ದೇವಸ್ಥಾನ, ಬಾದಾಮಿ ಗುಹೆಗಳು, ಕಿತ್ತೂರು ಮತ್ತು ಬೀದರ್ ಕೋಟೆಗಳ ಅಭಿವೃದ್ಧಿಗೆ 60 ಕೋಟಿ ರೂ.

- ಮೈಸೂರಿನಲ್ಲಿ ಅಂತರಾಷ್ಟ್ರೀಯ ಮಟ್ಟದ ಸ್ಟೇಟ್ ಮ್ಯೂಸಿಯಂ ಮತ್ತು ಆರ್ಟ್ ಗ್ಯಾಲರಿ ನಿರ್ಮಾಣ.
- **ಹೊನ್ನಾವರದಲ್ಲಿ ಚೆನ್ನಬೈರದೇವಿ ಸ್ಮಾರಕ ಉದ್ಯಾನವನ್ನು** ಅಭಿವೃದ್ಧಿಪಡಿಸಲಾಗುವುದು.
- ಸಂತ ಸೇವಾಲಾಲರ ಜನ್ಮಸ್ಥಳ ಸೂರಗೊಂಡನಹಳ್ಳಿ ಅಭಿವೃದ್ಧಿ:
- ಹೊದಿಗೆರೆಯಲ್ಲಿ ಶಹಾಜಿ ಮಹಾರಾಜರ ಸಮಾಧಿ ಅಭಿವೃದ್ಧಿಗೆ ರೂ.5 ಕೋಟಿ ಅನುದಾನ.
- ನಾಡಪ್ರಭು ಕೆಂಪೇಗೌಡ ಪ್ರವಾಸೋದ್ಯಮ ಸರ್ಕ್ಯೂಟ್, ರಾಮದೇವರ ಬೆಟ್ಟದಲ್ಲಿ ರಾಮಮಂದಿರ ನಿರ್ಮಾಣ.
- ಸಮಗ್ರ ಅಭಿವೃದ್ಧಿ ಸನ್ನತಿ-ಚಂದ್ರಲಾಂಬ ದೇವಸ್ಥಾನ, ಗಾಣಗಾಪುರ ದತ್ತಾತ್ರೇಯ ದೇವಸ್ಥಾನ ಮತ್ತು ಬನವಾಸಿ ಮಧುಕೇಶ್ವರ ದೇವಸ್ಥಾನ ಸಂಕೀರ್ಣ.
- ಮಳಖೇಡ್ ಕೋಟೆ ಸಂರಕ್ಷಣೆಗೆ ರೂ.20 ಕೋಟಿ ಅನುದಾನ. ಅರಣ್ಯ, ಪರಿಸರ ಮತ್ತು ಪರಿಸರ ವಿಜ್ಞಾನ
- **ರಾಜ್ಯದ ಸಿರ್ಸಿಯಲ್ಲಿ ಮೊದಲ ಪರಿಸರ ವಿಜ್ಞಾನ ವಿಶ್ವವಿದ್ಯಾಲಯ ಸ್ಥಾಪನೆ.**

## *ವಲಯ 6- ಆಡಳಿತ ಸುಧಾರಣೆ ಹಾಗೂ ನಾಗರಿಕ ಸೇವೆಗಳು*

- ಸರ್ಕಾರಿ ಭೂಮಿಯಲ್ಲಿ ತೋಟದ ಬೆಳೆ ಬೆಳೆಯುವವರಿಗೆ 25 ಎಕರೆ ಗರಿಷ್ಠ ಸೀಲಿಂಗ್‌ಗೆ 30 ವರ್ಷಗಳವರೆಗೆ ಭೂಮಿಯನ್ನು ಗುತ್ತಿಗೆ ನೀಡಲು ಭೂ ಕಂದಾಯ ಕಾಯ್ದೆಯಡಿ ನಿಯಮಗಳ ರಚನೆ.
- ಪ್ರಸಕ್ತ ವರ್ಷದಲ್ಲಿ 3,000 ಪೋಡಿಮುಕ್ತ ಗ್ರಾಮಗಳ ಗುರಿ.
- ಗ್ರಾಮ ಸಹಾಯಕರ ಹುದ್ದೆಗೆ ಜನಸೇವಕ ಎಂದು ಮರುನಾಮಕರಣ.. ಸರ್ಕಾರದ ಸೇವೆಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸುವ ಜವಾಬ್ದಾರಿಯನ್ನುವಹಿಸಲಾಗಿದೆ. ಗ್ರಾಮ ಸಹಾಯಕರ ಮಾಸಿಕ ಗೌರವಧನ ರೂ.1,000 ಹೆಚ್ಚಳ.
- ದತ್ತಿ ಇಲಾಖೆಯ ಮೂಲಕ ದೇವಾಲಯಗಳು ಮತ್ತು ಮಠಗಳ ಜೀರ್ಣೋದ್ಧಾರಕ್ಕೆ ಅನುದಾನ.
- ದತ್ತಿ ಇಲಾಖೆಯ ದೇವಾಲಯಗಳ ಇನಾಂ ಜಮೀನುಗಳ ವರ್ಷಾಶನವನ್ನು 48,000 ರೂ.ಗಳಿಂದ 60,000 ರೂ.ಗಳಿಗೆ ಹೆಚ್ಚಳ.
- **ರಾಷ್ಟ್ರೀಯ ಚಂಡಮಾರುತ ಅಪಾಯ ಉಪಶಮನ ಯೋಜನೆ ಹಂತ-3** ಕ್ಕೆ ರೂ.150 ಕೋಟಿ.
- ನೋಂದಣಿ ಮತ್ತು ಮುದ್ರಾಂಕ ಇಲಾಖೆಯ **ಕೆ-ಜಿಐಎಸ್ ತಂತ್ರಜ್ಞಾನದ** ಮೂಲಕ ವೈಜ್ಞಾನಿಕ ಮಾರ್ಗದರ್ಶನ ಮೌಲ್ಯ ವ್ಯವಸ್ಥೆಯ ಅನುಷ್ಠಾನ.
- 3ನೇ ಹಂತದ ದತ್ತಾಂಶ ಕೇಂದ್ರ ಸ್ಥಾಪನೆ.
- ರಾಜ್ಯದ 2ನೇ ಹಂತದ ನಗರಗಳಲ್ಲಿ 100 ರಿಂದ 200 ಸಾಮರ್ಥ್ಯದ ಮಿನಿ ಥಿಯೇಟರ್ ನಿರ್ಮಾಣಕ್ಕೆ ಉತ್ತೇಜನ ನೀಡುವುದು.
- ಬೆಂಗಳೂರು ನಗರದಲ್ಲಿ ಪೊಲೀಸ್ ವ್ಯವಸ್ಥೆಯನ್ನು ಬಲಪಡಿಸಲು ವಿವಿಧ ಹಂತಗಳಲ್ಲಿ 2,000 ಹುದ್ದೆಗಳನ್ನು ಸೃಷ್ಟಿಸಲಾಗುವುದು.
- ಪೊಲೀಸ್ ಗೃಹ ಯೋಜನೆಯಡಿ 3,000 ಮನೆಗಳ ನಿರ್ಮಾಣ.

- **ತುಮಕೂರು ಮತ್ತು ಶಿವಮೊಗ್ಗದಲ್ಲಿ ವಿಧಿವಿಜ್ಞಾನ ಪ್ರಯೋಗಾಲಯ** ನಿರ್ಮಾಣ.ಧಾರವಾಡದಲ್ಲಿರುವ ನ್ಯಾಯ ವಿಜ್ಞಾನ ವಿಶ್ವವಿದ್ಯಾಲಯ.
- **ಕೆ-ಸೇಫ್ 2** ಯೋಜನೆಯಡಿ ಭದ್ರತಾ ಸಲಕರಣೆಗಳು ಮತ್ತು ಇತರ ಸೌಲಭ್ಯಗಳಿಗಾಗಿ ರೂ.100 ಕೋಟಿ ಅನುದಾನ.
- ಗೃಹರಕ್ಷಕ ದಳದ ಗೌರವಧನ ದಿನಕ್ಕೆ 100 ರೂ ಹೆಚ್ಚಳ.
- ಸರ್ಕಾರಿ ವೆಬ್‌ಸೈಟ್‌ಗಳು, ಆನ್‌ಲೈನ್ ಸೇವೆಗಳು ಮತ್ತು ಡೇಟಾ ಸೆಂಟರ್‌ಗಳ ಭದ್ರತೆಗಾಗಿ ಸೈಬರ್ ಸೆಕ್ಯೂರಿಟಿ ಆಪರೇಷನ್ ಸೆಂಟರ್ ಸ್ಥಾಪನೆ.
- **'ಮುಖ್ಯ ಮಂತ್ರಿ ವಿಮಾ ಯೋಜನೆ'** ಆಟೋ ಚಾಲಕರು, ಟ್ಯಾಕ್ಸಿ ಚಾಲಕರು, ಲಾರಿ ಚಾಲಕರು ಮತ್ತು ಇಕಾಮರ್ಸ್‌ಗೆ ಡೆಲಿವರಿ ಸೇವೆ ನೀಡುತ್ತಿರುವವರಿಗೆ ರೂ.4 ಲಕ್ಷ ವಿಮಾ ಸೌಲಭ್ಯ. 16.50 ಲಕ್ಷ ಜನರಿಗೆ ಲಾಭ.
- 19 ಲಕ್ಷ ಶಾಲಾ-ಕಾಲೇಜು ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸಾರಿಗೆ ನಿಗಮಗಳಿಂದ 100 ಕೋಟಿ ರೂ. ವೆಚ್ಚದಲ್ಲಿ 1,000 ಹೊಸ ಕಾರ್ಯಾಚರಣೆಗೆ ಕ್ರಮ. 2 ಲಕ್ಷ ಹೆಚ್ಚುವರಿ ವಿದ್ಯಾರ್ಥಿಗಳಿಗೆ ಅನುಕೂಲ.
- ತುಮಕೂರು, ಹಾವೇರಿ, ಯಲಹಂಕ, ಕಸ್ತೂರಿನಗರ (ಬೆಂಗಳೂರು ಪೂರ್ವ), ಸಕಲೇಶಪುರ, ಕೆಜಿಎಫ್, ಚಿಂತಾಮಣಿ, ಸಾಗರ, ಗೋಕಾಕ್, ರಾಣೆಬೆನ್ನೂರು, ದಾಂಡೇಲಿ, ಸಿರ್ಸಿ ಮತ್ತು ಭಾಲ್ಕಿ ನಗರಗಳಲ್ಲಿ ಸ್ವಯಂಚಾಲಿತ ಚಾಲನಾ ಪರವಾನಗಿ ಪರೀಕ್ಷಾ ಟ್ರ್ಯಾಕ್‌ಗಳ ನಿರ್ಮಾಣಕ್ಕೆ ರೂ.85 ಕೋಟಿ.
- ಸರ್ಕಾರಿ ಕಚೇರಿಗಳು ಮತ್ತು ರಾಜ್ಯ ರಸ್ತೆ ಸಾರಿಗೆ ನಿಗಮದ ಡಿಪೋಗಳಲ್ಲಿ ಚಾರ್ಜಿಂಗ್ ಸ್ಟೇಷನ್ ಸ್ಥಾಪಿಸಲು ಉಪಕ್ರಮ

**ತೆರಿಗೆ ಪ್ರಸ್ತಾವನೆಗಳು:**

- ವೃತ್ತಿ ತೆರಿಗೆ ಅಧಿನಿಯಮ ಸರಳೀಕರಣ; ಕಡಿಮೆ ವರಮಾನ ಪಡೆಯುವ ನೌಕರರಿಗೆ ತೆರಿಗೆ ವಿನಾಯಿತಿ ಮಿತಿ ಮಾಸಿಕ 15,000 ರೂ. ಗಳಿಂದ 25,000 ರೂ. ಗಳಿಗೆ ಏರಿಕೆ,
- ಜಿ.ಎಸ್.ಟಿ. ಪೂರ್ವ ತೆರಿಗೆ ವಿವಾದ ಇತ್ಯರ್ಥಗೊಳಿಸಲು ಕರ ಸಮಾಧಾನ ಯೋಜನೆ.


**2023-24ನೇ ಸಾಲಿಗೆ ವಿವಿಧ ಇಲಾಖೆಗಳಿಗೆ ನಿಗದಿ ಪಡಿಸಿದ ತೆರಿಗೆ ರಾಜಸ್ವ ಸಂಗ್ರಹ ಗುರಿ:**

- ವಾಣಿಜ್ಯ ತೆರಿಗೆ ಇಲಾಖೆ-ಜಿಎಸ್ಟಿ ಪರಿಹಾರವನ್ನು ಹೊರತುಪಡಿಸಿ ರೂ.92,000 ಕೋಟಿ
- ನೋಂದಣಿ ಮತ್ತು ಮುದ್ರಾಂಕ - 19,000 ಕೋಟಿ ರೂ
- ಅಬಕಾರಿ ಇಲಾಖೆ - 35,000 ಕೋಟಿ ರೂ
- ಸಾರಿಗೆ ಇಲಾಖೆ – 10,500 ಕೋಟಿ ರೂ
- ಗಣಿ ಮತ್ತು ಭೂವಿಜ್ಞಾನ ಇಲಾಖೆ - 7,500 ಕೋಟಿ ರೂ

# ಕೇಂದ್ರ ಬಜೆಟ್ 2023 ಮುಖ್ಯಾಂಶಗಳು

ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ತಮ್ಮ ಐದನೇ ಬಜೆಟ್ ಮತ್ತು ಅಮೃತ ಕಾಲದ ಮೊದಲ ಬಜೆಟ್ ಅನ್ನು ಮಂಡಿಸಿದರು.

ರೂಪಾಯಿ ಸೈಕಲ್




## ಪರಿಚಯ:

- ಹಿಂದಿನ ಬಜೆಟ್‌ನಲ್ಲಿ ಹಾಕಿದ ಅಡಿಪಾಯ ಮತ್ತು ಭಾರತ@100 ಗಾಗಿ ರೂಪಿಸಲಾದ ನೀಲನಕ್ಷೆಯ ಮೇಲೆ ನಿರ್ಮಿಸಲು ಈ ಬಜೆಟ್ ಆಶಿಸುತ್ತಿದೆ.
- ಪ್ರಸಕ್ತ ವರ್ಷದ **ಆರ್ಥಿಕ ಬೆಳವಣಿಗೆಯು ಶೇಕಡಾ 7 ರಷ್ಟಿದೆ** ಎಂದು ಅಂದಾಜಿಸಲಾಗಿದೆ. ಇದು ಎಲ್ಲಾ ಪ್ರಮುಖ ಆರ್ಥಿಕತೆಗಳಲ್ಲಿ ಅತ್ಯಧಿಕವಾಗಿದೆ ಎಂಬುದು ಗಮನಾರ್ಹವಾಗಿದೆ. ಸುಮಾರು ಒಂಬತ್ತು ವರ್ಷಗಳಲ್ಲಿ ತಲಾ ಆದಾಯವು ದ್ವಿಗುಣಗೊಂಡು 1.97 ಲಕ್ಷ ರೂ.ಗೆ ತಲುಪಿದೆ.
- ಕಳೆದ ಒಂಬತ್ತು ವರ್ಷಗಳಲ್ಲಿ ಭಾರತದ ಆರ್ಥಿಕತೆಯು **ವಿಶ್ವದ 10 ನೇ ಸ್ಥಾನದಿಂದ 5 ನೇ ಸ್ಥಾನಕ್ಕೆ ಏರಿದೆ.**

### *ಜಾಗತಿಕವಾಗಿ ಹೆಚ್ಚುತ್ತಿರುವ ಭಾರತದ ಪ್ರಭಾವದ ಸಂಕ್ಷಿಪ್ತ ಚಿತ್ರಣ*

- **ಹಲವಾರು ಸಾಧನೆಗಳ ಕಾರಣ:** ಅನನ್ಯ ವಿಶ್ವ ದರ್ಜೆಯ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ, ಉದಾ., ಆಧಾರ್, ಕೋವಿನ್ ಮತ್ತು UPI; ಸಾಟಿಯಿಲ್ಲದ ಪ್ರಮಾಣ ಮತ್ತು ವೇಗದಲ್ಲಿ ಕೋವಿಡ್ ವ್ಯಾಕ್ಸಿನೇಷನ್ ಅದ್ವಿತೀಯ ಸಾಧನೆ ಮತ್ತು ಲಸಿಕೆ ವಿತರಣೆ; ಹವಾಮಾನ ಸಂಬಂಧಿತ ಗುರಿಗಳನ್ನು ಸಾಧಿಸುವುದು, ಮಿಷನ್ ಲೈಫ್, ಮತ್ತು ರಾಷ್ಟ್ರೀಯ ಹೈಡ್ರೋಜನ್ ಮಿಷನ್ ಮುಂತಾದ ಪ್ರದೇಶಗಳಲ್ಲಿ ಪೂರ್ವಭಾವಿ ಪಾತ್ರ.

- ಆಹಾರ ಮತ್ತು ಪೌಷ್ಟಿಕಾಂಶದ ಭದ್ರತೆಯನ್ನು ಖಚಿತಪಡಿಸಿಕೊಳ್ಳಲು, ಸರ್ಕಾರವು 1ನೇ ಜನವರಿ 2023 ರಿಂದ ಎಲ್ಲಾ ಅಂತ್ಯೋದಯ ಮತ್ತು ಆದ್ಯತೆಯ ಕುಟುಂಬಗಳಿಗೆ **ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆ** (PMGKAY) ಅಡಿಯಲ್ಲಿ ಮುಂದಿನ ಒಂದು ವರ್ಷಕ್ಕೆ ಉಚಿತ ಆಹಾರ ಧಾನ್ಯವನ್ನು ಪೂರೈಸುವ ಯೋಜನೆಯನ್ನು ಜಾರಿಗೊಳಿಸುತ್ತಿದೆ. ಸುಮಾರು ` 2 ಲಕ್ಷ ಕೋಟಿಯ ಸಂಪೂರ್ಣ ವೆಚ್ಚವನ್ನು ಕೇಂದ್ರ ಸರ್ಕಾರವೇ ಭರಿಸಲಿದೆ.

• ಉದ್ದೇಶಿತ ಪ್ರಯೋಜನಗಳ ಸಾರ್ವತ್ರಿಕೀಕರಣದೊಂದಿಗೆ ಅನೇಕ ಯೋಜನೆಗಳ ಸಮರ್ಥ ಅನುಷ್ಠಾನವು ಅಂತರ್ಗತ ಅಭಿವೃದ್ಧಿಗೆ ಕಾರಣವಾಗಿದೆ.

**ಕೆಲವು ಯೋಜನೆಗಳು:**

- ಸ್ವಚ್ಛ ಭಾರತ್ ಮಿಷನ್,
- ಉಜ್ವಲ ಅಡಿಯಲ್ಲಿ ಎಲ್ಪಿಜಿ ಸಂಪರ್ಕಗಳು,
- 102 ಕೋಟಿ ಜನರ ಕೋವಿಡ್ ಲಸಿಕೆ,
- ಪ್ರಧಾನ ಮಂತ್ರಿ ಜನ್ ಧನ್ ಬ್ಯಾಂಕ್ ಖಾತೆಗಳು,
- ಪ್ರಧಾನಮಂತ್ರಿ ಸುರಕ್ಷಾಬೀಮಾ ಮತ್ತು ಪ್ರಧಾನಮಂತ್ರಿ ಜೀವನ್ ಜ್ಯೋತಿ ಯೋಜನೆ ಅಡಿಯಲ್ಲಿ 44.6 ಕೋಟಿ ಜನರಿಗೆ ವಿಮಾ ರಕ್ಷಣೆ,
- ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಅಡಿಯಲ್ಲಿ 11.4 ಕೋಟಿಗೂ ಹೆಚ್ಚು ರೈತರಿಗೆ ರೂ. 2.2 ಲಕ್ಷ ಕೋಟಿ ನಗದು ವರ್ಗಾವಣೆ.

***ಅಮೃತ್ ಕಾಲ್ ನ ದೃಷ್ಟಿಕೋನ - ಸಶಕ್ತ ಮತ್ತು ಅಂತರ್ಗತ ಆರ್ಥಿಕತೆ***

• ಪ್ರಬಲವಾದ ಸಾರ್ವಜನಿಕ ಹಣಕಾಸು ಮತ್ತು ದೃಢವಾದ ಹಣಕಾಸು ವಲಯದೊಂದಿಗೆ ತಂತ್ರಜ್ಞಾನ-ಚಾಲಿತ ಮತ್ತು ಜ್ಞಾನ-ಆಧಾರಿತ ಆರ್ಥಿಕತೆಯನ್ನು ಒಳಗೊಂಡಿದೆ.

**ಅಮೃತ್ ಕಾಲ್ ಸಮಯದಲ್ಲಿ ಕೆಳಗಿನ ನಾಲ್ಕು ಅವಕಾಶಗಳು ರೂಪಾಂತರಗೊಳ್ಳಬಹುದು.**

1) ಮಹಿಳೆಯರ ಆರ್ಥಿಕ ಸಬಲೀಕರಣ

2) ಪ್ರಧಾನಮಂತ್ರಿ ವಿಶ್ವಕರ್ಮ ಕೌಶಲ ಸಮ್ಮಾನ (ಪಿಎಂ ವಿಕಾಸ್)


3) ಪ್ರವಾಸೋದ್ಯಮ:

4) ಹಸಿರು ಬೆಳವಣಿಗೆ




## ಈ ಬಜೆಟ್‌ನ ಆದ್ಯತೆಗಳು

ಈ ಕೆಳಗಿನ ಏಳು ಆದ್ಯತೆಗಳನ್ನು ಅಳವಡಿಸಿಕೊಂಡಿದೆ. ಅವು ಒಂದಕ್ಕೊಂದು ಪೂರಕವಾಗಿ **'ಸಪ್ತರ್ಷಿ'ಯಾಗಿ ವರ್ತಿಸುತ್ತವೆ.**




- ಅಂತರ್ಗತ ಅಭಿವೃದ್ಧಿ,
- ಮೂಲಸೌಕರ್ಯ ಮತ್ತು ಹೂಡಿಕೆ,
- ಕೊನೆಯ ಮೈಲಿಗಲ್ಲು ತಲುಪುವುದು,
- ಸಾಮರ್ಥ್ಯವನ್ನು ಅನಾವರಣಗೊಳಿಸುವುದು
- ಹಸಿರು ಬೆಳವಣಿಗೆ,
- ಯುವ ಶಕ್ತಿ
- ಹಣಕಾಸು ವಲಯ.

## ರಕ್ಷಣಾ ಬಜೆಟ್

- ರಕ್ಷಣಾ ಬಜೆಟ್ 13% ಏರಿಕೆ
- 5.93 ಲಕ್ಷ ಕೋಟಿ ರೂ.ಗಳ ಒಟ್ಟಾರೆ ಹಂಚಿಕೆಯಲ್ಲಿ, ಬಂಡವಾಳದ ವೆಚ್ಚವು 1.62 ಲಕ್ಷ ಕೋಟಿ ರೂ.ಗಳಷ್ಟಿದೆ, ಕಳೆದ ವರ್ಷದ 1.52 ಲಕ್ಷ ಕೋಟಿಗೆ ಹೋಲಿಸಿದರೆ ಸುಮಾರು ಶೇಕಡ 10 ರಷ್ಟು ಹೆಚ್ಚಳವಾಗಿದೆ. ಜಲಾಂತರ್ಗಾಮಿಗಳು, ಶಸ್ತ್ರಸಜ್ಜಿತ ಡ್ರೋನ್‌ಗಳು, ಬಂದೂಕುಗಳು, ಟ್ಯಾಂಕ್‌ಗಳು ಮತ್ತು ಇತರ ಯುದ್ಧನೌಕೆಗಳು,ಮಿಲಿಟರಿ ಯಂತ್ರಾಂಶಗಳ ಖರೀದಿ, ಯುದ್ಧ ವಿಮಾನಗಳಂತಹ ಹೊಸ ಮತ್ತು ಆಧುನಿಕ ಶಸ್ತ್ರಾಸ್ತ್ರಗಳನ್ನು ಸಂಗ್ರಹಿಸಲು ಉದ್ದೇಶಿಸಲಾಗಿದೆ.

## ಬಾಹ್ಯಾಕಾಶ ಇಲಾಖೆ

- 2023-24 ರಲ್ಲಿ ಬಾಹ್ಯಾಕಾಶ ಇಲಾಖೆಯ ವೆಚ್ಚವನ್ನು 8% ರಷ್ಟು ಕಡಿತಗೊಳಿಸಲಾಗಿದೆ
- **ಚಂದ್ರಯಾನ 3, ಆದಿತ್ಯ L1**, ಮತ್ತು ಅದರ ಹವಾಮಾನ ಮತ್ತು ವಾತಾವರಣದ ಕಾರ್ಯಕ್ರಮಗಳಂತಹ ISRO ವಿಜ್ಞಾನ ಮಿಷನ್‌ಗಳನ್ನು ಒಳಗೊಂಡಿರುವ ಬಾಹ್ಯಾಕಾಶ ವಿಜ್ಞಾನದ ವೆಚ್ಚವು ಹಿಂದಿನ ಬಜೆಟ್ ಅಂದಾಜಿನಿಂದ ನಾಮಮಾತ್ರ ಕಡಿತವನ್ನು ಮಾಡಲಾಗಿದೆ.

## ಆದ್ಯತೆ 1: ಅಂತರ್ಗತ ಅಭಿವೃದ್ಧಿ

•ವಿಶೇಷವಾಗಿ ರೈತರು, ಮಹಿಳೆಯರು, ಯುವಜನರು, ಇತರ ಹಿಂದುಳಿದ ವರ್ಗಗಳು, ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳು, ದಿವ್ಯಾಂಗರು ಮತ್ತು ಆರ್ಥಿಕವಾಗಿ ದುರ್ಬಲ ವರ್ಗಗಳ ಒಳಗೊಳ್ಳುವ ಅಭಿವೃದ್ಧಿ ಮತ್ತು ಹಿಂದುಳಿದವರಿಗೆ ಒಟ್ಟಾರೆ ಆದ್ಯತೆ

• ಜಮ್ಮು ಮತ್ತು ಕಾಶ್ಮೀರ, ಲಡಾಖ್ ಮತ್ತು ಈಶಾನ್ಯ ರಾಜ್ಯಗಳ ಮೇಲೆ ನಿರಂತರ ಗಮನಹರಿಸಲಾಗಿದೆ

### ಕೃಷಿ ಮತ್ತು ಸಹಕಾರ

• ಕೃಷಿಗಾಗಿ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ

• ಕೃಷಿ ವೇಗವರ್ಧಕ ನಿಧಿ

• ಹತ್ತಿ ಬೆಳೆಯ ಉತ್ಪಾದಕತೆಯನ್ನು ಹೆಚ್ಚಿಸುವುದು

• ಆತ್ಮನಿರ್ಭರ್ ತೋಟಗಾರಿಕೆ ಸ್ವಚ್ಛ ಸಸ್ಯ ಕಾರ್ಯಕ್ರಮ (ಕ್ಲೀನ್ ಪ್ಲಾಂಟ್ ಪ್ರೋಗ್ರಾಂ)

• ರಾಗಿಗಾಗಿ ಜಾಗತಿಕ ಹಬ್: **'ಶ್ರೀ ಅನ್ನ'**

• ಕೃಷಿ ಕ್ರೆಡಿಟ್

• ಮೀನುಗಾರಿಕೆ: **ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆ**

• ಸಹಕಾರ

### ಆರೋಗ್ಯ, ಶಿಕ್ಷಣ ಮತ್ತು ಕೌಶಲ್ಯ

• ನರ್ಸಿಂಗ್ ಕಾಲೇಜುಗಳು

• ಸಿಕಲ್ ಸೆಲ್ ಅನೀಮಿಯಾ (ರಕ್ತಹೀನತೆ) ತೊಡೆದು ಹಾಕುವುದು, ಮಿಷನ್ ವೈದ್ಯಕೀಯ ಸಂಶೋಧನೆ

• ಫಾರ್ಮಾ (ಔಷಧ ಕಂಪನಿ) ಸಂಶೋಧನೆ: ಔಷಧ ಕ್ಷೇತ್ರದಲ್ಲಿ ಸಂಶೋಧನೆಯನ್ನು ಉತ್ತೇಜಿಸಲು ಹೊಸ ಕಾರ್ಯಕ್ರಮವನ್ನು ಪ್ರಾರಂಭಿಸಲಾಗುವುದು.

•ವೈದ್ಯಕೀಯ ಸಾಧನಗಳಿಗಾಗಿ ಬಹುವಿಷಯಗಳ ಪಠ್ಯಕ್ರಮ

• ಶಿಕ್ಷಕರ ತರಬೇತಿ

• ಮಕ್ಕಳು ಮತ್ತು ಹದಿಹರೆಯದವರಿಗೆ ರಾಷ್ಟ್ರೀಯ ಡಿಜಿಟಲ್ ಗ್ರಂಥಾಲಯ (ಲೈಬ್ರರಿ)

## ಆದ್ಯತೆ 2: ಕೊನೆಯ ಮೈಲಿಗಲ್ಲು ತಲುಪುವುದು

• 'ಕೊನೆಯ ಮೈಲಿಯನ್ನು ತಲುಪುವ' ಉದ್ದೇಶಕ್ಕೆ ತೀಕ್ಷ್ಣವಾದ ಗಮನವನ್ನು ನೀಡಲು, ಸರ್ಕಾರವು ಆಯುಷ್, ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ, ಕೌಶಲ್ಯ ಅಭಿವೃದ್ಧಿ, ಜಲ ಶಕ್ತಿ ಮತ್ತು ಸಹಕಾರ ಸಚಿವಾಲಯಗಳನ್ನು ರಚಿಸಿದೆ.

**ಕೈಗೊಂಡ ಕಾರ್ಯಕ್ರಮಗಳು:**

• ಮಹತ್ವಾಕಾಂಕ್ಷೆಯ ಜಿಲ್ಲೆಗಳು ಮತ್ತು ಬ್ಲಾಕ್‌ಗಳ ಕಾರ್ಯಕ್ರಮ

• ಪ್ರಧಾನ ಮಂತ್ರಿ ಪಿವಿಟಿಜಿ ಅಭಿವೃದ್ಧಿ ಮಿಷನ್

• ಏಕಲವ್ಯ ಮಾದರಿ ವಸತಿ ಶಾಲೆಗಳು

• ಬರಪೀಡಿತ ಪ್ರದೇಶಕ್ಕೆ ನೀರು

• **ಪ್ರಧಾನ ಮಂತ್ರಿ ಆವಾಸ್ ಯೋಜನೆ:** ಪ್ರಧಾನಮಂತ್ರಿ ಆವಾಸ್ ಯೋಜನೆಗೆ 66% ರಷ್ಟು ವೆಚ್ಚವನ್ನು ರೂ.79,000 ಕೋಟಿಗಳಿಗೆ ಹೆಚ್ಚಿಸಲಾಗಿದೆ.

• **ಭಾರತ್ ಶೇರ್ಡ್ ರೆಪೊಸಿಟರಿ ಆಫ್ ಇನ್‌ಸ್ಕ್ರಿಪ್ಷನ್ಸ್** (ಶಾಸನ ಸಂಗ್ರಹಾಲಯ) **(ಭಾರತ್ SHRI):** ಭಾರತೀಯ ಪುರಾತತ್ವ ಸಮೀಕ್ಷೆ (ASI) ಯಿಂದ ಹೈದರಾಬಾದ್‌ನಲ್ಲಿರುವ ಡಿಜಿಟಲ್ ಎಪಿಗ್ರಫಿ (ಶಾಸನಶಾಸ್ತ್ರ) ಮ್ಯೂಸಿಯಂ.

• ಬಡ ಕೈದಿಗಳಿಗೆ ಬೆಂಬಲ

## *ಆದ್ಯತೆ 3: ಮೂಲಸೌಕರ್ಯ ಮತ್ತು ಹೂಡಿಕೆ*

ಮೂಲಸೌಕರ್ಯ ಮತ್ತು ಉತ್ಪಾದನಾ ಸಾಮರ್ಥ್ಯದಲ್ಲಿನ ಹೂಡಿಕೆಗಳು ಬೆಳವಣಿಗೆ ಮತ್ತು ಉದ್ಯೋಗದ ಮೇಲೆ ದೊಡ್ಡ ಗುಣಕ ಪರಿಣಾಮವನ್ನು ಬೀರುತ್ತವೆ.

**ಕಾರ್ಯಕ್ರಮಗಳು:**

• ಬೆಳವಣಿಗೆ ಮತ್ತು ಉದ್ಯೋಗಗಳ ಚಾಲಕನಾಗಿ ಬಂಡವಾಳ ಹೂಡಿಕೆ

• ಪರಿಣಾಮಕಾರಿ ಬಂಡವಾಳ ವೆಚ್ಚ

• ಬಂಡವಾಳ ಹೂಡಿಕೆಗಾಗಿ ರಾಜ್ಯ ಸರ್ಕಾರಗಳಿಗೆ ಬೆಂಬಲ

• ಮೂಲಸೌಕರ್ಯದಲ್ಲಿ ಖಾಸಗಿ ಹೂಡಿಕೆಗೆ ಅವಕಾಶಗಳನ್ನು ಹೆಚ್ಚಿಸುವುದು

•ಮೂಲಸೌಕರ್ಯದ ಸಂತುಲಿತ (ಸಾಮರಸ್ಯ) ಪ್ರಧಾನ ಪಟ್ಟಿ : ಮೂಲಸೌಕರ್ಯಗಳ ಸಂತುಲಿತ (ಸಾಮರಸ್ಯ) ಮಾಸ್ಟರ್ ಪಟ್ಟಿಯನ್ನು ಪರಿಣತ ಸಮಿತಿ ಪರಿಶೀಲಿಸುತ್ತದೆ.




• ರೈಲ್ವೆ

**•ಸಾಗಾಣಿಕೆ(ಲಾಜಿಸ್ಟಿಕ್ಸ್) ಮತ್ತು ಪ್ರಾದೇಶಿಕ ಸಂಪರ್ಕ**

ಬಂದರುಗಳು, ಕಲ್ಲಿದ್ದಲು, ಉಕ್ಕು, ರಸಗೊಬ್ಬರ ಮತ್ತು ಆಹಾರ ಧಾನ್ಯಗಳ ವಲಯಗಳಿಗೆ ಕೊನೆಯ ಮತ್ತು ಮೊದಲ ಮೈಲಿ ಸಂಪರ್ಕಕ್ಕಾಗಿ ನೂರು ನಿರ್ಣಾಯಕ ಸಾರಿಗೆ ಮೂಲಸೌಕರ್ಯ ಯೋಜನೆಗಳನ್ನು ಗುರುತಿಸಲಾಗಿದೆ.

ಖಾಸಗಿ ಮೂಲಗಳಿಂದ ₹ 15,000 ಕೋಟಿ ಸೇರಿದಂತೆ ₹ 75,000 ಕೋಟಿ ಹೂಡಿಕೆಯೊಂದಿಗೆ ಆದ್ಯತೆಯ ಮೇಲೆ ಇವುಗಳನ್ನು ತೆಗೆದುಕೊಳ್ಳಲಾಗುವುದು.

• **ಪ್ರಾದೇಶಿಕ ಸಂಪರ್ಕ:** ದೇಶಿಕ ವಾಯು ಸಂಪರ್ಕವನ್ನು ಸುಧಾರಿಸಲು ಐವತ್ತು ಹೆಚ್ಚುವರಿ ವಿಮಾನ ನಿಲ್ದಾಣಗಳು, ಹೆಲಿಪೋರ್ಟ್‌ಗಳು, ವಾಟರ್ ಏರೋಡ್ರೋಮ್‌ಗಳು ಮತ್ತು ಲ್ಯಾಂಡಿಂಗ್ ಮೈದಾನಗಳನ್ನು ಅತ್ಯಧುನಿಕ ರೀತಿಯಲ್ಲಿ ಪುನರುಜ್ಜೀವಗೊಳಿಸಲಾಗುವುದು.

**ನಾಳಿನ ಸುಸ್ಥಿರ ನಗರಗಳು:** ಭೂ ಸಂಪನ್ಮೂಲಗಳ ಸಮರ್ಥ ಬಳಕೆ, ನಗರ ಮೂಲಸೌಕರ್ಯಕ್ಕಾಗಿ ಸಾಕಷ್ಟು ಸಂಪನ್ಮೂಲಗಳು, ಸಾರಿಗೆ-ಆಧಾರಿತ ಅಭಿವೃದ್ಧಿ, ನಗರ ಭೂಮಿಯ ವರ್ಧಿತ ಲಭ್ಯತೆ ಮತ್ತು ಕೈಗೆಟುಕುವಿಕೆ, ಮತ್ತು ಎಲ್ಲರಿಗೂ ಅವಕಾಶಗಳು

• **ನಗರಗಳನ್ನು ಮುನ್ಸಿಪಲ್ ಬಾಂಡ್‌ಗಳಿಗೆ ಸಿದ್ಧಗೊಳಿಸುವುದು:** ಆಸ್ತಿ ತೆರಿಗೆ ಆಡಳಿತ ಸುಧಾರಣೆಗಳು ಮತ್ತು ನಗರ ಮೂಲಸೌಕರ್ಯಗಳ ಮೇಲಿನ ರಿಂಗ್-ಫೆನ್ಸಿಂಗ್ ಬಳಕೆದಾರರ ಶುಲ್ಕಗಳ ಮೂಲಕ, ಪುರಸಭೆಯ ಬಾಂಡ್‌ಗಳಿಗೆ ತಮ್ಮ ಕ್ರೆಡಿಟ್ ಅರ್ಹತೆಯನ್ನು ಸುಧಾರಿಸಲು ನಗರಗಳನ್ನು ಉತ್ತೇಜಿಸಲಾಗುತ್ತದೆ.

• **ನಗರ ಮೂಲಸೌಕರ್ಯ ಅಭಿವೃದ್ಧಿ ನಿಧಿ:** ಆದ್ಯತಾ ವಲಯದ ಸಾಲ ಕೊರತೆಯ ಬಳಕೆಯ ಮೂಲಕ ಸ್ಥಾಪಿಸಲಾಗಿದೆ. ಇದನ್ನು ನ್ಯಾಷನಲ್ ಹೌಸಿಂಗ್ ಬ್ಯಾಂಕ್ ನಿರ್ವಹಿಸುತ್ತದೆ ಮತ್ತು ಶ್ರೇಣಿ 2 ಮತ್ತು ಶ್ರೇಣಿ 3 ನಗರಗಳಲ್ಲಿ ನಗರ ಮೂಲಸೌಕರ್ಯಗಳನ್ನು ರಚಿಸಲು ಸಾರ್ವಜನಿಕ ಏಜೆನ್ಸಿಗಳು ಇದನ್ನು ಬಳಸುತ್ತವೆ.

• **ನಗರ ನೈರ್ಮಲ್ಯ:** ಎಲ್ಲ ನಗರಗಳು ಮತ್ತು ಪಟ್ಟಣಗಳಲ್ಲಿ ಸೆಪ್ಟಿಕ್ ಟ್ಯಾಂಕ್‌ಗಳು ಮತ್ತು ಒಳಚರಂಡಿಗಳನ್ನು ಶೇ. 100 ರಷ್ಟು ಯಾಂತ್ರಿಕವಾಗಿ ತೆಗೆದುಹಾಕಲು ಅನುವು ಮಾಡಿಕೊಡಲಾಗುವುದು. ಒಣ ಮತ್ತು ಹಸಿ ತ್ಯಾಜ್ಯದ ವೈಜ್ಞಾನಿಕ ನಿರ್ವಹಣೆಗೆ ಹೆಚ್ಚಿನ ಗಮನ ನೀಡಲಾಗುವುದು.

### *ಆದ್ಯತೆ 4: ಸಾಮರ್ಥ್ಯವನ್ನು ಅನಾವರಣಗೊಳಿಸುವುದು*

• **ಮಿಷನ್ ಕರ್ಮಯೋಗಿ :** ಮಿಷನ್ ಕರ್ಮಯೋಗಿ ಅಡಿಯಲ್ಲಿ ಕೇಂದ್ರ, ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ಪೌರಕಾರ್ಮಿಕರಿಗೆ ಸಾಮರ್ಥ್ಯ ವೃದ್ಧಿ ಯೋಜನೆಗಳನ್ನು ಸಿದ್ಧಪಡಿಸಿ ಅನುಷ್ಠಾನಗೊಳಿಸುತ್ತಿವೆ. ಮಿಷನ್ ಕರ್ಮಯೋಗಿ ಅಡಿಯಲ್ಲಿ, ಸರ್ಕಾರವು ಐಗೋಟ್ (iGOT) ಕರ್ಮಯೋಗಿ ಎಂಬ ಉಪಕ್ರಮವನ್ನು ಪ್ರಾರಂಭಿಸಿದೆ, ಇದು ಲಕ್ಷಾಂತರ ಸರ್ಕಾರಿ ಉದ್ಯೋಗಿಗಳಿಗೆ ತಮ್ಮ ಕೌಶಲ್ಯಗಳನ್ನು ಹೆಚ್ಚಿಸಲು ಮತ್ತು ಸಾರ್ವಜನಿಕ ಕಲ್ಯಾಣ ಕೇಂದ್ರಿತ ವಿಧಾನವನ್ನು ಅಳವಡಿಸಿಕೊಳ್ಳಲು ಕಲಿಕೆಯ ಅವಕಾಶಗಳನ್ನು ಒದಗಿಸುತ್ತಿದೆ.

**•ವಿಶ್ವಾಸ ಆಧಾರಿತ ಆಡಳಿತವನ್ನು ಮತ್ತಷ್ಟು ಹೆಚ್ಚಿಸಲು 42 ಕೇಂದ್ರ ಕಾಯ್ದೆಗಳಿಗೆ ತಿದ್ದುಪಡಿ ಮಾಡುವ ಜನ ವಿಶ್ವಾಸ್ ಮಸೂದೆಯನ್ನು ಪರಿಚಯಿಸಲಾಗಿದೆ.**

• **ಕೃತಕ ಬುದ್ಧಿಮತ್ತೆಗಾಗಿ ಉತ್ಕೃಷ್ಟತೆಯ ಕೇಂದ್ರಗಳು:** "ಭಾರತದಲ್ಲಿ AI ಅನ್ನು ತಯಾರಿಸಿ ಮತ್ತು AI ಅನ್ನು ಭಾರತಕ್ಕಾಗಿ ಕೆಲಸ ಮಾಡಿ" ಎಂಬ ದೃಷ್ಟಿಕೋನವನ್ನು ಸಾಕಾರಗೊಳಿಸಲು, ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಕೃತಕ ಬುದ್ಧಿಮತ್ತೆಗಾಗಿ ಮೂರು ಶ್ರೇಷ್ಠತೆಯ ಕೇಂದ್ರಗಳನ್ನು ಸ್ಥಾಪಿಸಲಾಗುವುದು.

**ಕೃತಕ ಬುದ್ಧಿಮತ್ತೆಗಾಗಿ ಉತ್ಕೃಷ್ಟತೆಯ ಕೇಂದ್ರಗಳು**

- "ಮೇಕ್ ಇನ್ ಇಂಡಿಯಾ ಮತ್ತು ಮೇಕ್ ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ ವರ್ಕ್ ಫಾರ್ ಇಂಡಿಯಾ" (ಭಾರತಕ್ಕಾಗಿ ಕೃತಕ ಬುದ್ಧಿ ಮತ್ತೆ ಕಾರ್ಯ ಮಾಡಿ) ಎಂಬ ದೂರದೃಷ್ಟಿಯನ್ನು ಸಾಕಾರಗೊಳಿಸಲು, ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಕೃತಕ ಬುದ್ಧಿಮತ್ತೆಗಾಗಿ ಮೂರು ಉತ್ಕೃಷ್ಟತೆಯ ಕೇಂದ್ರಗಳನ್ನು ಸ್ಥಾಪಿಸಲು ಪ್ರಸ್ತಾಪಿಸಲಾಗಿದೆ. ಕೃಷಿ, ಆರೋಗ್ಯ ಮತ್ತು ಸುಸ್ಥಿರ ನಗರಗಳಿಗೆ ಸಂಬಂಧಿಸಿದ ವಿವಿಧ ಕ್ಷೇತ್ರಗಳಲ್ಲಿ ಬಹುಶಿಸ್ತೀಯ ಸಂಶೋಧನೆ ನಡೆಸುವುದು, ಅತ್ಯಾಧುನಿಕ ಕ್ರಿಯಾ ಯೋಜನೆಗಳನ್ನು ಅಭಿವೃದ್ಧಿಪಡಿಸುವುದು ಮತ್ತು ಪ್ರಮುಖ ಸಮಸ್ಯೆಗಳಿಗೆ ಪರಿಹಾರಗಳನ್ನು ಕಂಡುಕೊಳ್ಳುವಲ್ಲಿ ದೇಶದ ಪ್ರಮುಖ ಕೈಗಾರಿಕೋದ್ಯಮಿಗಳು ಪ್ರಮುಖ ಪಾತ್ರ ವಹಿಸುತ್ತಾರೆ. ಇದು ಕೃತಕ ಬುದ್ಧಿಮತ್ತೆಯ ಪರಿಸರ ವ್ಯವಸ್ಥೆಯನ್ನು ಉತ್ತೇಜಿಸುತ್ತದೆ ಮತ್ತು ಈ ಪ್ರದೇಶದಲ್ಲಿ ಗುಣಮಟ್ಟದ ಮಾನವ ಸಂಪನ್ಮೂಲಗಳಿಗೆ ತರಬೇತಿ ನೀಡುತ್ತದೆ

•**ರಾಷ್ಟ್ರೀಯ ದತ್ತಾಂಶ ಆಡಳಿತ ನೀತಿ:** ನವೋದ್ಯಮಗಳು ಮತ್ತು ಅಕಾಡೆಮಿಗಳಿಂದ ನಾವೀನ್ಯತೆ ಮತ್ತು ಸಂಶೋಧನೆಯನ್ನು ಅನಾವರಣಗೊಳಿಸಲು, ಅನಾಮಧೇಯ ದತ್ತಾಂಶಕ್ಕೆ ಪ್ರವೇಶಾವಕಾಶವನ್ನು ಸಕ್ರಿಯಗೊಳಿಸಲು ರಾಷ್ಟ್ರೀಯ ದತ್ತಾಂಶ ಆಡಳಿತ ನೀತಿಯನ್ನು ಸಹ ಪ್ರಸ್ತಾಪಿಸಲಾಗಿದೆ.

• ನೋ ಯುವರ್ ಕಸ್ಟಮರ್ (ಕೆವೈಸಿ) ಪ್ರಕ್ರಿಯೆಯ ಸರಳೀಕರಣ

• **ಸಾಮಾನ್ಯ ವ್ಯಾಪಾರ ಗುರುತಿಸುವಿಕೆ:** PAN ಅನ್ನು ನಿರ್ದಿಷ್ಟ ಸರ್ಕಾರಿ ಏಜೆನ್ಸಿಗಳ ಎಲ್ಲಾ ಡಿಜಿಟಲ್ ವ್ಯವಸ್ಥೆಗಳಿಗೆ ಸಾಮಾನ್ಯ ಗುರುತಿಸುವಿಕೆಯಾಗಿ ಬಳಸಲಾಗುತ್ತದೆ. ಇದು ವ್ಯವಹಾರವನ್ನು ಸುಲಭಗೊಳಿಸುತ್ತದೆ; ಮತ್ತು ಅದನ್ನು ಕಾನೂನು ಆದೇಶದ ಮೂಲಕ ಸುಗಮಗೊಳಿಸಲಾಗುವುದು.

• ಏಕೀಕೃತ ಫೈಲಿಂಗ್ ಪ್ರಕ್ರಿಯೆ

• ವಿವಾದ್ ಸೆ ವಿಶ್ವಾಸ್ I - MSME ಗಳಿಗೆ ಪರಿಹಾರ

• ವಿವಾದ್ ಸೆ ವಿಶ್ವಾಸ್ II - ಒಪ್ಪಂದದ ವಿವಾದಗಳನ್ನು ಇತ್ಯರ್ಥಪಡಿಸುವುದು

• ರಾಜ್ಯ ಬೆಂಬಲ ಮಿಷನ್

• ಫಲಿತಾಂಶ ಆಧಾರಿತ ಹಣಕಾಸು

• ಇ-ಕೋರ್ಟ್‌ಗಳು

• **ಫಿನ್‌ಟೆಕ್ ಸೇವೆಗಳು:** ಆಧಾರ್, ಪ್ರಧಾನಮಂತ್ರಿ ಜನ್ ಧನ ಯೋಜನೆ, ವಿಡಿಯೋ ಕೆವೈಸಿ, ಇಂಡಿಯಾ ಸ್ಟಾಕ್ ಮತ್ತು ಯುಪಿಐ ಸೇರಿದಂತೆ ನಮ್ಮ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯದಿಂದ ಭಾರತದಲ್ಲಿ ಫಿನ್‌ಟೆಕ್ ಸೇವೆಗಳನ್ನು ಸುಗಮಗೊಳಿಸಲಾಗಿದೆ.

**ವಿವಾದ್ ಸೆ ವಿಶ್ವಾಸ್:ವಿವಾದ್** ಸೇ **ವಿಶ್ವಾಸ್** ಯೋಜನೆಯಡಿ, ವಿವಾದಿತ ತೆರಿಗೆ ಪ್ರಕರಣಗಳನ್ನು ನೇರ ತೆರಿಗೆ ಪಾವತಿದಾರರು ಇತ್ಯರ್ಥಪಡಿಸಿಕೊಳ್ಳಬಹುದು. ಈ ಯೋಜನೆಯಡಿ, ತೆರಿಗೆದಾರರು ನಿಗದಿತ ಸಮಯಕ್ಕೂ ಮೊದಲು

ತೆರಿಗೆ ಪಾವತಿ ಮಾಡಿದರೆ, ವಿವಾದಿತ ಮೊತ್ತವನ್ನು ಮಾತ್ರ ಪಾವತಿಸಬೇಕು ಮತ್ತು ಬೇರೆ ಯಾವುದೇ ದಂಡ ಶುಲ್ಕವನ್ನು ಪಾವತಿಸುವ ಅಗತ್ಯ ಇರುವುದಿಲ್ಲ.

• **ಎಂಟಿಟಿ ಡಿಜಿಲಾಕರ್**: ಎಂಎಸ್‌ಎಂಇಗಳು, ದೊಡ್ಡ ವ್ಯಾಪಾರ ಮತ್ತು ಚಾರಿಟಬಲ್ ಟ್ರಸ್ಟ್‌ಗಳ ಬಳಕೆಗಾಗಿ ಎಂಟಿಟಿ ಡಿಜಿಲಾಕರ್ ಅನ್ನು ಸ್ಥಾಪಿಸಲಾಗುವುದು. ಇದು ವಿವಿಧ ಅಧಿಕಾರಿಗಳು, ನಿಯಂತ್ರಕರು, ಬ್ಯಾಂಕ್‌ಗಳು ಮತ್ತು ಇತರ ವ್ಯಾಪಾರ ಘಟಕಗಳೊಂದಿಗೆ ಅಗತ್ಯವಿದ್ದಾಗ ಡಾಕ್ಯುಮೆಂಟ್‌ಗಳನ್ನು ಆನ್‌ಲೈನ್‌ನಲ್ಲಿ ಸುರಕ್ಷಿತವಾಗಿ ಸಂಗ್ರಹಿಸುವುದು ಮತ್ತು ಹಂಚಿಕೊಳ್ಳುವುದು.

• **5G ಸೇವೆಗಳು**

• **ಲ್ಯಾಬ್ ಗ್ರೋನ್ ಡೈಮಂಡ್ಸ್:** ಇದು ತಂತ್ರಜ್ಞಾನ ಮತ್ತು ನಾವೀನ್ಯತೆ-ಚಾಲಿತ ಉದಯೋನ್ಮುಖ ವಲಯವಾಗಿದ್ದು, ಹೆಚ್ಚಿನ ಉದ್ಯೋಗ ಸಾಮರ್ಥ್ಯವನ್ನು ಹೊಂದಿದೆ. ಈ ಪರಿಸರ ಸ್ನೇಹಿ ವಜ್ರಗಳು ನೋಡಲು ಮತ್ತು ರಾಸಾಯನಿಕವಾಗಿ ನೈಸರ್ಗಿಕ ವಜ್ರಗಳಂತೆಯೇ ಗುಣಲಕ್ಷಣಗಳನ್ನು ಹೊಂದಿವೆ. LGD ಮತ್ತು ಯಂತ್ರಗಳ ಸ್ಥಳೀಯ ಉತ್ಪಾದನೆಯನ್ನು ಉತ್ತೇಜಿಸಲು ಮತ್ತು ಆಮದು ಅವಲಂಬನೆಯನ್ನು ಕಡಿಮೆ ಮಾಡಲು, ಐದು ವರ್ಷಗಳವರೆಗೆ IIT ಗಳಲ್ಲಿ ಒಂದಕ್ಕೆ ಸಂಶೋಧನೆ ಮತ್ತು ಅಭಿವೃದ್ಧಿ ಅನುದಾನವನ್ನು ಒದಗಿಸಲಾಗುತ್ತದೆ.

## *ಆದ್ಯತೆ 5: ಹಸಿರು ಬೆಳವಣಿಗೆ*

ಭಾರತವು 2070 ರ ವೇಳೆಗೆ ಹಸಿರು ಕೈಗಾರಿಕಾ ಮತ್ತು ಆರ್ಥಿಕ ಸ್ಥಿತ್ಯಂತರವನ್ನು **ಪ್ರಾರಂಭಿಸಲು 'ಪಂಚಾಮೃತ'** ಮತ್ತು **ನಿವ್ವಳ-ಶೂನ್ಯ ಇಂಗಾಲದ ಹೊರಸೂಸುವಿಕೆಗಾಗಿ** ದೃಢವಾಗಿ ಮುನ್ನಡೆಯುತ್ತಿದೆ.

• ಹಸಿರು ಹೈಡ್ರೋಜನ್ ಮಿಷನ್

•ಇಂಧನ ಪರಿವರ್ತನೆ

•ಇಂಧನ ಶೇಖರಣಾ ಯೋಜನೆಗಳು

• ನವೀಕರಿಸಬಹುದಾದ ಇಂಧನ ಸ್ಥಳಾಂತರಿಸುವಿಕೆ

• **ಗ್ರೀನ್ ಕ್ರೆಡಿಟ್ ಪ್ರೋಗ್ರಾಂ**: ವರ್ತನೆಯ ಬದಲಾವಣೆಯನ್ನು ಉತ್ತೇಜಿಸಲು, ಪರಿಸರ (ರಕ್ಷಣೆ) ಕಾಯಿದೆಯ ಅಡಿಯಲ್ಲಿ ಹಸಿರು ಕ್ರೆಡಿಟ್ ಕಾರ್ಯಕ್ರಮವನ್ನು ಸೂಚಿಸಲಾಗುವುದು. ಇದು ಕಂಪನಿಗಳು, ವ್ಯಕ್ತಿಗಳು ಮತ್ತು ಸ್ಥಳೀಯ ಸಂಸ್ಥೆಗಳಿಂದ ಪರಿಸರ ಸಮರ್ಥನೀಯ ಮತ್ತು ಸ್ಪಂದಿಸುವ ಕ್ರಮಗಳನ್ನು ಉತ್ತೇಜಿಸುತ್ತದೆ ಮತ್ತು ಅಂತಹ ಚಟುವಟಿಕೆಗಳಿಗೆ ಹೆಚ್ಚುವರಿ ಸಂಪನ್ಮೂಲಗಳನ್ನು ಸಜ್ಜುಗೊಳಿಸಲು ಸಹಾಯ ಮಾಡುತ್ತದೆ.

•**ಪಿಎಂ-ಪ್ರಣಾಮ್:** ಪರ್ಯಾಯ ರಸಗೊಬ್ಬರಗಳು ಮತ್ತು ರಸ ಗೊಬ್ಬರಗಳ ಸಮತೋಲಿತ ಬಳಕೆಯನ್ನು ಉತ್ತೇಜಿಸಲು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳನ್ನು ಉತ್ತೇಜಿಸಲು "ಭೂಮಾತೆಯ ಪುನರ್ ಸ್ಥಾಪನೆ, ಜಾಗೃತಿ, ಪೋಷಣೆ ಮತ್ತು ಸುಧಾರಣೆಗಾಗಿ ಪಿಎಂ-ಪ್ರಣಾಮ್" (ಪಿಎಂ-ಪ್ರಣಾಂ) ಅನ್ನು ಪ್ರಾರಂಭಿಸಲಾಗುವುದು.

• **ಗೋಬರ್ಧನ್ ಯೋಜನೆ:** ವೃತ್ತಾಕಾರದ ಆರ್ಥಿಕತೆಯನ್ನು ಉತ್ತೇಜಿಸಲು ಗೋಬರ್ಧನ್ (ಗಾಲ್ವನೈಸಿಂಗ್ ಆರ್ಗಾನಿಕ್ ಜೈವಿಕ-ಕೃಷಿ ಸಂಪನ್ಮೂಲಗಳ ಧನ್) ಯೋಜನೆಯಡಿಯಲ್ಲಿ 500 ಹೊಸ 'ವೇಸ್ಟ್ ಟು ವೆಲ್ತ್'

ಸ್ಥಾವರಗಳನ್ನು ಸ್ಥಾಪಿಸಲಾಗುವುದು. ಇವುಗಳಲ್ಲಿ 200 ಸಂಕುಚಿತ ಜೈವಿಕ ಅನಿಲ (CBG) ಸ್ಥಾವರಗಳು ಸೇರಿವೆ, ಇದರಲ್ಲಿ ನಗರ ಪ್ರದೇಶಗಳಲ್ಲಿ 75 ಸ್ಥಾವರಗಳು ಮತ್ತು 300 ಸಮುದಾಯ ಅಥವಾ ಕ್ಲಸ್ಟರ್ ಆಧಾರಿತ ಸಸ್ಯಗಳು ಒಟ್ಟು ₹ 10,000 ಕೋಟಿ ಹೂಡಿಕೆಯಲ್ಲಿ ಸೇರಿವೆ. ನೈಸರ್ಗಿಕ ಮತ್ತು ಜೈವಿಕ ಮಾರುಕಟ್ಟೆ ಮಾಡುವ ಎಲ್ಲಾ ಸಂಸ್ಥೆಗಳಿಗೆ 5 ಪ್ರತಿಶತ CBG ಆದೇಶವನ್ನು ಪರಿಚಯಿಸಲಾಗುತ್ತದೆ.

• ಭಾರತೀಯ ಪ್ರಕೃತಿಖೇತಿ ಜೈವಿಕ ಇನ್‌ಪುಟ್ ಸಂಪನ್ಮೂಲ ಕೇಂದ್ರಗಳು

## *ಆದ್ಯತೆ 6: ಯುವ ಶಕ್ತಿ*

• **ಪ್ರಧಾನ ಮಂತ್ರಿ ಕೌಶಲವಿಕಾಸ್ ಯೋಜನೆ 4.0**:ಮುಂದಿನ ಮೂರು ವರ್ಷಗಳಲ್ಲಿ ಲಕ್ಷಾಂತರ ಯುವಕರನ್ನು ಕೌಶಲ್ಯಗೊಳಿಸಲು. ಉದ್ಯೋಗದ ತರಬೇತಿ, ಉದ್ಯಮ ಪಾಲುದಾರಿಕೆ ಮತ್ತು ಉದ್ಯಮದ ಅಗತ್ಯತೆಗಳೊಂದಿಗೆ ಕೋರ್ಸ್‌ಗಳ ಜೋಡಣೆಗೆ ಒತ್ತು ನೀಡಲಾಗುವುದು. ಕೋಡಿಂಗ್, AI, ರೊಬೊಟಿಕ್ಸ್, ಮೆಕಾಟ್ರಾನಿಕ್ಸ್, IOT, 3D ಪ್ರಿಂಟಿಂಗ್, ಡ್ರೋನ್‌ಗಳು ಮತ್ತು ಸಾಫ್ಟ್ ಸ್ಕಿಲ್‌ಗಳಂತಹ ಉದ್ಯಮ 4.0 ಗಾಗಿ ಹೊಸ ವಯಸ್ಸಿನ ಕೋರ್ಸ್‌ಗಳನ್ನು ಈ ಯೋಜನೆಯು ಒಳಗೊಳ್ಳುತ್ತದೆ. ಅಂತರರಾಷ್ಟ್ರೀಯ ಅವಕಾಶಗಳಿಗಾಗಿ ಯುವಕರನ್ನು ಕೌಶಲ್ಯಗೊಳಿಸಲು, ವಿವಿಧ ರಾಜ್ಯಗಳಲ್ಲಿ 30 ಸ್ಕಿಲ್ ಇಂಡಿಯಾ ಅಂತರರಾಷ್ಟ್ರೀಯ ಕೇಂದ್ರಗಳನ್ನು ಸ್ಥಾಪಿಸಲಾಗುವುದು.

• ಸ್ಕಿಲ್ ಇಂಡಿಯಾ ಡಿಜಿಟಲ್ ಪ್ಲಾಟ್‌ಫಾರ್ಮ್

• ರಾಷ್ಟ್ರೀಯ ಅಪ್ರೆಂಟಿಸ್‌ಶಿಪ್ ಪ್ರಚಾರ ಯೋಜನೆ

• **ಪ್ರವಾಸೋದ್ಯಮ:** 50 ಹೊಸ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸಲಾಗುವುದು ಮತ್ತು ಪ್ರವಾಸಿಗರಿಗೆ ಮಾಹಿತಿ-ಚಾಲಿತ ಅಪ್ಲಿಕೇಶನ್ ಅನ್ನು ರಚಿಸಲಾಗುತ್ತದೆ ಅದು ಪ್ರವಾಸಿ ಸ್ನೇಹಿ ಮಾಹಿತಿಗಳಾದ ಭೌತಿಕ ಮತ್ತು ವರ್ಚುವಲ್ ಸಂಪರ್ಕ ಮತ್ತು ಪ್ರವಾಸಿ ಮಾರ್ಗದರ್ಶಿಗಳ ವಿವರಗಳನ್ನು ಒದಗಿಸುತ್ತದೆ.

ವೈಬ್ರೆಂಟ್ ವಿಲೇಜಸ್ ಕಾರ್ಯಕ್ರಮದಡಿಯಲ್ಲಿ, ಗಡಿ ಗ್ರಾಮಗಳಲ್ಲಿ ಪ್ರವಾಸೋದ್ಯಮ ಮೂಲಸೌಕರ್ಯ ಮತ್ತು ಸೌಕರ್ಯಗಳನ್ನು ಒದಗಿಸಲಾಗುವುದು.

o ಭೌಗೋಳಿಕ ಸೂಚನೆ (GI) ಸ್ಥಿತಿಯೊಂದಿಗೆ ಕರಕುಶಲ ಮತ್ತು ಉತ್ಪನ್ನಗಳನ್ನು ಪ್ರದರ್ಶಿಸಲು ರಾಜ್ಯ ರಾಜಧಾನಿಗಳಲ್ಲಿ ಏಕತಾ ಮಾಲ್‌ಗಳನ್ನು ಸ್ಥಾಪಿಸಲಾಗುವುದು.

## *ಆದ್ಯತೆ 7: ಹಣಕಾಸು ವಲಯ*

• MSMEಗಳಿಗೆ ಕ್ರೆಡಿಟ್ ಗ್ಯಾರಂಟಿ

• **ರಾಷ್ಟ್ರೀಯ ಹಣಕಾಸು ಮಾಹಿತಿ ನೋಂದಣಿ:** ಹಣಕಾಸು ಮತ್ತು ಪೂರಕ ಮಾಹಿತಿಯ ಕೇಂದ್ರ ಭಂಡಾರವಾಗಿ ಕಾರ್ಯನಿರ್ವಹಿಸಲು ಸ್ಥಾಪಿಸಲಾಗುವುದು. ಇದು ಸಾಲದ ಸಮರ್ಥ ಹರಿವನ್ನು ಸುಗಮಗೊಳಿಸುತ್ತದೆ, ಹಣಕಾಸಿನ ಸೇರ್ಪಡೆಯನ್ನು ಉತ್ತೇಜಿಸುತ್ತದೆ ಮತ್ತು ಆರ್ಥಿಕ ಸ್ಥಿರತೆಯನ್ನು ಉತ್ತೇಜಿಸುತ್ತದೆ. ಹೊಸ ಶಾಸಕಾಂಗ ಚೌಕಟ್ಟು ಈ ಕ್ರೆಡಿಟ್ ಸಾರ್ವಜನಿಕ ಮೂಲಸೌಕರ್ಯವನ್ನು ನಿಯಂತ್ರಿಸುತ್ತದೆ ಮತ್ತು ಇದನ್ನು RBI ಯೊಂದಿಗೆ ಸಮಾಲೋಚಿಸಿ ವಿನ್ಯಾಸಗೊಳಿಸಲಾಗುವುದು.

• ಹಣಕಾಸು ವಲಯದ ನಿಯಮಗಳು

• ಗಿಫ್ಟ್ ಐಎಫ್.ಎಸ್.ಸಿ ಯಲ್ಲಿ ವ್ಯಾಪಾರ ಚಟುವಟಿಕೆಗಳನ್ನು ಹೆಚ್ಚಿಸಲು, ಈ ಕೆಳಗಿನ ಕ್ರಮಗಳನ್ನು ಕೈಗೊಳ್ಳಬೇಕು.

• ಡೇಟಾ ರಾಯಭಾರ ಕಚೇರಿ

• ಬ್ಯಾಂಕಿಂಗ್ ವಲಯದಲ್ಲಿ ಆಡಳಿತ ಮತ್ತು ಹೂಡಿಕೆದಾರರ ರಕ್ಷಣೆಯನ್ನು ಸುಧಾರಿಸುವುದು

• ಸೆಕ್ಯುರಿಟೀಸ್ ಮಾರುಕಟ್ಟೆಯಲ್ಲಿ ಸಾಮರ್ಥ್ಯ ನಿರ್ಮಾಣ

• ಕೇಂದ್ರ ದತ್ತಾಂಶ ಸಂಸ್ಕರಣಾ ಕೇಂದ್ರ

• ಡಿಜಿಟಲ್ ಪಾವತಿಗಳು

• **ಮಹಿಳಾ ಸಮ್ಮಾನ್ ಉಳಿತಾಯ ಪ್ರಮಾಣಪತ್ರ:** ಒಂದು ಬಾರಿಯ ಹೊಸ ಸಣ್ಣ ಉಳಿತಾಯ ಯೋಜನೆ, ಮಹಿಳಾ ಸಮ್ಮಾನ್ ಉಳಿತಾಯ ಪ್ರಮಾಣಪತ್ರವನ್ನು ಮಾರ್ಚ್ 2025 ರವರೆಗೆ ಎರಡು ವರ್ಷಗಳ ಅವಧಿಗೆ ಲಭ್ಯವಾಗುವಂತೆ ಮಾಡಲಾಗುತ್ತದೆ. ಇದು ಮಹಿಳೆಯರು ಅಥವಾ ಹುಡುಗಿಯರ ಹೆಸರಿನಲ್ಲಿ ` 2 ಲಕ್ಷದವರೆಗೆ ಠೇವಣಿ ಸೌಲಭ್ಯವನ್ನು ನೀಡುತ್ತದೆ ಭಾಗಶಃ ಹಿಂತೆಗೆದುಕೊಳ್ಳುವ ಆಯ್ಕೆಯೊಂದಿಗೆ ಶೇಕಡಾ 7.5 ರ ಸ್ಥಿರ ಬಡ್ಡಿದರದಲ್ಲಿ 2 ವರ್ಷಗಳ ಅವಧಿ

• **ಹಿರಿಯ ನಾಗರಿಕರು:** ಹಿರಿಯ ನಾಗರಿಕರ ಉಳಿತಾಯ ಯೋಜನೆಗೆ ಗರಿಷ್ಠ ಠೇವಣಿ ಮಿತಿಯನ್ನು ` 15 ಲಕ್ಷದಿಂದ ` 30 ಲಕ್ಷಕ್ಕೆ ಹೆಚ್ಚಿಸಲಾಗುವುದು. ಮಾಸಿಕ ಆದಾಯ ಖಾತೆ ಯೋಜನೆಗೆ ಗರಿಷ್ಠ ಠೇವಣಿ ಮಿತಿಯನ್ನು ಏಕ ಖಾತೆಗೆ ` 4.5 ಲಕ್ಷದಿಂದ ` 9 ಲಕ್ಷಕ್ಕೆ ಹೆಚ್ಚಿಸಲಾಗುವುದು. ಜಂಟಿ ಖಾತೆಗೆ 9 ಲಕ್ಷದಿಂದ 15 ಲಕ್ಷ ರೂ.

• **ಹಣಕಾಸಿನ ನಿರ್ವಹಣೆ:** ರಾಜ್ಯಗಳಿಗೆ ಐವತ್ತು ವರ್ಷಗಳ ಬಡ್ಡಿ ರಹಿತ ಸಾಲ

**ಗಿಫ್ಟ್ ಐಎಫ್.ಎಸ್.ಸಿ**

- ಗಿಫ್ಟ್ ಐಎಫ್.ಎಸ್.ಸಿಯಲ್ಲಿ ವ್ಯಾಪಾರ ಚಟುವಟಿಕೆಗಳನ್ನು ಹೆಚ್ಚಿಸಲು, ಈ ಕೆಳಗಿನ ಕ್ರಮಗಳನ್ನು ಕೈಗೊಳ್ಳಬೇಕು.
- ದ್ವಂದ್ವ ನಿಯಂತ್ರಣವನ್ನು ತಪ್ಪಿಸಲು ಎಸ್‌ಇಝಡ್ ಕಾಯ್ದೆಯಡಿ ಐಎಫ್‌ಎಸ್ಸಿಎಗೆ ಅಧಿಕಾರಗಳನ್ನು ಹಂಚುವುದು.
- ಐಎಫ್‌ಎಸ್ಸಿಎ, ಎಸ್‌ಇಝಡ್ ಅಧಿಕಾರಿಗಳು, ಜಿಎಸ್ಟಿಎನ್, ಆರ್.ಬಿ.ಐ, ಸೆಬಿ ಮತ್ತು ಐಆರ್.ಡಿ.ಎಐನಿಂದ ನೋಂದಣಿ ಮತ್ತು ಅನುಮೋದನೆಗಾಗಿ ಏಕ ಗವಾಕ್ಷಿ ಐಟಿ ವ್ಯವಸ್ಥೆಯನ್ನು ಸ್ಥಾಪಿಸುವುದು.
- ವಿದೇಶಿ ಬ್ಯಾಂಕಿನ ಐಎಫ್‌ಎಸ್ಸಿ ಬ್ಯಾಂಕಿಂಗ್ ಘಟಕಗಳಿಂದ ಸ್ವಾಧೀನ ಹಣಕಾಸು ಒದಗಿಸಲು ಅನುಮತಿ.
    - ವ್ಯಾಪಾರ ಮರು ಹಣಕಾಸುಗಾಗಿ ಎಕ್ಸಿಮ್ ಬ್ಯಾಂಕಿನ ಅಂಗಸಂಸ್ಥೆಯನ್ನು ಸ್ಥಾಪಿಸುವುದು.
- ಮಧ್ಯಸ್ಥಿಕೆ, ಪೂರಕ ಸೇವೆಗಳಿಗೆ ಶಾಸನಬದ್ಧ ನಿಬಂಧನೆಗಳಿಗಾಗಿ ಐಎಫ್‌ಎಸ್.ಸಿ.ಎ ಕಾಯ್ದೆಗೆ ತಿದ್ದುಪಡಿ ತರುವುದು ಮತ್ತು ಎಸ್‌ಇಝಡ್ ಕಾಯ್ದೆಯಡಿ ದ್ವಿ ನಿಯಂತ್ರಣವನ್ನು ತಪ್ಪಿಸುವುದು

- ಕಡಲಾಚೆಯ ಉತ್ಪನ್ನ ಸಾಧನಗಳನ್ನು ಮಾನ್ಯ ಒಪ್ಪಂದಗಳಾಗಿ ಗುರುತಿಸುವುದು.
- ಬ್ಯಾಂಕ್ ಆಡಳಿತವನ್ನು ಸುಧಾರಿಸಲು ಮತ್ತು ಹೂಡಿಕೆದಾರರ ರಕ್ಷಣೆಯನ್ನು ಹೆಚ್ಚಿಸಲು ಬ್ಯಾಂಕಿಂಗ್ ನಿಯಂತ್ರಣ ಕಾಯ್ದೆ, ಬ್ಯಾಂಕಿಂಗ್ ಕಂಪನಿಗಳ ಕಾಯ್ದೆ ಮತ್ತು ಭಾರತೀಯ ರಿಸರ್ವ್ ಬ್ಯಾಂಕ್ ಕಾಯ್ದೆಗೆ ತಿದ್ದುಪಡಿಗಳನ್ನು ಪ್ರಸ್ತಾಪಿಸಲಾಗಿದೆ.
- ಡಿಜಿಟಲ್ ಮುಂದುವರಿಕೆ ಪರಿಹಾರಗಳನ್ನು ಹುಡುಕುತ್ತಿರುವ ದೇಶಗಳಿಗೆ ಗಿಫ್ಟ್ ಐಎಫ್‌ಎಸ್ಸಿಯಲ್ಲಿ ತಮ್ಮ ಡೇಟಾ ರಾಯಭಾರ ಕಚೇರಿಗಳನ್ನು ಸ್ಥಾಪಿಸಲು ಅನುಕೂಲ ಕಲ್ಪಿಸಲಾಗುವುದು.
- ಹೂಡಿಕೆದಾರರ ಶಿಕ್ಷಣ ಮತ್ತು ಸಂರಕ್ಷಣಾ ನಿಧಿ ಪ್ರಾಧಿಕಾರದಿಂದ ಕ್ಲೈಮ್ ಮಾಡದ ಷೇರುಗಳು ಮತ್ತು ಪಾವತಿಸದ ಲಾಭಾಂಶವನ್ನು ಸುಲಭವಾಗಿ ಮರುಪಡೆಯಲು ಹೂಡಿಕೆದಾರರಿಗೆ ಅನುವು ಮಾಡಿಕೊಡಲು ಸಮಗ್ರ ಐಟಿ ಪೋರ್ಟಲ್ ಅನ್ನು ಸ್ಥಾಪಿಸಲಾಗುವುದು.

## ಭಾಗ - ಬಿ

### *ಪರೋಕ್ಷ ತೆರಿಗೆಗಳು*

• ಪರೋಕ್ಷ ತೆರಿಗೆ ಪ್ರಸ್ತಾಪಗಳು ರಫ್ತುಗಳನ್ನು ಉತ್ತೇಜಿಸಲು, ದೇಶೀಯ ಉತ್ಪಾದನೆಯನ್ನು ಹೆಚ್ಚಿಸಲು, ದೇಶೀಯ ಮೌಲ್ಯವರ್ಧನೆಯನ್ನು ಹೆಚ್ಚಿಸಲು, ಹಸಿರು ಇಂಧನ ಮತ್ತು ಚಲನಶೀಲತೆಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿವೆ.

• ಕಡಿಮೆ ತೆರಿಗೆ ದರಗಳೊಂದಿಗೆ ಸರಳೀಕೃತ ತೆರಿಗೆ ರಚನೆಯು ಅನುಸರಣೆ ಹೊರೆಯನ್ನು ಕಡಿಮೆ ಮಾಡಲು ಮತ್ತು ತೆರಿಗೆ ಆಡಳಿತವನ್ನು ಸುಧಾರಿಸಲು ಸಹಾಯ ಮಾಡುತ್ತದೆ.

### ಹಸಿರು ಚಲನಶೀಲತೆ

• ಮಿಶ್ರಿತ ಸಂಕುಚಿತ ನೈಸರ್ಗಿಕ ಅನಿಲದ ಮೇಲಿನ ತೆರಿಗೆಗಳ ಕ್ಯಾಸ್ಕೇಡಿಂಗ್ ಅನ್ನು ತಪ್ಪಿಸಲು, ಅದರಲ್ಲಿರುವ GST-ಪಾವತಿಸಿದ ಸಂಕುಚಿತ ಜೈವಿಕ ಅನಿಲದ ಮೇಲಿನ ಅಬಕಾರಿ ಸುಂಕವನ್ನು ವಿನಾಯಿತಿ ನೀಡಲಾಗಿದೆ

• ಹಸಿರು ಚಲನಶೀಲತೆಗೆ ಮತ್ತಷ್ಟು ಉತ್ತೇಜನ ನೀಡಲು, ಎಲೆಕ್ಟ್ರಿಕ್ ವಾಹನಗಳಲ್ಲಿ ಬಳಸುವ ಬ್ಯಾಟರಿಗಳಿಗೆ ಲಿಥಿಯಂ-ಐಯಾನ್ ಕೋಶಗಳ ತಯಾರಿಕೆಗೆ ಅಗತ್ಯವಿರುವ ಬಂಡವಾಳ ಸರಕುಗಳು ಮತ್ತು ಯಂತ್ರೋಪಕರಣಗಳ ಆಮದುಗಳಿಗೆ ಕಸ್ಟಮ್ಸ್ ಸುಂಕ ವಿನಾಯಿತಿಯನ್ನು ವಿಸ್ತರಿಸಲಾಗುತ್ತಿದೆ.

### ಎಲೆಕ್ಟ್ರಾನಿಕ್ಸ್:

• ಕ್ಯಾಮೆರಾ ಲೆನ್ಸ್‌ನಂತಹ ಕೆಲವು ಭಾಗಗಳು ಮತ್ತು ಇನ್‌ಪುಟ್‌ಗಳ ಆಮದು ಮೇಲಿನ ಕಸ್ಟಮ್ಸ್ ಸುಂಕದಲ್ಲಿ ಪರಿಹಾರವನ್ನು ಒದಗಿಸಲಾಗಿದೆ ಮತ್ತು ಬ್ಯಾಟರಿಗಳಿಗಾಗಿ ಲಿಥಿಯಂ-ಐಯಾನ್ ಸೆಲ್‌ಗಳ ಮೇಲಿನ ರಿಯಾಯಿತಿ ಸುಂಕವನ್ನು ಇನ್ನೊಂದು ವರ್ಷಕ್ಕೆ ಮುಂದುವರಿಸಲಾಗುತ್ತದೆ

• ಟೆಲಿವಿಷನ್‌ಗಳ ತಯಾರಿಕೆಯಲ್ಲಿ ಮೌಲ್ಯವರ್ಧನೆಯನ್ನು ಉತ್ತೇಜಿಸಲು, ಟಿವಿ ಪ್ಯಾನಲ್‌ಗಳ ತೆರೆದ ಕೋಶಗಳ ಭಾಗಗಳ ಮೇಲಿನ ಮೂಲ ಕಸ್ಟಮ್ಸ್ ಸುಂಕವನ್ನು ಶೇಕಡಾ 2.5 ಕ್ಕೆ ಇಳಿಸಲಾಗಿದೆ.

**ವಿದ್ಯುತ್:**

•ಎಲೆಕ್ಟ್ರಿಕ್ ಅಡುಗೆ ಮನೆ ಚಿಮಣಿಗಳ ತಯಾರಿಕೆಗೆ ಶಾಖ ಕಾಯಿಲ್ ಮೇಲಿನ ಮೂಲ ಸೀಮಾ ಸುಂಕವನ್ನು ಶೇಕಡಾ 20 ರಿಂದ 15 ಕ್ಕೆ ಇಳಿಸಲಾಗಿದೆ.

**ರಾಸಾಯನಿಕಗಳು ಮತ್ತು ಪೆಟ್ರೋಕೆಮಿಕಲ್ಸ್:**

• ರಾಸಾಯನಿಕ ಉದ್ಯಮದಲ್ಲಿ ಬಳಸುವ ಡಿನಾಟರ್ಡ್ ಈಥೈಲ್ ಆಲ್ಕೋಹಾಲ್ ಅನ್ನು ಮೂಲ ಸೀಮಾ ಸುಂಕದಿಂದ ವಿನಾಯಿತಿ ನೀಡಲಾಗಿದೆ. ಇದು ಎಥೆನಾಲ್ ಬ್ಲೆಂಡಿಂಗ್ ಪ್ರೋಗ್ರಾಂ ಅನ್ನು ಸಹ ಬೆಂಬಲಿಸುತ್ತದೆ ಮತ್ತು ಶಕ್ತಿಯ ಪರಿವರ್ತನೆಯ ಪ್ರಯತ್ನವನ್ನು ಸುಗಮಗೊಳಿಸುತ್ತದೆ. ಆಸಿಡ್ ಗ್ರೇಡ್ ಫ್ಲೋಸ್ಪಾರ್ (ಶೇಕಡಾ 97 ಕ್ಕಿಂತ ಹೆಚ್ಚು ಕ್ಯಾಲ್ಸಿಯಂ ಫ್ಲೋರೈಡ್ ಹೊಂದಿರುವ) ಮೇಲಿನ ಮೂಲ ಸೀಮಾ ಸುಂಕವನ್ನು ಶೇಕಡಾ 5 ರಿಂದ 2.5 ಕ್ಕೆ ಇಳಿಸಲಾಗಿದೆ.

• ಎಪಿಕೋಲೋಹೈಡ್ರಿನ್ ತಯಾರಿಕೆಯಲ್ಲಿ ಬಳಸಲು ಕಚ್ಚಾ ಗ್ಲಿಸರಿನ್ ಮೇಲಿನ ಮೂಲ ಸೀಮಾ ಸುಂಕವನ್ನು ಶೇಕಡಾ 7.5 ರಿಂದ ಶೇಕಡಾ 2.5 ಕ್ಕೆ ಇಳಿಸಲಾಗಿದೆ.

**ಬೆಳ್ಳಿ, ಚಿನ್ನ ಮತ್ತು ವಜ್ರದ ಆಭರಣಗಳು**

•ಪ್ರಯೋಗಾಲಯದಲ್ಲಿ ಬೆಳೆದ ವಜ್ರಗಳ ತಯಾರಿಕೆಯಲ್ಲಿ ಬಳಸುವ ಸೀಡ್ ಗಳ ಮೇಲಿನ ಮೂಲ ಸೀಮಾ ಸುಂಕವನ್ನು ಕಡಿಮೆ ಮಾಡಲಾಗಿದೆ.

• ದೋರ್ ಮತ್ತು ಚಿನ್ನ ಮತ್ತು ಪ್ಲಾಟಿನಂ ಗಟ್ಟಿಗಳಿಂದ ತಯಾರಿಸಿದ ವಸ್ತುಗಳ ಮೇಲಿನ ಸುಂಕವನ್ನು ಹೆಚ್ಚಿಸಲಾಗಿದೆ.

• ಬೆಳ್ಳಿ ದೋರ್, ಬಾರ್ ಮತ್ತು ವಸ್ತುಗಳ ಮೇಲಿನ ಆಮದು ಸುಂಕವನ್ನು ಹೆಚ್ಚಿಸಲಾಗಿದೆ.

ಸಿಆರ್.ಜಿ.ಒ ಉಕ್ಕು, ಕಬ್ಬಿಣದ ಸ್ಕ್ರ್ಯಾಪ್ ಮತ್ತು ನಿಕ್ಕಲ್ ಕ್ಯಾಥೋಡ್ ತಯಾರಿಕೆಗೆ ಕಚ್ಚಾ ವಸ್ತುಗಳ ಮೇಲಿನ ಮೂಲ ಸೀಮಾ ಸುಂಕ ವಿನಾಯಿತಿ ಮುಂದುವರಿಕೆ.

• ತಾಮ್ರದ ಸ್ಕ್ರ್ಯಾಪ್ ಮೇಲೆ ಶೇಕಡಾ 2.5 ರಷ್ಟು ರಿಯಾಯಿತಿ ಬಿಸಿಡಿಯನ್ನು ಮುಂದುವರಿಸಲಾಗಿದೆ.

• ಸಂಯೋಜಿತ ರಬ್ಬರ್ ಮೇಲಿನ ಮೂಲ ಸೀಮಾ ಸುಂಕ ದರವನ್ನು ಪ್ರತಿ ಕೆ.ಜಿ.ಗೆ ಶೇ.10 ಅಥವಾ 30 ರಿಂದ ಶೇ.25 ಕ್ಕೆ ಹೆಚ್ಚಿಸಲಾಗಿದೆ.

**ಸಿಗರೇಟ್**

- ನಿರ್ದಿಷ್ಟ ಸಿಗರೇಟುಗಳ ಮೇಲಿನ ರಾಷ್ಟ್ರೀಯ ವಿಪತ್ತು ಅನಿಶ್ಚಿತ ಸುಂಕವನ್ನು (ಎನ್ ಸಿಸಿಡಿ) ಸುಮಾರು 16 ಪ್ರತಿಶತದಷ್ಟು ಪರಿಷ್ಕರಿಸಲಾಗಿದೆ.

NAMMAKPSC ACADEMY HEBBAL | VIJAYANAGAR Est: 2014 BREAKING BARRIERS TO GREATNESS

## *ಸೀಮಾಸುಂಕ ಕಾನೂನುಗಳಲ್ಲಿ ಶಾಸನಾತ್ಮಕ ಬದಲಾವಣೆ ಪ್ರಸ್ತಾಪ.*

- ಕಸ್ಟಮ್ಸ್ ಕಾಯ್ದೆ, 1962 ಕ್ಕೆ ತಿದ್ದುಪಡಿ ತಂದು ಸೆಟಲ್ಮೆಂಟ್ ಕಮಿಷನ್ ಅಂತಿಮ ಆದೇಶವನ್ನು ಹೊರಡಿಸಲು ಅರ್ಜಿ ಸಲ್ಲಿಸಿದ ದಿನಾಂಕದಿಂದ ಒಂಬತ್ತು ತಿಂಗಳ ಕಾಲಮಿತಿಯನ್ನು ನಿರ್ದಿಷ್ಟಪಡಿಸಲಾಗುವುದು.
- ಆಂಟಿ ಡಂಪಿಂಗ್ ಡ್ಯೂಟಿ (ಎಡಿಡಿ), ಕೌಂಟರ್ ವೇಯ್ಲಿಂಗ್ ಡ್ಯೂಟಿ (ಸಿವಿಡಿ) ಮತ್ತು ಸುರಕ್ಷತಾ ಕ್ರಮಗಳಿಗೆ ಸಂಬಂಧಿಸಿದ ನಿಬಂಧನೆಗಳ ಉದ್ದೇಶ ಮತ್ತು ವ್ಯಾಪ್ತಿಯನ್ನು ಸ್ಪಷ್ಟಪಡಿಸಲು ಸೀಮಾ ಸುಂಕ ಕಾಯ್ದೆಗೆ ತಿದ್ದುಪಡಿ ತರಲಾಗುವುದು.
- ಸಿಜಿಎಸ್ಟಿ ಕಾಯ್ದೆಗೆ ತಿದ್ದುಪಡಿ
- ಜಿಎಸ್ಟಿ ಅಡಿಯಲ್ಲಿ ಕಾನೂನು ಕ್ರಮವನ್ನು ಪ್ರಾರಂಭಿಸಲು ತೆರಿಗೆ ಮೊತ್ತದ ಕನಿಷ್ಠ ಮಿತಿಯನ್ನು ಒಂದು ಕೋಟಿಯಿಂದ ಎರಡು ಕೋಟಿಗೆ ಹೆಚ್ಚಿಸುವುದು;
- ತೆರಿಗೆ ಮೊತ್ತದ ಪ್ರಸ್ತುತ 50 ರಿಂದ 150 ಪ್ರತಿಶತ ವ್ಯಾಪ್ತಿಯಿಂದ 25 ರಿಂದ 100 ಪ್ರತಿಶತದವರೆಗೆ ಕಂಪೌಂಡಿಂಗ್ ಮೊತ್ತವನ್ನು ಕಡಿಮೆ ಮಾಡುವುದು;
- ಕೆಲವು ಅಪರಾಧಗಳನ್ನು ಅಪರಾಧಮುಕ್ತಗೊಳಿಸುವುದು;
- ಸಂಬಂಧಿತ ರಿಟರ್ನ್ / ಸ್ಟೇಟ್ಮೆಂಟ್ ಸಲ್ಲಿಸುವ ದಿನಾಂಕದಿಂದ ಗರಿಷ್ಠ ಮೂರು ವರ್ಷಗಳ ಅವಧಿಗೆ ರಿಟರ್ನ್ಸ್ / ಸ್ಟೇಟ್ಮೆಂಟ್ ಗಳನ್ನು ಸಲ್ಲಿಸುವುದನ್ನು ನಿರ್ಬಂಧಿಸುವುದು; ಮತ್ತು
- ನೋಂದಾಯಿಸದ ಪೂರೈಕೆದಾರರು ಮತ್ತು ಸಂಯೋಜಿತ ತೆರಿಗೆದಾರರು ಇ-ಕಾಮರ್ಸ್ ಆಪರೇಟರ್ ಗಳ (ಇಸಿಓ) ಮೂಲಕ ಸರಕುಗಳ ಅಂತಾ-ರಾಜ್ಯ ಪೂರೈಕೆಯನ್ನು ಮಾಡಲು ಅನುವು ಮಾಡಿಕೊಡುವುದು.

## *ನೇರ ತೆರಿಗೆಗಳು*

### MSMEಗಳು ಮತ್ತು ವೃತ್ತಿಪರರು

• MSMEಗಳು ನಮ್ಮ ಆರ್ಥಿಕತೆಯ ಬೆಳವಣಿಗೆಯ ಎಂಜಿನ್‌ಗಳಾಗಿವೆ. ` 2 ಕೋಟಿ ವರೆಗಿನ ವಹಿವಾಟು ಹೊಂದಿರುವ ಸೂಕ್ಷ್ಮ ಉದ್ಯಮಗಳು ಮತ್ತು ` 50 ಲಕ್ಷದವರೆಗಿನ ವಹಿವಾಟು ಹೊಂದಿರುವ ಕೆಲವು ವೃತ್ತಿಪರರು ಊಹೆಯ ತೆರಿಗೆಯ ಲಾಭವನ್ನು ಪಡೆಯಬಹುದು. ಇದು ತೆರಿಗೆ ಪಾವತಿದಾರರಿಗೆ ಕ್ರಮವಾಗಿ ₹ 3 ಕೋಟಿ ಮತ್ತು ` 75 ಲಕ್ಷಗಳ ವರ್ಧಿತ ಮಿತಿಗಳಿಗೆ ಒದಗಿಸಲಾಗಿದೆ, ಅವರ ನಗದು ರಸೀದಿಗಳು 5 ಕ್ಕಿಂತ ಹೆಚ್ಚಿಲ್ಲ

### ಸಹಕಾರ

• 31.3.2024 ರವರೆಗೆ ಉತ್ಪಾದನಾ ಚಟುವಟಿಕೆಗಳನ್ನು ಪ್ರಾರಂಭಿಸುವ ಹೊಸ ಸಹಕಾರಿ ಸಂಸ್ಥೆಗಳು ಪ್ರಸ್ತುತ ಹೊಸ ಉತ್ಪಾದನಾ ಕಂಪನಿಗಳಿಗೆ ಲಭ್ಯವಿರುವ ಶೇಕಡಾ 15 ರಷ್ಟು ಕಡಿಮೆ ತೆರಿಗೆ ದರದ ಪ್ರಯೋಜನವನ್ನು ಪಡೆಯುತ್ತವೆ.

• ಸಕ್ಕರೆ ಸಹಕಾರ ಸಂಘಗಳಿಗೆ 2016-17ನೇ ಸಾಲಿಗೆ ಮುಂಚಿತವಾದ ಅವಧಿಗೆ ಕಬ್ಬು ಬೆಳೆಗಾರರಿಗೆ ಮಾಡಿದ ಪಾವತಿಯನ್ನು ವೆಚ್ಚವಾಗಿ ಕ್ಲೈಮ್ ಮಾಡಲು ಅವಕಾಶವನ್ನು ಒದಗಿಸಲಾಗಿದೆ. ಇದು ಅವರಿಗೆ ಸುಮಾರು 10,000 ಕೋಟಿ ರೂ.ಗಳ ಪರಿಹಾರವನ್ನು ನೀಡಲಾಗುತ್ತದೆ ಎಂದು ನಿರೀಕ್ಷಿಸಲಾಗಿದೆ.

• ಪ್ರಾಥಮಿಕ ಕೃಷಿ ಸಹಕಾರ ಸಂಘಗಳು (ಪಿಎಸಿಎಸ್) ಮತ್ತು ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕುಗಳು (ಪಿಸಿಎಆರ್.ಡಿ.ಬಿಗಳು) ನಗದು ಠೇವಣಿ ಮತ್ತು ಸಾಲಗಳಿಗೆ ಪ್ರತಿ ಸದಸ್ಯರಿಗೆ 2 ಲಕ್ಷ ರೂ.ಗಳ ಹೆಚ್ಚಿನ ಮಿತಿಯನ್ನು ಒದಗಿಸುವುದು.

• ಸಹಕಾರ ಸಂಘಗಳಿಗೆ ನಗದು ಹಿಂಪಡೆಯುವಿಕೆಯ ಮೇಲಿನ ಟಿಡಿಎಸ್ ಗೆ 3 ಕೋಟಿ ರೂ.ಗಳ ಹೆಚ್ಚಿನ ಮಿತಿಯನ್ನು ಒದಗಿಸಲಾಗುವುದು.

***ಹಣಕಾಸು ಮಸೂದೆಯಲ್ಲಿನ ಇತರ ಪ್ರಮುಖ ಪ್ರಸ್ತಾಪಗಳು ಈ ಕೆಳಗಿನವುಗಳಿಗೆ ಸಂಬಂಧಿಸಿವೆ:***

•ಐಎಫ್ಎಸ್ಸಿ, ಗಿಫ್ಟ್ ಸಿಟಿಗೆ ಸ್ಥಳಾಂತರಗೊಳ್ಳುವ ನಿಧಿಗಳಿಗೆ ತೆರಿಗೆ ಪ್ರಯೋಜನಗಳ ಅವಧಿಯನ್ನು 31.03.2025 ರವರೆಗೆ ವಿಸ್ತರಿಸಲಾಗಿದೆ.




•ಆದಾಯ ತೆರಿಗೆ ಕಾಯ್ದೆಯ ಸೆಕ್ಷನ್ 276 ಎ ಅಡಿಯಲ್ಲಿ ಲಿಕ್ವಿಡೇಟರ್ ಗಳನ್ನು ಕೈಬಿಡುವ ಕೆಲವು ಕೃತ್ಯಗಳನ್ನು 2023 ರ ಏಪ್ರಿಲ್ 1 ರಿಂದ ಜಾರಿಗೆ ಬರುವಂತೆ ಅಪರಾಧಮುಕ್ತಗೊಳಿಸಲಾಗುವುದು.

• ಐಡಿಬಿಐ ಬ್ಯಾಂಕ್ ಸೇರಿದಂತೆ ವ್ಯೂಹಾತ್ಮಕ ಬಂಡವಾಳ ಹಿಂತೆಗೆತದ ನಷ್ಟವನ್ನು ಮುಂದುವರಿಸಲಾಗುವುದು.

•ಅಗ್ನಿವೀರ್ ನಿಧಿಗೆ ಇಇಇ ಸ್ಥಾನಮಾನ ನೀಡಲಾಗುವುದು. ಅಗ್ನಿಪಥ್ ಯೋಜನೆ, 2022 ರಲ್ಲಿ ದಾಖಲಾದ ಅಗ್ನಿವೀರರುಳು ಅಗ್ನಿವೀರ್ ಕಾಪು ನಿಧಿಯಿಂದ ಪಡೆದ ಪಾವತಿಯನ್ನು ತೆರಿಗೆಯಿಂದ ವಿನಾಯಿತಿ ನೀಡಲು ಪ್ರಸ್ತಾಪಿಸಲಾಗಿದೆ. ಅಗ್ನಿವೀರ್ ಅವರ ಸೇವಾ ನಿಧಿ ಖಾತೆಗೆ ಅವರು ಅಥವಾ ಕೇಂದ್ರ ಸರ್ಕಾರ ನೀಡಿದ ಕೊಡುಗೆಯ ಮೇಲೆ ಒಟ್ಟು ಆದಾಯದ ಲೆಕ್ಕಾಚಾರದಲ್ಲಿ ಕಡಿತವನ್ನು ಅನುಮತಿಸಲು ಪ್ರಸ್ತಾಪಿಸಲಾಗಿದೆ.

## ಹೊಸ ತೆರಿಗೆ ಪದ್ಧತಿ

• ವರ್ಷಕ್ಕೆ ರೂ.7 ಲಕ್ಷದವರೆಗೆ ಗಳಿಸುವವರು ಹೊಸ ತೆರಿಗೆ ಪದ್ಧತಿಯ ಅಡಿಯಲ್ಲಿ ಯಾವುದೇ ಆದಾಯ ತೆರಿಗೆಯನ್ನು ಪಾವತಿಸಬೇಕಾಗಿಲ್ಲ ಎಂದು ಘೋಷಿಸಲಾಯಿತು, ಇದು ಹೂಡಿಕೆಗಳ ಮೇಲಿನ ಎಲ್ಲಾ ವಿನಾಯಿತಿಗಳನ್ನು ಅನುಮತಿಸದ ಆಡಳಿತಕ್ಕೆ ತಳ್ಳುತ್ತದೆ.

## ಹೊಸ ತೆರಿಗೆ ದರಗಳು:

| ಒಟ್ಟು ಆದಾಯ (ರೂ) | ದರ (ಶೇ.) |
|---|---|
| 3,00,000ವರೆಗೆ | ಏನೂ ಇಲ್ಲ |
| 3,00,001 ರಿಂದ 6,00,000ವರೆಗೆ | 5 |
| 6,00,001 ರಿಂದ 9,00,000 ವರೆಗೆ | 10 |
| 9,00,001 ರಿಂದ 12,00,000 ವರೆಗೆ | 15 |
| 12,00,001 ರಿಂದ 15,00,000 ವರೆಗೆ | 20 |
| 15,00,000 ಮೇಲ್ಪಟ್ಟು | 30 |

• ತೆರಿಗೆದಾರರು ಇನ್ನೂ ಹಳೆಯ ಆಡಳಿತದ ಅಡಿಯಲ್ಲಿ ಫೈಲ್ ಮಾಡಲು ಆಯ್ಕೆ ಮಾಡಬಹುದು, ಅದು ತೆರಿಗೆ ವಿನಾಯಿತಿಗಳು ಮತ್ತು ಹೂಡಿಕೆಗಳ ಮೇಲಿನ ಕಡಿತಗಳು ಮತ್ತು HRA (ಮನೆ ಬಾಡಿಗೆ ಭತ್ಯೆ) ದಂತಹ ವೆಚ್ಚಗಳಿಗೆ ಅವಕಾಶ ನೀಡುತ್ತದೆ.

•ಹೊಸ ತೆರಿಗೆ ವ್ಯವಸ್ಥೆಯಲ್ಲಿ ಸಂಬಳ ಪಡೆಯುವ ವ್ಯಕ್ತಿಗೆ 50,000 ರೂ.ಗಳ ಸ್ಟ್ಯಾಂಡರ್ಡ್ ಡಿಡಕ್ಷನ್ ಮತ್ತು ಕುಟುಂಬ ಪಿಂಚಣಿಯಿಂದ 15,000 ರೂ.ಗಳವರೆಗೆ ಕಡಿತದ ಪ್ರಯೋಜನವನ್ನು ವಿಸ್ತರಿಸುವ ಪ್ರಸ್ತಾಪ.

• ನಮ್ಮ ದೇಶದಲ್ಲಿ ಶೇಕಡಾ 42.74 ರಷ್ಟಿರುವ ಅತ್ಯಧಿಕ ತೆರಿಗೆ ದರದ ಬಗ್ಗೆ. ಇದು ವಿಶ್ವದಲ್ಲೇ ಅತಿ ಹೆಚ್ಚು. ಬಜೆಟ್ ಅತ್ಯಧಿಕ ಸರ್ಚಾರ್ಜ್ ದರವನ್ನು 37 ರಿಂದ ಕಡಿಮೆ ಮಾಡುತ್ತದೆ

ಹೊಸ ತೆರಿಗೆ ವ್ಯವಸ್ಥೆಯಲ್ಲಿ ಗರಿಷ್ಠ ಉಪಕರ ದರವನ್ನು ಶೇಕಡಾ 37 ರಿಂದ 25 ಕ್ಕೆ ಇಳಿಸಲಾಗುವುದು. ಇದು ಗರಿಷ್ಠ ವೈಯಕ್ತಿಕ ಆದಾಯ ತೆರಿಗೆ ದರವನ್ನು ಶೇಕಡಾ 39 ಕ್ಕೆ ಇಳಿಸಲು ಕಾರಣವಾಗುತ್ತದೆ.